ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 137 ಸಂಚಿಕೆ- 137 | PAGE-8 ಪುಟ-8 | ಬುಧುವಾರ 09.07.2025 | RS.2/- ಬೆಲೆ 2/-

## 500 ಕೋಟಿ ತಲುಪಿದ ಶಕ್ತಿ ಯೋಜನೆ






ಮಲ್ಲಮ್ಮನುಡಿವಾರ್ತೆಬೆಂಗಳೂರು:ಜು.8: ಕಾಂಗ್ರೆಸ್‌ನ ಶಕ್ತಿ ಯೋಜನೆಯ ಪರಿಣಾಮದಿಂದಾಗಿಎರಡೇವರ್ಷದಲ್ಲಿ ಉಚಿತ ಬಸ್‌ಗಳಲ್ಲಿ ಪ್ರಯಾಣಿಸಿದ ಮಹಿಳೆಯರ ಸಂಖ್ಯೆ ಒಟ್ಟು 500 ಕೋಟಿಗೆ ತಲುಪಲಿದ್ದು, ಆ 500ನೇ ಟಿಕೆಟ್ ಪಡೆಯಲಿರುವ ಮಹಿಳೆಗೆ ಲಕ್ಕಿ ಬಹುಮಾನ ಸಿಗಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ತಿಳಿಸಿದ್ದಾರೆ.

2023ರ ಕರ್ನಾಟಕ ವಿಧಾನಸಭಾ ಚುನಾವಣೆಗೂ ಮುನ್ನ ಕಾಂಗ್ರೆಸ್ ಸರ್ಕಾರ ನೀಡಿದ ಭರವಸೆಯಂತೆ ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಜಾರಿಯಾಗಿವೆ. ಈ ಗ್ಯಾರಂಟಿಗಳಲ್ಲಿ ಒಂದಾದ ಶಕ್ತಿ ಯೋಜನೆಗೆಮಹಿಳೆಯರಿಂದಭರ್ಜರಿ ರೆಸ್ಪಾನ್ಸ್ ದೊರೆತಿದ್ದು, ಇದೀಗ ಶಕ್ತಿ ಯೋಜನೆ ಹೊಸ ಮೈಲುಗಲ್ಲು ಬರೆಯಲು ಮುಂದಾಗಿದೆ.

ಶಕ್ತಿ ಯೋಜನೆ ಜಾರಿಯಾದ ಎರಡೇ ವರ್ಷದಲ್ಲಿ 500 ಕೋಟಿ ಮಹಿಳೆಯರು ಸರ್ಕಾರಿ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಿ ದಾಖಲೆ ಬರೆಯಲಿದ್ದಾರೆ. 2023ರ ಜೂನ್ 11ರಂದುಆರಂಭವಾಗಿದ್ದಈಯೋಜನೆಗೆ ಮಹಿಳೆಯರುಬಹುಪರಾಕ್ ಎಂದಿದ್ದು, ಕೆಎಸ್‌ಆರ್‌ಟಿಸಿ ಸೇರಿದಂತೆ ನಾಲ್ಕು ಸಾರಿಗೆ ನಿಗಮಗಳ ಬಸ್‌ಗಳಲ್ಲಿ ಸೋಮವಾರಕ್ಕೆ ಬರೋಬ್ಬರಿ 493 ಕೋಟಿ ಮಹಿಳಾ ಪ್ರಯಾಣಿಕರು ಒಂದು ರೂಪಾಯಿ ಹಣ ನೀಡದೆ ಉಚಿತವಾಗಿ ಪ್ರಯಾಣಿಸಿದ್ದಾರೆ.

ಪ್ರತಿದಿನ ನಾಲ್ಕು ಸಾರಿಗೆ ನಿಗಮದ ಬಸ್‌ಗಳಲ್ಲಿ 70 ರಿಂದ 75 ಲಕ್ಷ ಮಹಿಳೆಯರು ಫ್ರೀಯಾಗಿ ಸಂಚರಿಸುತ್ತಿದ್ದಾರೆ.ಭಾನುವಾರದವರೆಗಿನ ಅಂಕಿಅಂಶಗಳನ್ನುನೋಡುವುದಾದರೆ ಸುಮಾರು 494 ಕೋಟಿಯಷ್ಟು ಮಹಿಳೆಯರು ಸಂಚರಿಸಿದ್ದು, 12,511 ಕೋಟಿ ರೂ. ಟಿಕೆಟ್ ಮೌಲ್ಯವಾಗಿದೆ. ಬರುವ ಸೋಮವಾರಕ್ಕೆ ಶಕ್ತಿ ಯೋಜನೆ 500 ಕೋಟಿ ಮಹಿಳೆಯರ ಉಚಿತ ಪ್ರಯಾಣದ ಗುರಿ ತಲುಪಿ, ರಾಜ್ಯ ಸಾರಿಗೆ ಇಲಾಖೆಯ ಇತಿಹಾಸದಲ್ಲೇ ಹೊಸ ರೆರ್ಕಾಡ್ ನಿರ್ಮಿಸಲಿದೆ.

ಇನ್ನೂ ಈ 500 ಕೋಟಿಯ ಸಂಭ್ರಮಾಚರಣೆಯನ್ನು ಅದ್ದೂ-ರಿಯಾಗಿ ಆಚರಿಸಲು ಸಾರಿಗೆ ಇಲಾಖೆ

(2ನೇ ಪುಟ ನೋಡಿ)

## ಅಂತರ್ ರಾಜ್ಯ ದರೋಡೆಕೋರರ ಬಂಧನ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಜು.8: ಜಿಲ್ಲೆಯ ಶಹಾಬಾದ್ ಪಟ್ಟಣದ ಧಕ್ಕಾ ತಾಂಡಾದಲ್ಲಿ ಕಳೆದ ಜೂನ್ 22ರಂದು ರಾತ್ರಿ 1-30ರ ಸುಮಾರಿಗೆ ಹಣಮಂತ ತಂದೆ ಪಾಂಡು ಪವಾರ್ ಅವರ ಮನೆಯೊಳಗೆ ಐವರು ಯಾ-ರೋ ದರೋಡೆಕೋರರು ನುಗ್ಗಿ ಮನೆಯವರಿಗೆ ಸೀರೆಯಿಂದ ಕೈಕಾಲುಗಳನ್ನು ಕಟ್ಟಿ ಹಾಕಿ ಚಾಕು, ಖಡ್ಗಗಳನ್ನು ತೋರಿಸಿ ಹೆದರಿಸಿ ಸುಮಾರು 15,26,500ರೂ.ಗಳ ಮೌಲ್ಯದಚಿನ್ನಾಭರಣದೋಚಿಕೊಂಡು ಹೋದ ಪ್ರಕರಣಕ್ಕೆಸಂಬಂಧಿಸಿದಂತೆ ಶ್ವಾನದಳದ ನೆರವಿನಿಂದ ಶಹಾಬಾದ್ ನಗರ ಠಾಣೆಯ ಪೋಲಿಸರು ನಾಲ್ವರನ್ನುಬಂಧಿಸಿದ್ದು, ಇನ್ನೊಬ್ಬ ಆರೋಪಿಯ ಪತ್ತೆ ಕಾರ್ಯಾಚರಣೆ ಮುಂದುವರೆದಿದೆ ಎಂದು ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಅವರು ಹೇಳಿದರು.

ನಗರದ ಪೋಲಿಸ್ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಿಐ ನಟ

(2ನೇ ಪುಟ ನೋಡಿ)

## ದ್ವಿಚಕ್ರವಾಹನ ಕಳ್ಳರ ಸೆರೆ: 29 ಮೋಟಾರ್ ಸೈಕಲ್ ಜಪ್ತಿ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜು.8:ಜಿಲ್ಲೆಯ ವಿವಿಧೆಡೆ ದ್ವಿಚಕ್ರವಾಹನಗಳನ್ನು ಕಳ್ಳತನ ಮಾಡಿಕಡಿಮೆ ಬೆಲೆಯಲ್ಲಿ ಮಾರಾಟ ಮಾಡುತ್ತಿದ್ದ ಸಂದರ್ಭದಲ್ಲಿಪೋಲಿಸರ ಕಾರ್ಯಾಚರಣೆಯಲ್ಲಿ ಮೂವರು ಕಳ್ಳರನ್ನು ಬಂಧಿಸಲಾಗಿದ್ದು, ಸುಮಾರು5.41ಲಕ್ಷರೂ.ಗಳ ಮೌಲ್ಯದ 29 ಮೋಟಾರ್ ಸೈಕಲ್ಲುಗಳನ್ನುವಶ ಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಅವರುಹೇಳಿದರು.ಪೋಲಿಸ್‌ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದ್ವಿಚಕ್ರವಾಹನಗಳ ಕಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ ಬೆನಕಿಪಳ್ಳಿಯ ಶ್ರೀಕಾಂತ್ ತಂದೆ ಗಣಪತಿ ಭೂತಾಳೆ(27),ಯಲ್ಮಾಡಿಯ ಬಸಯ್ಯ ತಂದೆ ರಾಚಯ್ಯಸ್ವಾಮಿ (44) ಹಾಗೂ ನಗರದ ಆರ್.ಜಿ. ನಗರದ ನಿವಾಸಿ ಅಭಿನಂದನ್ ತಂದೆ ಜೈಭಾರತ ಕಾಂಬಳೆ ಎಂಬುವವರನ್ನು ಬಂಧಿಸಲಾಗಿದೆ ಎಂದರು.

ಬಂಧಿತರಿಂದ29ದ್ವಿಚಕ್ರವಾಹನಗಳನ್ನು ವಶಪಡಿಸಿಕೊಂಡಿದ್ದು,

(2ನೇ ಪುಟ ನೋಡಿ)

## ಅನಧಿಕೃತವಾಗಿ ನಡೆಸುತ್ತಿರುವ ಶಾಲೆ/ಕೋಚಿಂಗ್ ಸೆಂಟರ್ ವಸತಿ ಮನೆ ಪಾಠಗಳು ನಿಲ್ಲಿಸಲು ಆದೇಶ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ:ಜು.8:ಕಮಲನಗರ ತಾಲೂಕಿನಲ್ಲಿ ಅನಧಿಕೃತವಾಗಿ ನಡೆಸುತ್ತಿರುವ ಶಾಲೆ/ಕೋಚಿಂಗ್ ಸೆಂಟರ್ ವಸತಿ ಮನೆ ಪಾಠಗಳು ನಿಲ್ಲಿಸಲು ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರಶಿಕ್ಷಣಾಧಿಕಾರಿಗಳಕಾರ್ಯಾಲಯ ಔರಾದ(ಬಾ) ಮಂಗಳವಾರ ಕೋಚಿಂಗ ಕೇಂದ್ರಗಳಿಗೆ ಭೇಟಿ ನೀಡಿ ಆದೇಶ ಜಾರಿಗೊಳಿಸಿದೆ.

ಔರಾದ(ಬಾ) ಹಾಗೂ ಕಮಲನಗರ ತಾಲ್ಲೂಕಿನಲ್ಲಿಅನಧಿಕೃತವಾಗಿಕೋಚಿಂಗ್ :ಸೆಂಟರ್‌ಗಳು ಶಾಲಾ ಅವಧಿಯಲ್ಲಿ ನಡೆಸುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಶಾಲಾ ಮಕ್ಕಳನ್ನು ಒಂದು ಅಸಮರ್ಪಕ ಕೋಣೆಯಲ್ಲಿ ಕೂಡಿಹಾಕಿದ್ದು ಇದಕ್ಕೆ ಸಂಬಂಧಿಸಿದಂತೆ ನೋಟಿಸ್ ಜಾರಿ ಮಾಡಿದರೂ ಸಹ ಇಲ್ಲಿಯವರೆಗೆ ತಾವು ನಿರಂತರವಾಗಿ ಆನಧಿಕೃತ ಶಾಲೆ/ಕೋಚಿಂಗ್ ಸೆಂಟರ್/ವಸತಿ ಮನೆ ಪಾಠಗಳು ನಡೆಸುತ್ತಿರುವ ಬಗ್ಗೆ ಮಾಹಿತಿ ಬಂದಿತ್ತು ಈ

(2ನೇ ಪುಟ ನೋಡಿ)

## ಹೆಚ್ಚಿದ ಹೃದಯಾಘಾತ: ಅಧ್ಯಯನಕ್ಕೆ ಸಮಿತಿ ರಚನೆ



ಕಲಬುರಗಿ:ಜು.8:ಹೃದಯಾಘಾತದಿಂದ ಹಾಸನದಲ್ಲಿಹೆಚ್ಚುಸಾವುಸಂಭವಿಸುತ್ತಿದ್ದು, ಈ ಬಗ್ಗೆ ತನಿಖೆ ನಡೆಸಲು ಸಮಿತಿ ರಚನೆ ಮಾಡಲಾಗಿದೆ. ಸಮಿತಿಯ ವರದಿ ಬಂದ ಬಳಿಕವೇ ಎಲ್ಲವೂ ಗೊತ್ತಾಗಲಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ ಮತ್ತು ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೃದಯಾಘಾತದಿಂದಾಗಿ ಸಾವಿನ ಪ್ರಮಾಣ ಹೆಚ್ಚಾಗುತ್ತಿರುವ ಕುರಿತು ಅನಗತ್ಯ ಗೊಂದಲ ಸೃಷ್ಟಿಸುವುದು ಬೇಡ ಎಂದರಲ್ಲದೆ, ಈ ನಿಟ್ಟಿನಲ್ಲಿ ಸಮಿತಿಯ ವರದಿ ಬಂದ ಬಳಿಕವೇ ತಾವು ಅಧಿಕೃತವಾಗಿ ಮಾತನಾಡುವುದು ಸರಿ ಎನಿಸುತ್ತದೆ ಎಂದರು.

ಮುಖ್ಯಮಂತ್ರಿ ಬದಲಾವಣೆ ಹಾಗೂ 50-50 ಒಪ್ಪಂದ ಚರ್ಚೆ ಆಗಿರುವುದರ ಕುರಿತು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಒಪ್ಪಂದದ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ. ಆ ಬಗ್ಗೆ ತಾವು ಮಾತನಾಡುವುದಿಲ್ಲ ಎಂದು ನುಡಿದರು. ರಾಜ್ಯದ ಜನತೆಗೆ ಐದು ಗ್ಯಾರಂಟಿಗಳನ್ನು ಕೊಟ್ಟು ಅವುಗಳನ್ನು ಅಕ್ಷರಶಃ ಅನುಷ್ಠಾನಕ್ಕೆ ತರಲಾಗಿದೆ. ಈ ಗ್ಯಾರಂಟಿಗಳ ಬದಲಾವಣೆ ಪ್ರಶ್ನೆಯೇ ಇಲ್ಲ ಎಂದು ಅವರು ಮತ್ತೊಮ್ಮೆ ಸ್ಪಷ್ಟಪಡಿಸಿದರು.

ನಮ್ಮ ಸರ್ಕಾರ ಐದು ವರ್ಷ ಇರುತ್ತದೆ. ಅದರಲ್ಲಿ ಯಾವುದೇ ಅನುಮಾನ ಬೇಡ. ಈ ಐದು ವರ್ಷಗಳವರೆಗೆ ನಾವು ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಇರುತ್ತವೆ ಎಂದು ಒತ್ತಿ ಹೇಳಿದರು.

ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ. ಶಾಸಕರ ಕ್ಷೇತ್ರಗಳಿಗೆ ಅನುದಾನ ಬರದಿರುವ ಕುರಿತು ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಎಲ್ಲರ ಕ್ಷೇತ್ರಗಳಿಗೂ ಅನುದಾನ ಹಂಚಿಕೆ ಆಗುತ್ತಿದೆ. ಕಲ್ಯಾಣ ಕರ್ನಾಟಕ ಭಾಗ ಸೇರಿ ಎಲ್ಲಾ ಕಡೆ ಅಭಿವೃದ್ಧಿ ಕೆಲಸಗಳು ನಡೆಯುತ್ತಲೇ ಇವೆ. ಗ್ಯಾರಂಟಿಗಳನ್ನು ಕೊಟ್ಟಾಗ್ಯೂ ಅಭಿವೃದ್ಧಿ ಕೆಲಸಗಳನ್ನು ಮಾಡಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂಬ ಬಿಜೆಪಿ ನಾಯಕರ ಆರೋಪಕ್ಕೆ ತಿರುಗೇಟು ನೀಡಿದ ಡಾ.ಪಾಟೀಲ್, ಅವರು ತಮ್ಮ ಅವಧಿಯಲ್ಲಿ ತಾವುಗಳು ಮಾಡಿದ ಭ್ರಷ್ಟಾಚಾರ ಕುರಿತು ಹೇಳುತ್ತಿರಬಹುದು ಎಂದು ಟಾಂಗ್ ನೀಡಿದರು.

ನಾವು ಜನಪರ ಕೆಲಸ ಕೆಲಸಗಳನ್ನು ಮಾಡುತ್ತಿದ್ದೇವೆಯೇ ಹೊರತು; ಭ್ರಷ್ಟಾಚಾರ ಮಾಡುತ್ತಿಲ್ಲ ಎಂದು ನುಡಿದರು.

## ಹೃದಯಾಘಾತ ಕುರಿತು ಎಚ್ಚರಿಕೆ, ಜಾಗೃತಿ ಮೂಡಿಸಿ:ಸಂಸದ ಸಾಗರ ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ ಬೀದರ. ಜು.08:ಒತ್ತಡದ ಬದುಕು,ಬದಲಾದ ಆಹಾರ ಪದ್ಧತಿ, ಜೀವನ ಶೈಲಿ ಹಿನ್ನೆಲೆಯಲ್ಲಿ ರಾಜ್ಯದ ವಿವಿಧೆಡೆ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿರುವುದರಿಂದ ಜನಸಾಮಾನ್ಯರಲ್ಲಿ ಎದೆನೋವು, ಹೃದಯಾಘಾತ ತಡೆಯಲು ಆರೋಗ್ಯಕರ ಜೀವನಶೈಲಿ ಕುರಿತು ಜಾಗೃತಿ ಕಾರ್ಯಕ್ರಮ ಹಾಗೂ ಆರೋಗ್ಯ ಶಿಬಿರಗಳನ್ನು ಹಮ್ಮಿಕೊಳ್ಳುವಂತೆ ಸಂಸದ ಸಾಗರ ಈಶ್ವರ ಖಂಡ್ರೆ ಆರೋಗ್ಯ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿಂದು ಜರುಗಿದ ದಿಶಾ ಸಮಿತಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು. ಯುವಕರಲ್ಲಿ ಜನಸಾಮಾನ್ಯರಲ್ಲಿಯೂ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿವೆ. ದಿನನಿತ್ಯದ ಒತ್ತಡದ ಬದುಕು, ಫಾಸ್ಟಫುಡ್ ಆಹಾರ ಹಾಗೂ ಬದಲಾದ ಜೀವನಶೈಲಿಯ ಹಿನ್ನೆಲೆಯಲ್ಲಿ ಎದೆನೋವು ಲಕ್ಷಣಗಳು ಹಾಗೂ ಹೃದಯಾಘಾತ ಕಂಡುಬರುತ್ತಿವೆ. ಸಾರ್ವಜನಿಕರು ತುರ್ತು ಸಂದರ್ಭದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸುಧಾರಿತ ಜೀವನ ಶೈಲಿ ಬಗ್ಗೆ ಆರೋಗ್ಯ ಅಧಿಕಾರಿಗಳು ಜಾಗೃತಿ ಮೂಡಿಸಬೇಕೆಂದು ತಿಳಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತುರ್ತು ಔಷಧಿಗಳು ಲಭ್ಯತೆ ಇರಬೇಕು. ಸ್ಥಳೀಯ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ವೈದ್ಯರು ಹಾಗೂ ಸಿಬ್ಬಂದಿಗಳು ಸರಿಯಾಗಿ ಸ್ಪಂದಿಸತಕ್ಕದ್ದು. ಸಾರ್ವಜನಿಕರು ಆರೋಗ್ಯ ಸಮಸ್ಯೆಗಳನ್ನು ದಾಖಲಿಸಲು ಆನ್‌ಲೈನ್ ಯೋಜನೆ ರೂಪಿಸುವಂತೆ ತಿಳಿಸಿದರು. ಅಂಬುಲೆನ್ಸಗಳ ಚಾಲಕರ ಕೊರತೆಯನ್ನು ಇನ್ನೊಂದು ವಾರದಲ್ಲಿ ಬಗೆಹರಿಸುವಂತೆ ಡಿ.ಎಚ್.ಓ.

(2ನೇ ಪುಟ ನೋಡಿ)

## ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಹೆಚ್ಚಿನ ಜನರನ್ನು ಸೇರಿಸಬೇಕು: ಸಚಿವ ಶಿವರಾಜ್ ಎಸ್. ತಂಗಡಗಿ



ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:ಜು.8:ಮುಖ್ಯಮಂತ್ರಿಗಳು ಹಾಗೂ ಉಪ ಮುಖ್ಯಮಂತ್ರಿಗಳು ಆಗಸ್ಟ್ 4 ರಂದು ಕೊಪ್ಪಳ ಜಿಲ್ಲೆಯ ವಿವಿಧ ಕಾರ್ಯಕ್ರಮಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಮತ್ತು ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸುವ ಕಾರ್ಯಕ್ರಮಕ್ಕೆ ಆಗಮಿಸುವ ಹಿನ್ನೆಲೆಯಲ್ಲಿ ಹೆಚ್ಚಿನ ಜನರನ್ನು ಸೇರಿಸಬೇಕೆಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್. ತಂಗಡಗಿ ಹೇಳಿದರು.

ಆಗಸ್ಟ್ 04ರಂದು ಮುಖ್ಯಮಂತ್ರಿಗಳು ಕೊಪ್ಪಳ ಜಿಲ್ಲೆಗೆ ವಿವಿಧ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಮತ್ತು ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಅವರು ಸೋಮವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳಿಗೆ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕೊಪ್ಪಳ ಜಿಲ್ಲೆಯ 7 ತಾಲ್ಲೂಕುಗಳ 5 ವಿಧಾನಸಭಾ ಕ್ಷೇತ್ರಗಳಿಂದ ಒಂದು ಲಕ್ಷ ಫಲಾನುಭವಿಗಳನ್ನು ಕರೆತರಬೇಕು. ದೊಡ್ಡ ಕಾರ್ಯಕ್ರಮ ಆಗಿರುವುದರಿಂದ ಯಾವುದೇ ಸಮಸ್ಯೆಗಳಾಗದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು. ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ಇತರೆ ಸಂಬಂಧಿಸಿದ ಅಧಿಕಾರಿಗಳು ಸಭೆ ನಡೆಸಿ ಫಲಾನುಭವಿಗಳ ಪಟ್ಟಿ ತಯಾರಿಸಿ ಅವರನ್ನು ಕಾರ್ಯಕ್ರಮಕ್ಕೆ ಕರೆತರಬೇಕೆಂದರು.

ಮಳೆಗಾಲ ಇರುವುದರಿಂದ ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಜರ್ಮನ್ ಟೆಂಟ್ ಹಾಕಬೇಕು ಮತ್ತು ಕಾರ್ಯಕ್ರಮಕ್ಕೆ ಬರುವ ಜನರಿಗೆ ಅನುಕೂಲವಾಗಲು ಹೆಚ್ಚಿನ ಸಂಖ್ಯೆಯಲ್ಲಿ ಕುರ್ಚಿಗಳನ್ನು ಹಾಕುವ ವ್ಯವಸ್ಥೆ ಮಾಡಬೇಕು. ಅಧಿಕಾರಿಗಳು ತಮ್ಮ- ತಮ್ಮ ಇಲಾಖೆಯಲ್ಲಿರುವ ಯಾವುದೇ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಮತ್ತು ಫಲಾನುಭವಿಗಳ ಪಟ್ಟಿಯನ್ನು ನೀಡಬೇಕು. ಮುಂದಿನ ಮತ್ತೊಂದು ಸಭೆ ಕರೆಯುವುದರೊಳಗೆ ತಾವು ಎಲ್ಲಾ ಮಾಹಿತಿ ನೀಡಬೇಕೆಂದರು.

ವಿವಿಧ ಇಲಾಖೆಯ ಫಲಾನುಭವಿಗಳು ಮತ್ತು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮಕ್ಕೆ ಕರೆತರಬೇಕು. ಅವರನ್ನು ಕರೆತರಲು ಬಸ್ಸುಗಳ ವ್ಯವಸ್ಥೆ ಮಾಡಬೇಕು

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಮೂಡಿಸಿ:ಸಂಸದ ಸಾಗರ ಖಂಡ್ರೆ

ಡಾ.ನಿರಗುಡೆ ಅವರಿಗೆ ತಿಳಿಸಿದರು.ಬೀದಿ ಅಂಗಡಿಗಳಲ್ಲಿ ಕಲುಷಿತ ಆಹಾರ ಪದಾರ್ಥಗಳ ಮಾರಾಟ ತಡೆಯಲು ಹಾಗೂ ಹೋಟೇಲ್ ಧಾಬಾಗಳಲ್ಲಿ ಗುಣಮಟ್ಟದ ಆಹಾರ ಲಭ್ಯವಾಗುವಂತೆ ಆಹಾರ ಸುರಕ್ಷತಾ ಅಧಿಕಾರಿಗಳು ಹಠಾತ್ ಭೇಟಿ ನೀಡಿ ಕ್ರಮ ಕೈಗೊಳ್ಳುವಂತೆ ಹಾಗೂ ಭೇಟಿ ನೀಡಿದ ಫೋಟೋ, ವಿಡಿಯೋ ಹಾಗೂ ವರದಿಗಳನ್ನು ಒಪ್ಪಿಸುವಂತೆ ತಿಳಿಸಿದರು.

ಗ್ರಾಮೀಣ ಹಾಗೂ ತಾಲ್ಲೂಕಾ ಪ್ರದೇಶದಲ್ಲಿ ಉತ್ತಮ ಬ್ರಾಂಚ್‌ಗಳ ನಕಲು ರೂಪದ ಕಾಸಮೆಟಿಕ್ಸ್ (ಸೌಂದರ್ಯವರ್ಧಕ) ಸಾಬೂನು ಹಾಗೂ ಆಹಾರ ಪದಾರ್ಥಗಳ ಮಾರಾಟವಾಗುತ್ತಿರುವ ಬಗ್ಗೆ ದೂರು ಬಂದಿದ್ದು ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಸಂಸದರು ಸೂಚಿಸಿದರು.

ಔಷಧಿ ಅಂಗಡಿಗಳಲ್ಲಿ ನಶೆ ಬರುವ ಮತ್ತೇರಿಸುವ ಔಷಧಿಗಳ ಮಾರಾಟ ಕುರಿತು ಡ್ರಗ್ಸ್ ಕಂಟ್ರೋಲರ ಕ್ರಮ ಕೈಗೊಳ್ಳುವಂತೆ ಅಲ್ಲದೇ ಡ್ರಗ್ಸ್ ವಿರುದ್ಧ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಳ್ಳುವಂತೆ ತಿಳಿಸಲಾಯಿತು.

ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ ಅವರು ಮಾತನಾಡಿ, ಆರೋಗ್ಯ ಅಧಿಕಾರಿಗಳು ಹೆಚ್ಚೆಚ್ಚು ಆರೋಗ್ಯ ಶಿಬಿರಗಳನ್ನು ಏರ್ಪಡಿಸಬೇಕು. ಮನ್ನಾಏಖೇಳ್ಳಿ ಹತ್ತಿರ ಇತ್ತೀಚಿಗೆ ಬಾಣಂತಿಗೆ ಸೂಕ್ತ ಸಮಯದಲ್ಲಿ ಅಂಬುಲೆನ್ಸ್ ಲಭ್ಯವಾಗದ ಹಿನ್ನೆಲೆಯಲ್ಲಿ ಸಾವು ಸಂಭವಿಸಿತು. ಅಂಬುಲೆನ್ಸ್

ಚಾಲಕರ ಕೊರತೆ ತಕ್ಷಣ ನೀಗಿಸುವಂತೆ ಸೂಚಿಸಿದರು.ಬೀದರ ರೈಲ್ವೆ ಸ್ಟೇಷನ್ ಸುತ್ತಲೂ ದಿನನಿತ್ಯ ಡ್ರಗ್ಸ್ ಮಾರಾಟ ಹೆಚ್ಚುತ್ತಿದ್ದು ಪೊಲೀಸ್ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ತಿಳಿಸಿದರು.ರಾಜ್ಯ ಹೆದ್ದಾರಿಗಳಲ್ಲಿ ರಾತ್ರಿ ಅಪಘಾತ ಪ್ರಕರಣಗಳು ಹೆಚ್ಚುತ್ತಿದ್ದು ಲೋಕೋಪಯೋಗಿ ಇಲಾಖೆ ಪೊಲೀಸ್ ಇಲಾಖೆ ಹಾಗೂ ಆರ್.ಟಿ.ಓ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಂಸದರಾದ ಸಾಗರ ಈಶ್ವರ ಖಂಡ್ರೆ ಸೂಚಿಸಿದರು.ಜನದಟ್ಟಣೆಯ ಸ್ಥಳಗಳಲ್ಲಿ ವೇಗ ಮಿತಿಗೆ ರಸ್ತೆ ತಡೆಗಳು, ರಾತ್ರಿ ಪ್ರತಿಫಲನಗೊಳ್ಳುವ ಬೋರ್ಡಗಳು ಸೇರಿದಂತೆ ಬೀದಿ ದೀಪ ಆಳವಡಿಸುವಂತೆ ತಿಳಿಸಿದರು. ಜಿಲ್ಲೆಯಲ್ಲಿ 32 ಅಪಘಾತ ಸ್ಥಳಗಳನ್ನು ಗುರುತಿಸಲಾಗಿದ್ದು ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವಂತೆ ತಿಳಿಸಿದರು.

ರೈಲ್ವೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಪಶು ಸಂಗೋಪನೆ, ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಇಲಾಖೆ, ವಸತಿ ಸೇರಿದಂತೆ ವಿವಿಧ ಇಲಾಖೆಗಳ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನೆಯನ್ನು ಸಂಸದರು ಕೈಗೊಂಡರು.ಜಿಲ್ಲೆಯಲ್ಲಿ ಈವರೆಗೆ ಉತ್ತಮ ಮಳೆ ಬೆಳೆ ಕಂಡುಬಂದಿದ್ದು, 4.21 ಲಕ್ಷ ಹೆ. ಬಿತ್ತನೆ ಕ್ಷೇತ್ರವಿದೆ. ಈ ಪೈಕಿ 2.2 ಲಕ್ಷ ಸೋಯಾ, 1.32 ಲಕ್ಷ ತೊಗರಿ,

22 ಸಾವಿರ ಹೆ.ಉದ್ದು ಹಾಗೂ ಹೆಸರು ಬಿತ್ತಲಾಗುತ್ತಿದೆ. ರಸಗೊಬ್ಬರಗಳ ಸಮಸ್ಯೆ ಇಲ್ಲ. ಜಿಲ್ಲೆಗೆ 13723 ಮೆಟ್ರಿಕ್ ಟನ್ ಯೂರಿಯಾ ಅಗತ್ಯವಿದ್ದು, 9 ಸಾವಿರ ಮೆಟ್ರಿಕ್ ಟನ್ ಸರಬರಾಜು ಆಗಿದೆ. ನ್ಯಾನೋ ಯೂರಿಯಾ ಬಳಕೆಗೆ ಪ್ರಚಾರ ಕೈಗೊಳ್ಳಲಾಗುತ್ತಿದೆ ಎಂದು ಕೃಷಿ ಜಂಟಿ ನಿರ್ದೇಶಕಿ ದೇವಿಕಾ ಸಭೆಗೆ ತಿಳಿಸಿದರು.ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಕಳೆದ ವರ್ಷ ವಿಮೆ ಕಂತು ಕಟ್ಟಿದರು ಸೂಕ್ತ ವಿಮೆ ಪರಿಹಾರ ದೊರಕದ ಬಗ್ಗೆ ದೂರುಗಳು ಕೇಳಿ ಬಂದಿವೆ. ರೈತರಿಗೆ ವಿಮೆ ಪರಿಹಾರ ಹಣ ಸಂದಾಯವಾಗುವ ನಿಟ್ಟಿನಲ್ಲಿ ಕ್ರಮಕೈಗೊಳ್ಳುವಂತೆ ಸಂಸದರು ಕೃಷಿ ಜಂಟಿ ನಿರ್ದೇಶಕರಿಗೆ ತಿಳಿಸಿದರು.ಸಂಸದರಾದ ಸಾಗರ ಖಂಡ್ರೆ ಅವರು ದಿಶಾ ಸಮಿತಿ ಸಭೆಗೆ ಮುನ್ನ ಬೀದರ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ (ಕಒಈಃಜ) ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಜಾಗೃತಿ ವಾಹನಗಳಿಗೆ ಹಸಿರು ನಿಶಾನೆ ತೋರಿಸಿ, ರೈತರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂಬ ಸಂದೇಶವನ್ನು ನೀಡಿದರು.

ಇದೇ ವೇಳೆ ಜಿಲ್ಲೆಯ 83 ಗ್ರಾಮ ಗ್ರಂಥಾಲಯಗಳಿಗೆ ಇಂಟರ್ನೆಟ್ ಸಂಪರ್ಕ

ಹಾಗೂ ಪುಸ್ತಕ ಕಿಟ್ಟುಗಳನ್ನು ವಿತರಿಸಿ, ಗ್ರಾಮೀಣ ಮಕ್ಕಳಿಗೆ ಹಾಗೂ ಓದುಗರಿಗೆ ಜ್ಞಾನವೃದ್ಧಿಗೆ ಉಪಯುಕ್ತವಾಗುವಂತಹ ಈ ಯೋಜನೆಯ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.ಈ ಸಭೆಯಲ್ಲಿ ದಿಶಾ ಸಮಿತಿಯ ಸದಸ್ಯರಾದ ಶಿವಯ್ಯ ಸ್ವಾಮಿ, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ ಗುಂಟಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೇರಿಸಬೇಕು: ಸಚಿವ ಶಿವರಾಜ್ ಎಸ್. ತಂಗಡಗಿ

. ನಮ್ಮ ಜಿಲ್ಲೆಯ ಬಸ್ಸುಗಳು ಸಾಲದಿದ್ದರೆ ಅಕ್ಕ- ಪಕ್ಕದ ಜಿಲ್ಲೆಯ ಬಸ್ಸುಗಳನ್ನು ತರಿಸಬೇಕು. ಒಂದೊಂದು ಬಸ್ಸಿಗೆ ಜನರನ್ನು ಕರೆತರಲು ಆಯಾ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯೋಜನೆ ಮಾಡಬೇಕು. ವಿವಿಧ ಇಲಾಖೆಯ ಕಾರ್ಯಕ್ರಮಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಒಂದೇ ಸಲ ಮಾಡುವುದರಿಂದ ನಮ್ಮ ಜಿಲ್ಲೆಯಿಂದ ದೊಡ್ಡ ಸಂದೇಶ ಹೋದಂತಾಗುತ್ತದೆ ಎಂದು ಹೇಳಿದರು.

ವಿವಿಧ ಇಲಾಖೆಯ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕಾಮಗಾರಿಗಳು, ಜಿಲ್ಲೆಯ ವಿವಿಧ ತಾಲ್ಲೂಕಿನ ಪ್ರಜಾಸೌಧ, ಆಸ್ಪತ್ರೆ ಸೇರಿದಂತೆ ಹಲವಾರು ಕಾರ್ಯಕ್ರಮ ಇರುವುದರಿಂದ ಎಲ್ಲಾ ಇಲಾಖೆಯ ಅಧಿಕಾರಿಗಳು ಸಂಬಂಧಪಟ್ಟವರ ಜೊತೆಗೆ ಮಾತನಾಡಬೇಕು. ಕಾರ್ಯಕ್ರಮದ ಯಶಸ್ಸಿಗೆ ವಿವಿಧ ಸಮಿತಿಗಳನ್ನು ರಚಿಸಿ ಅಧಿಕಾರಿಗಳಿಗೆ ಜವಾಬ್ದಾರಿ ನೀಡಬೇಕು. ನಮ್ಮ ಕಲ್ಯಾಣ ಕರ್ನಾಟಕ ಭಾಗದ ಸಚಿವರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವುದರಿಂದ ಅಚ್ಚುಕಟ್ಟಾಗಿ ಕಾರ್ಯಕ್ರಮ ಮಾಡಬೇಕೆಂದು ಹೇಳಿದರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ರಾಘವೇಂದ್ರ ಹಿಟ್ನಾಳ ಮಾತನಾಡಿ, ಕಾರ್ಯಕ್ರಮಕ್ಕೆ ಆಗಮಿಸುವ ಫಲಾನುಭವಿಗಳ ಪಟ್ಟಿಯನ್ನು ಪ್ರತಿ ಗ್ರಾಮ ಪಂಚಾಯತಿಯಿಂದ ಮಾಡಬೇಕು. ಕಾರ್ಯಕ್ರಮಕ್ಕೆ ಬರಲು ಎಷ್ಟು ಬಸ್ಸುಗಳು ಬೇಕಾಗುತ್ತವೆ ಎಂದು ಮುಂಚಿತವಾಗಿ ಪಟ್ಟಿ ತಯಾರಿಸಿರಬೇಕು. ಜನರನ್ನು ಕರೆದು-ಕೊಂಡು ಹೋಗಿ ಬರಲು ಪ್ರತಿ ಬಸ್ಸಿಗೆ ಒಬ್ಬರನ್ನು ನಿಯೋಜನೆ ಮಾಡಬೇಕೆಂದು ಹೇಳಿದರು.

ಈ ಸಭೆಯಲ್ಲಿ ಕೊಪ್ಪಳ ಸಂಸದರಾದ ಕೆ. ರಾಜಶೇಖರ ಹಿಟ್ನಾಳ, ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಟಿ. ಲಿಂಗರಾಜು, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ಹೇಮಂತ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಸೆಂಟರ್ ವಸತಿ ಮನೆ ಪಾಠಗಳು ನಿಲ್ಲಿಸಲು ಆದೇಶ

ಮುಂಚೆ ಎಲ್ಲಾ ಅನಧಿಕೃತವಾಗಿ ನಡೆಸುತ್ತಿರುವ ಕೇಂದ್ರಗಳಿಗೆ ಭೇಟಿ ನೀಡಿ ಅಗತ್ಯ ಪರವಾನಗಿ ಕೂಡಿ ಇಲ್ಲಾ ನಿಮ್ಮ ಕೇಂದ್ರ ಗಳ್ಳನ್ನು ಮುಚ್ಚು ವಂತೆ ತಿಳಿಸಗಿಲಾತ್ತು. ಈ ಸಂಬಂಧ ಕೆಲವು ಕೇಂದ್ರ ಮುಚ್ಚಿದ್ದಾರೆ. ಇನ್ನು ಕೆಲವು ಕಡೆ ಅದೆ ರೀತಿ ಮಂದಿ ವರಿಸುತ್ತಿರುವ ಮಾಹಿತಿ ಮೇರೆಗೆ ಇಂದು ಕೇಂದ್ರ ಗಳಿಗೆ ಖಡಕ ಅದೇಶ ನೀಡಲಾಗಿದೆ. ಇಲ್ಲಾ ವಾದರೆ ಕಾನೂನು ಕ್ರಮ ಕೈಗೊಳ್ಳುತ್ತೇವೆ ಪ್ರಕಾಶ ರಾಠೋಡ ಬಿ. ಆರ್. ಸಿ ಹಾಗೂ ಪ್ರಭಾರಿ

ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಆದೇಶ ನೀಡಿದ್ದೇವೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಸಿ.ಆರ್.ಪಿ ನಾಗೇಶ ಸಂಗಮೇ ಮಾತನಾಡಿ,ಶಾಲಾ ಶಿಕ್ಷಣ ಇಲಾಖೆಯ ಅನುಮತಿ ಪಡೆಯದೇ ಅನಧಿಕೃತವಾಗಿ ಈ ರೀತಿ ಇಲಾಖೆಯ " ಅನುಮತಿ ಪಡೆಯದೇ ಶಾಲಾ ಅವಧಿಯಲ್ಲಿ ಕೋಚಿಂಗ್ ಸೆಂಟರ್‌ಗಳು ನಡೆಸುವುದು ಕ್ರಿಮಿನಲ್ ಅಪರಾಧವಾಗಿದ್ದು,ತಕ್ಷಣವೇ ಅನಧಿಕೃತ ಶಾಲೆ/ಕೋಚಿಂಗ್ ಸೆಂಟರ್/ ವಸತಿ ಮನೆ ಪಾಠಗಳು ಮುಚ್ಚಿಸಿ ಈ ಕಾರ್ಯಾಲಯಕ್ಕೆ ವರದಿ ನೀಡುವುದು ಇಲ್ಲವಾದಲ್ಲಿ ಕಾನೂನು ಪ್ರಕಾರ ಕಠಿಣಕ್ರಮ ಜರುಗಿಸಲಾಗುವುದೆಂದು ಈ ಮೂಲಕ ಅಂತಿಮ ಎಚ್ಚರಿಕೆ ನೀಡಿಲಾಗಿದೆ ಎಂದು ಪ್ರಕಟಣೆಗೆ ತಿಳಿಸಿದರು.

# ತಲುಪಿದ ಶಕ್ತಿ ಯೋಜನೆ

ಸಿದ್ಧತೆ ನಡೆಸಿದೆ. ಪ್ರಮುಖವಾಗಿ 500ನೇ ಟಿಕೆಟ್ ಪಡೆದ ಮಹಿಳೆಗೆ ಲಕ್ಕಿ ಪ್ರೈಸ್ ಸಿಗಲಿದೆ. ಈ ಶಕ್ತಿಯೋತ್ಸವವನ್ನು ಎಲ್ಲಾ ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಗ್ಯಾರಂಟಿ ಸಮಿತಿ ಹಾಗೂ ಸಾರಿಗೆ ಇಲಾಖೆಯು ಆಚರಿಸಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ಇನ್ನೂ ಈ ಶಕ್ತಿ ಯೋಜನೆಯಿಂದ ಧಾರ್ಮಿಕ ಕ್ಷೇತ್ರಗಳತ್ತ ಭಕ್ತಾದಿಗಳು ಹರಿದು ಬರುತ್ತಿದ್ದು, ಮುಜರಾಯಿ ಇಲಾಖೆಯ ಖಜಾನೆ ತುಂಬಿಸುತ್ತಿದೆ. ಕಾಂಗ್ರೆಸ್ ಸರ್ಕಾರ ಇರುವವರೆಗೂ ಶಕ್ತಿ ಯೋಜನೆ ಇರಲಿದೆ ಎಂದು ಸಾರಿಗೆ ಸಚಿವರು ಭರವಸೆ ನೀಡಿದ್ದಾರೆ.

# ಎಂ.ಎ. ಇಂಗ್ಲಿಷ್: ಶೇಷಾದ್ರಿ ಕುಲಕರ್ಣಿಗೆ ಪ್ರಥಮ ರ್‍ಯಾಂಕ್



ಬೀದರ. ಜು. 08 : ನಗರದ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಸಂಚಾಲಿತ ಕರ್ನಾಟಕ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಕಾಲೇಜಿನ ವಿದ್ಯಾರ್ಥಿ ಶೇಷಾದ್ರಿ ಕುಲಕರ್ಣಿ 2023-24ನೇ ಸಾಲಿನ ಎಂ.ಎ. ಇಂಗ್ಲಿಷ್ ಪರೀಕ್ಷೆಯಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ಪ್ರಥಮ ರ್‍ಯಾಂಕ್‌ಗಳಿಸಿ ಸಾಧನೆಗೈದಿದ್ದಾರೆ. ವಿಶ್ವವಿದ್ಯಾಲಯವು ಜುಲೈ 3 ರಂದು ಫಲಿತಾಂಶ ಪ್ರಕಟಿಸಿದ್ದು, ಶೇಷಾದ್ರಿ ಕುಲಕರ್ಣಿ ಶೇ 73.6 ರಷ್ಟು ಅಂಕ ಗಳಿಸಿದ್ದಾರೆ.

ವಿದ್ಯಾರ್ಥಿಯ ಸಾಧನೆಗೆ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಉಪಾಧ್ಯಕ್ಷ ಬಿ.ಜಿ. ಶೆಟಕಾರ್, ಕಾರ್ಯದರ್ಶಿ ಸತೀಶ್ ಪಾಟೀಲ, ಜಂಟಿ ಕಾರ್ಯದರ್ಶಿ ಶಿವಾನಂದ ಗಾದಗೆ, ಆಡಳಿತ ಮಂಡಳಿ ಸದಸ್ಯರು, ಪ್ರಾಚಾರ್ಯ ಮಲ್ಲಿಕಾರ್ಜುನ ಹಂಗರಗೆ, ಉಪ ಪ್ರಾಚಾರ್ಯ ಸೋಮನಾಥ ಬಿರಾದಾರ ಸಂತಸ ವ್ಯಕ್ತಪಡಿಸಿದ್ದಾರೆ.

# 29 ಮೋಟಾರ್ ಸೈಕಲ್ ಜಪ್ತಿ

ಅದರಲ್ಲಿ ಐದು ದ್ವಿಚಕ್ರವಾಹನಗಳಲ್ಲಿ ಬ್ರಹ್ಮಪೂರ್ ಪೋಲಿಸ್ ಠಾಣೆ ಹಾಗೂ ರಾಘವೇಂದ್ರ ನಗರ ಠಾಣೆಯ ತಲಾ ಎರಡು ಮತ್ತು ಅಶೋಕನಗರ ಪೋಲಿಸ್ ಠಾಣೆಯ ಒಂದು ದ್ವಿಚಕ್ರವಾಹನಗಳು ಪತ್ತೆಯಾಗಿವೆ. ಉಳಿದ 24 ದ್ವಿಚಕ್ರವಾಹನಗಳ ಪೈಕಿ 12 ವಾರಸುದಾರರ ವಿಳಾಸ ಪತ್ತೆಯಾಗಿದ್ದು, ಉಳಿದ 12 ವಾರಸುದಾರರ ಪತ್ತೆ ಕಾರ್ಯ ಜಾರಿಯಲ್ಲಿದೆ ಎಂದು ಅವರು ಹೇಳಿದರು.

ಚಿಂಚೋಳಿ ಪೋಲಿಸ್ ಠಾಣೆಯ ಪಿಎಸ್‌ಐ ಶ್ರೀಮತಿ ಗಂಗಮ್ಮಾ ಅವರು ಕಳೆದ ಜೂನ್ 19ರಂದು ಮಧ್ಯಾಹ್ನ 2 ಗಂಟೆಗೆ ಚಿಮ್ಮನಚೋಡ ಉಕ್ಕಡ ಪೋಲಿಸ್ ಠಾಣೆಯಲ್ಲಿ ಇರುವಾಗ ಬೆನಕಿಪಳ್ಳಿ ಗ್ರಾಮದ ಹತ್ತಿರ ಇರುವ ಸೇತುವೆಯ ಮೇಲೆ ಯಾರೋ ಒಬ್ಬ ವ್ಯಕ್ತಿ ಮೂರು ದ್ವಿಚಕ್ರವಾಹನಗಳನ್ನು ಕಡಿಮೆ ಬೆಲೆಯಲ್ಲಿ ಮಾರಾಟ ಮಾಡುತ್ತಿರುವುದಾಗಿ ಹಾಗೂ ದ್ವಿಚಕ್ರವಾಹನಗಳ ಕಾಗದ ಪತ್ರ ನಂತರ ನೀಡುವುದಾಗಿ ಹೇಳುತ್ತಿದ್ದು, ದ್ವಿಚಕ್ರವಾಹನಗಳು ಕಳ್ಳತನದ್ದು ಎಂಬ ಖಚಿತ ಭಾತ್ಮಿ ಮೇರೆಗೆ ಸ್ಥಳಕ್ಕೆ ಧಾವಿಸಿ ಆತನಿಗೆ ಹಿಡಿದು ವಿಚಾರಿಸಿದಾಗ ಆತ ಬೆನಕಿಪಳ್ಳಿಯ ಶ್ರೀಕಾಂತ್ ತಂದೆ ಗಣಪತಿ ಭೂತಾಳೆ (27) ಎಂಬುದು ಗೊತ್ತಾಯಿತು ಎಂದು ಅವರು ತಿಳಿಸಿದರು.

ಸದರಿ ದ್ವಿಚಕ್ರವಾಹನಗಳ ದಾಖಲಾತಿಗಳ ಕುರಿತು ಕೇಳಿದಾಗ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಲಿಲ್ಲ. ಈ ಕುರಿತು ಹೆಚ್ಚಿನ ವಿಚಾರಣೆಗೆ ಒಳಪಡಿಸಿದಾಗ ತನ್ನ ಗೆಳೆಯನಾದ ಬಸಯ್ಯಸ್ವಾಮಿ ಕಳ್ಳತನ ಮಾಡಿದ ದ್ವಿಚಕ್ರವಾಹನಗಳನ್ನು ಮಾರಾಟ ಮಾಡುತ್ತಿರುವುದಾಗಿ ಬಾಯಬಿಟ್ಟ. ಪಂಚರ ಸಮಕ್ಷಮದಲ್ಲಿ ಆತನಿಗೆ ವಶಕ್ಕೆ ತೆಗೆದುಕೊಂಡು ಆತನ ವಿರುದ್ಧ ಪ್ರಕರಣ ದಾಖಲಿಸಲಾಯಿತು ಎಂದು ಅವರು ಹೇಳಿದರು.

ಪಿಎಸ್‌ಐ ಶ್ರೀಮತಿ ಗಂಗಮ್ಮ ಅವರ ನೇತೃತ್ವದಲ್ಲಿ ಸಿಬ್ಬಂದಿಗಳಾದ ಎಎಸ್‌ಐ ರಾಜು, ಅಶೋಕ್, ಓಂಕಾರ್, ರಮೇಶ್, ಯಮನೂರಪ್ಪ, ನಾಗೇಶ್, ಅಮಿರ್ ಅಲಿ, ಮಾಳಪ್ಪ ಅವರು ಕಾರ್ಯಾಚರಣೆ ಕೈಗೊಂಡು ಮೂವರು ಆರೋಪಿಗಳನ್ನು ಬಂಧಿಸಿದರು ಎಂದು ಅವರು ಶ್ಲಾಘಿಸಿದರು. ಸುದ್ದಿಗೋಷ್ಠಿಯಲ್ಲಿ ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಮಹೇಶ್ ಮೇಘಣ್ಣನವರ್, ಚಿಂಚೋಳಿ ಉಪ ವಿಭಾಗದ ಪೋಲಿಸ್ ಉಪ ಅಧೀಕ್ಷಕ ಸಂಗಮನಾಥ ಹಿರೇಮಠ, ಸಿಪಿಐ ಕಪಿಲದೇವ್, ಪಿಎಸ್‌ಐ ಶ್ರೀಮತಿ ಗಂಗಮ್ಮ ಮುಂತಾದವರು ಉಪಸ್ಥಿತರಿದ್ದರು.

# ದರೋಡೆಕೋರರ ಬಂಧನ

ರಾಜ್ ಲಾಡೆ ಅವರ ನೇತೃತ್ವದಲ್ಲಿ ಪಿಎಸ್‌ಐ ಶಾಮರಾಯ್, ಎಎಸ್‌ಐ ಮಲ್ಲಿಕಾರ್ಜುನ್, ಗುಂಡಪ್ಪಾ, ಸಿಬ್ಬಂದಿಗಳಾದ ನಾಗೇಂದ್ರ, ಮಲ್ಲಿಕಾರ್ಜುನ್, ಬಲರಾಮ್, ಸಂತೋಷ್, ಹುಸೇನ್ ಪಾಷಾ, ಬಿಳಿಯನ ಸಿದ್ದಯ್ಯಾ, ಆರೀಫ್, ರಮೇಶ್ ಅವರು ಕಾರ್ಯಾಚರಣೆ ಕೈಗೊಂಡು ಆರೋಪಿಗಳನ್ನು ಬಂಧಿಸಿದ್ದಾರೆ ಎಂದರು.ಪ್ರಕರಣಕ್ಕೆ ಸಂಬಂಧಿಸಿದಂತೆ ಕಳೆದ 3ರಂದು ಆರೋಪಿಗಳಾದ ಶಹಾಬಾದ್ ದಕ್ಕಾ ತಾಂಡಾದ ಚಾಲಕ ರವಿ ತಂದೆ ಶಂಕರ ರಾಠೋಡ್ (42), ಅಕ್ಕಲಕೋಟೆ ತಾಲ್ಲೂಕಿನ ಶಿವಾಜಿ ನಗರ ತಾಂಡಾದ ಚಾಲಕ ಮಹಾದೇವ್ ತಂದೆ ಉಮಲು ರಾಠೋಡ್ (38), ಖ್ಯಾದಾಪುರ ತಾಂಡಾದ ಚಾಲಕ ಶಿವಕುಮಾರ್ ತಂದೆ ದೀಪಲು ರಾಠೋಡ್ (25) ಹಾಗೂ ಅಣಗೇರಿ ತಾಂಡಾದ ಕೂಲಿ ಕಾರ್ಮಿಕ ಗೋಪಾಲ್ ತಂದೆ ಮೇಘು ನಾಯಕ್ (30) ಅವರನ್ನು ಮಹಾರಾಷ್ಟ್ರ ರಾಜ್ಯದ ಅಕ್ಕಲಕೋಟೆ ರಾಷ್ಟ್ರೀಯ ಹೆದ್ದಾರಿಯಲ್ಲಿ ವಶಕ್ಕೆ ಪಡೆದುಕೊಂಡು ವಿಚಾರಣೆಗೆ ಒಳಪಡಿಸಿದಾಗ ಕಳ್ಳತನ ಪ್ರಕರಣವನ್ನು ಒಪ್ಪಿಕೊಂಡರು ಎಂದು ಅವರು ಹೇಳಿದರು.ಬಂಧಿತರಿಂದ 8.10 ಲಕ್ಷ ರೂ.ಗಳ ಮೌಲ್ಯದ 135 ಗ್ರಾಮ್ ತೂಕದ ಬಂಗಾರದ ಆಭರಣಗಳು, 45000ರೂ.ಗಳ ಮೌಲ್ಯದ 550 ಗ್ರಾಮ್ ತೂಕದ ಬೆಳ್ಳಿಯ ಆಭರಣಗಳು, ನಗದು 40,000ರೂ.ಗಳು ಸೇರಿದಂತೆ ಒಟ್ಟು 8,95,000ರೂ.ಗಳ ಮೌಲ್ಯದ ಸ್ವತ್ತನ್ನು ಹಾಗೂ ಕೃತ್ಯಕ್ಕೆ ಬಳಸಿದ ಐದು ಚಾಕುಗಳನ್ನು ಪೋಲಿಸರು ವಶಪಡಿಸಿಕೊಂಡರು ಎಂದು ಅವರು ತಿಳಿಸಿದರು.ಬಂಧಿತ ಆರೋಪಿಗಳನ್ನು ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ. ಪ್ರಕರಣದಲ್ಲಿನ ಇನ್ನೊಬ್ಬ ಆರೋಪಿ ಅಕ್ಕಲಕೋಟೆ ತಾಂಡಾದ ಶಿವಾಜಿ ನಗರದ ನಿವಾಸಿ ಸುನೀಲ್ ತಂದೆ ಬಾಬು ರಾಠೋಡ್ ತಲೆ ಮರೆಸಿಕೊಂಡಿದ್ದು, ಆತನ ಪತ್ತೆ ಕಾರ್ಯಾಚರಣೆ ಮುಂದುವರೆದಿದೆ. ಬಂಧಿತ ಆರೋಪಿಗಳು ಈ ಮೊದಲು ಜೇವರ್ಗಿ ಮತ್ತು ಇತರೆ ಕಡೆಗಳಲ್ಲಿ ದರೋಡೆ ಮಾಡಿದ ಪ್ರಕರಣಗಳು ದಾಖಲಾಗಿವೆ. ಪ್ರಕರಣ ಪತ್ತೆ ಹಚ್ಚುವಲ್ಲಿ ಶ್ವಾನದಳವು ಮಹತ್ವದ ಪಾತ್ರ ವಹಿಸಿದೆ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಮಹೇಶ್ ಮೇಘಣ್ಣನವರ್, ಡಿಎಸ್‌ಪಿ ಶಂಕರಗೌಡ ಪಾಟೀಲ್, ಪಿಐ ನಟರಾಜ್ ಲಾಡೆ, ಪಿಎಸ್‌ಐ ಶಾಮರಾಯ್ ಮುಂತಾದವರು ಉಪಸ್ಥಿತರಿದ್ದರು.

# ಕಲ್ಯಾಣ ನಗರ ವಸತಿ ನಿಲಯದಲ್ಲಿ ಗಿಡ ನೆಟ್ಟು ಪರಿಸರ ದಿನ ಆಚರಣೆ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ಪೂರೈಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.8:ಕಲಬುರಗಿ ನಗರದ ಕಲ್ಯಾಣ ನಗರದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿ. ದೇವರಾಜ ಅರಸು ಮೆಟ್ರಿಕ್ ನಂತರದ ವೃತ್ತಿಪರ ಬಾಲಕರ ವಸತಿ ನಿಲಯದಲ್ಲಿ ಇತ್ತೀಚೆಗೆ ಗಿಡ ನೆಡುವುದರ ಮೂಲಕ ಪರಿಸರ ದಿನ ಆಚರಣೆ ಮಾಡಲಾಯಿತು.

ಇತ್ತೀಚೆಗೆ ವಿಧಾನ ಪರಿಷತ್ ಶಾಸಕ ಸಾಯಬಣ್ಣ ತಳವಾರ್ ಅವರು ಭೇಟಿ ನೀಡಿ ವಸತಿ ನಿಲಯದಲ್ಲಿನ ಸ್ವಚ್ಛತೆ ಇಲ್ಲದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳಿಗೆ ಸರಿಯಾಗಿ ಊಟ ಪೂರೈಕೆ ಮಾಡುವಂತೆ ತಾಕೀತು ಮಾಡಿದಲ್ಲದೆ ಗಿಡ ಬೆಳೆಸಿ ನಿಲಯದಲ್ಲಿ ಉತ್ತಮ ಪರಿಸರ ಕಾಯ್ದುಕೊಳ್ಳುವಂತೆ ಸೂಚನೆ ನೀಡಿದ್ದರು.

ಶಾಸಕರ ನಿರ್ದೇಶನದಂತೆ ನಿಲಯದ ಆವರಣ ಸ್ವಚ್ಛಗೊಳಿಸಲಾಗಿದೆ.ನಿಲಯಾರ್ಥಿಗಳ ಸಹಯೋಗದೊಂದಿಗೆ ಹಾಸ್ಟೆಲ್‌ನಲ್ಲಿ ಗಿಡ ನೆಡಲಾಗಿದೆ. ಅಲ್ಲದೆ ವಿದ್ಯಾರ್ಥಿಗಳಿಗೆ ರುಚಿ-ಶುಚಿಯಾದ ಉಪಹಾರ, ಊಟ ಪೂರೈಸಲಾಗುತ್ತಿದೆ. ಮಕ್ಕಳ ದೈಹಿಕ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿನಿತ್ಯ ವ್ಯಾಯಾಮ, ಯೋಗಾಭ್ಯಾಸ ಮಾಡಿಸಲಾಗುತ್ತಿದೆ ಎಂದು ಕಲಬುರಗಿ ತಾಲೂಕಿನ ತಾಲೂಕಾ ಕಲ್ಯಾಣ ಅಧಿಕಾರಿ ಶರಣಬಸಪ್ಪ ಪಾಟೀಲ್ ಅವರು ಸ್ಪಷ್ಟಪಡಿಸಿದ್ದಾರೆ.

ಸ್ವಚ್ಛತಾ ಕಾರ್ಯದಲ್ಲಿ ಕಿರಿಯ ನಿಲಯ ಮೇಲ್ವಿಚಾರಕ ರಾಮದಾಸ್, ಅಡುಗೆ ಸಿಬ್ಬಂದಿಗಳಾದ ಪವನ್, ರಿಯಾಜ್, ಮಾಳಮ್ಮ ಭಾಗವಹಿಸಿದ್ದರು.

# ಭವಿಷ್ಯದ ಜೀವನ ರೂಪಿಸಿಕೊಳ್ಳುವಲ್ಲಿ ಕೈಗಾರಿಕಾ ತರಬೇತಿ ತುಂಬಾ ಮುಖ್ಯ : ಎಸ್ ಆರ್ ಹಿರೇಮಠ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜು.8: ಜಿಲ್ಲೆ ಕುಕನೂರ ತಾಲೂಕಿನ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಶಿಕ್ಷಣ ಪಡೆದವರು ಬೇಗನೆ ಸ್ವಾವಲಂಬಿಗಳಾಗುತ್ತಿದ್ದು,ಭವಿಷ್ಯದ ಜೀವನ ರೂಪಿಸಿಕೊಳ್ಳುವಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಪಾತ್ರ ಹೇಳಿದಾಗಿದೆ ಎಂದು ನಿವೃತ್ತ ಪ್ರಾಚಾರ್ಯ ಎಸ್ ಆರ್ ಹಿರೇಮಠ ಹೇಳಿದರು.

ಅವರು ಮಂಡಲಗಿರಿಯ ಶ್ರೀ ಜಗದ್ಗುರು ತೋಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಎರಡನೇ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ್ದರು. ಓದಿನಲ್ಲಿ ಆಸಕ್ತಿ,ಮಾಡುವ ಕಾಯಕದಲ್ಲಿ ನಿಷ್ಠೆ,ಬದುಕಿನಲ್ಲಿ ಛಲ,ಇತರರಿಗೆ ಮಾದರಿಯಾಗಬಲ್ಲ ಜೀವನ ಕ್ರಮ ಇವುಗಳು ನಮ್ಮವಾಗಿದ್ದರೆ ಹೆತ್ತವರಿಗೂ, ಶಿಕ್ಷಣ ಸಂಸ್ಥೆಗೆ, ನಮ್ಮ ಜೀವನಕ್ಕೂ ಬೆಲೆ ಸಿಕ್ಕಂತಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಭಾರ ಪ್ರಾಚಾರ್ಯ ಸಿ ಎಸ್ ಅಂಗಡಿ ಮಾತನಾಡಿ, ಕೈಗಾರಿಕಾ ವಲಯಗಳಲ್ಲಿ ಮಾನವ ಸಂಪನ್ಮೂಲದ ಬೇಡಿಕೆ ಹೆಚ್ಚಿತ್ತಿದೆ. ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ತರಬೇತಿ ಪಡೆದ ತರಬೇತುದಾರರಿಗೆ ವಿವಿದ ಅವಕಾಶಗಳಿದ್ದು ಅವುಗಳ ಸದುಪಯೋಗವನ್ನು ಪಡೆದುಕೊಳ್ಳಬೇಕೆಂಬ ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಹನುಮಂತಪ್ಪ ಉಪ್ಪಾರ, ವಿ ಎಚ್ ಮೇಟಿ, ಎಸ್ ಬಿ ಚಂಗಳಿ, ಎಸ್ ಸಿ ಪಾಟೀಲ, ಸಿಬ್ಬಂದಿ ವರ್ಗ, ತರಬೇತುದಾರರು ಹಾಜರಿದ್ದರು.

# ಸಿ.ಎ. ಫೌಂಡೇಷನ್ ಕೋರ್ಸ್‌ನಲ್ಲಿ ಸಾಧನೆ: ಸ್ನೇಹಾಗೆ ಸನ್ಮಾನ




ಬೀದರ. ಜು. 08 : ಪ್ರಸಕ್ತ ಸಾಲಿನ ಸಿ.ಎ. ಫೌಂಡೇಷನ್ ಕೋರ್ಸ್ ಪರೀಕ್ಷೆಯಲ್ಲಿ ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾದ ಇಲ್ಲಿಯ ಸಾಯಿ ಸ್ಫೂರ್ತಿ ಪದವಿಪೂರ್ವ ಕಾಲೇಜಿನ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಸ್ನೇಹಾ ಸಂಗಮನಾಥ ಅವರನ್ನು ಕಾಲೇಜಿನಲ್ಲಿ ಮಂಗಳವಾರ ಸನ್ಮಾನಿಸಲಾಯಿತು.

ಶಾಲು ಹೊದಿಸಿ, ಹೂಮಾಲೆ ಹಾಕಿ ಸತ್ಕರಿಸಿ, ಪ್ರೋತ್ಸಾಹಿಸಲಾಯಿತು.

ಸ್ನೇಹಾ ಅವರು ಸಿ.ಎ. ಫೌಂಡೇಷನ್ ಕೋರ್ಸ್ ಪರೀಕ್ಷೆಯಲ್ಲಿ ಸಾಧನೆಗೈದು ಕಾಲೇಜಿಗೆ ಕೀರ್ತಿ ತಂದಿದ್ದಾರೆ ಎಂದು ಕಾಲೇಜು ಪ್ರಾಚಾರ್ಯ ಚಂದ್ರಶೇಖರ ಬಿರಾದಾರ ಹೇಳಿದರು.

ಗುಣಮಟ್ಟದ ಶಿಕ್ಷಣದ ಕಾರಣ ಕಾಲೇಜಿನ ವಿದ್ಯಾರ್ಥಿಗಳು ವಿವಿಧ ಪರೀಕ್ಷೆಗಳಲ್ಲಿ ಸಾಧನೆ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಉಪನ್ಯಾಸಕಿ ನೀಲಾ ಮಾತನಾಡಿ, ಕಠಿಣ ಪರಿಶ್ರಮ ವಹಿಸಿದರೆ ಪ್ರತಿಫಲ ಸಿಕ್ಕೇ ಸಿಗುತ್ತದೆ ಎಂದು ಹೇಳಿದರು.

ಉಪನ್ಯಾಸಕಿಯರಾದ ಪ್ರೀತಿ, ಮಾರ್ಗರೇಟ್ ಇದ್ದರು.

# ಅಕ್ರಮ ಮದ್ಯ ಮಾರಾಟ ನಿಷೇಧಿಸಲು ಒತ್ತಾಯ





ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.8:ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಅಕ್ರಮವಾಗಿ ಮದ್ಯಮಾರಾಟ ಮಾಡಲಾಗುತ್ತಿದ್ದು ಕೂಡಲೇ ನಿಷೇಧಿಸಬೇಕು ಎಂದು ನಮ್ಮ ಕರ್ನಾಟಕ ಸೇನೆಯ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ. ಈ ಕುರಿತು ಪಟ್ಟಣದ ಅಬಕಾರಿ ನಿರೀಕ್ಷಕರ ಕಚೇರಿಯಲ್ಲಿ ನಮ್ಮ ಕರ್ನಾಟಕ ಸೇನೆಯ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ನೇತೃತ್ವದಲ್ಲಿ ಅಬಕಾರಿ ನಿರೀಕ್ಷಕರಿಗೆ ಮನವಿ ಪತ್ರ ಸಲ್ಲಿಸಿದರು.

ತಾಲೂಕಿನಲ್ಲಿ ಅಕ್ರಮ ಮದ್ಯ ಮಾರಾಟ ಮಿತಿಮೀರಿದೆ. ಕಿರಣಾ ಅಂಗಡಿ, ಪಾನ್‌ಶಾಪ್, ಹೊಟೇಲ್ ಸೇರಿ ಎಲ್ಲೆಂದರಲ್ಲಿ ರಾಜರೋಷವಾಗಿ ಮದ್ಯಮಾರಾಟ ಮಾಡಲಾಗುತ್ತಿದೆ. ಇದರಿಂದ ಬಡ ಜನರ ಕುಟುಂಬ ಬೀದಿಗೆ ಬರುವಂತಾಗಿದೆ. ಯುವಕರು ಕುಡಿತದ ಚಟಕ್ಕೆ ಬಲಿಯಾಗಿ ತಮ್ಮ ಅಮೂಲ್ಯ ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ.

ಅಕ್ರಮ ಮದ್ಯ ಮಾರಾಟ ನಿಷೇಧಿಸುವಂತೆ ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಈಗಾಗಲೇ ಎರಡ್ಮೂರು ಸಲ ಮನವಿ ಪತ್ರ ಸಲ್ಲಿಸಲಾಗಿದೆ. ಆದರೆ ಯಾವುದೇ ರೀತಿಯ ಪ್ರಯೋಜನವಾಗಿಲ್ಲ. ಇನ್ನಾದರೂ ಎಚ್ಚೆತ್ತುಕೊಂಡು ತಕ್ಷಣದಿಂದಲೇ ಗ್ರಾಮೀಣ ಭಾಗದಲ್ಲಿ ಅಕ್ರಮವಾಗಿ ಮಾರಾಟ ಮಾಡಲಾಗುತ್ತಿರುವ ಮದ್ಯ ಸಂಪೂರ್ಣವಾಗಿ ಬಂದ್ ಮಾಡಿಸಬೇಕು. ಒಂದು ಅಬಕಾರಿ ಇಲಾಖೆ ನಿರ್ಲಕ್ಷ ??ವಹಿಸಿದ್ದರೇ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಮನವಿ ಪತ್ರದಲ್ಲಿ ಎಚ್ಚರಿಸಲಾಗಿದೆ.

ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕದ ಯುವ ಅಧ್ಯಕ್ಷ ಸುದೀಪ ತೂಗಾವೆ, ತಾಲೂಕು ಅಧ್ಯಕ್ಷ ಬಸವರಾಜ ಕಾರಬಾರಿ, ಉಪಾಧ್ಯಕ್ಷ ಜಗದೀಶ ಪಾಟೀಲ್, ಪ್ರಮುಖರಾದ ಭದ್ರಯ್ಯ ಸ್ವಾಂಇ, ದತ್ತಾತ್ರಿ ಜಗತಾಪ, ಮಹೇಶ ರಾಚೋಟೆ, ಲೋಕೇಶ ಚಿಂಚೋಳೆ, ಸಾಗರ ಸ್ವಾಮಿ, ಪ್ರಶಾಂತ ಹಣಮಶೆಟ್ಟಿ, ಬಾಲಾಜಿ ಮೇಥೆ ಸೇರಿದಂತೆ ಹಲವರು ಇದ್ದರು.



ಬಸವಕಲ್ಯಾಣ :– ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀಮಠದ ಆವರಣದಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸೈದಾಪೂರ ಗ್ರಾಮದ ಪೀರ್ ದೇವರಿಗೆ ಶಾಲು ಹೊದಿಸಿ ಸತ್ಕರಿಸಿ, ಗೌರವಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ. ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಡಾ.ಬಿ.ಆರ್ ಅಂಬೇಡ್ಕರ್ ಪ್ರತೀಮೆಗೆ ಅಪಮಾನ ಪುಂಡರಿಗೆ ಬಂದಿಸಿ :ಅಂಬೇಡ್ಕರ್ ಸ್ವಾಭಿಮಾನ ಸೇನೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ಅಂಬೇಡ್ಕರ್ ಸ್ವಾಭಿಮಾನ ಸೇನೆ ವತಿಯಿಂದ ಮನವಿ.

ಮಾನ್ವಿ ತಾಲೂಕಿನ ಹರವಿ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆ ಬಗ್ನಗೊಳಿಸಿದ್ದು ಕಲ್ಲು ಹಾಗೂ ಚಪ್ಪಲಿಗಳಿಂದ ಅಪಮಾನ ಮಾಡಿರುವರು 4/6/2025 ರಂದು ನಡೆದ ಘಟನೆಯಾಗಿದ್ದು ಕೂಡಲೆ ಅಪಮಾನ ಮಾಡಿದವರನ್ನು ಕಾನೂನು ಕ್ರಮ ಕೈಗೊಳ್ಳಲು




ಆಗ್ರಹಿಸಿ ಮಾನ್ಯ ಜಿಲ್ಲಾಧಿಕಾರಿಗಳಿಗೆ ತಹಶಿಲ್ದಾರರ ಮುಖಾಂತರವಾಗಿ ಸೈಯದ ಶಿರೇಸ್ತದಾರ ಅವರಿಗೆ ಮನವಿ ಸಲ್ಲಿಸದರು. ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಸರ್ಜಾಪುರ,ರಮೇಶ,ಮೌಲಪ್ಪ ,ಉಲ್ಲೇಶ,ಹನುಮಂತಪ್ಪ,ಶಿವರಾಜ ಉಪಸ್ಥಿತರಿದ್ದರು

## ವಿಶ್ವ ಜನಸಂಖ್ಯಾ ದಿನಾಚರಣೆ ಹಿನ್ನೆಲೆ ವಿವಿಧ ಸ್ಪರ್ಧೆಗಳು ಹಾಗೂ ಉಪನ್ಯಾಸ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.08–ವಿಶ್ವ ಜನಸಂಖ್ಯಾದಿನಾಚರಣೆ ಅಂಗವಾಗಿ ಇದೇ ಜುಲೈ 10 ಹಾಗೂ 11 ರಂದು ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ವಿವಿಧ ಸ್ಪರ್ಧೆ ಹಾಗೂ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ವಿಜ್ಞಾನ ಅಧಿಕಾರಿಗಳು ತಿಳಿಸಿದ್ದಾರೆ.

ಜುಲೈ 10 ರಂದು ಬೆಳಿಗ್ಗೆ 11 ಗಂಟೆಗೆ 5 ರಿಂದ 7ನೇ ತರಗತಿಯ ವಿದ್ಯಾರ್ಥಿಗಳಿಗೆ “ಸಣ್ಣ ಕುಟುಂಬ, ಸಂತೋಷ ಕುಟುಂಬ” ವಿಷಯ ಕುರಿತು ಹಾಗೂ 8 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ “ಪರಿಸರ ಮತ್ತು ಸಂಪನ್ಮೂಲಗಳ ಮೇಲೆ ಜನಸಂಖ್ಯೆಯ ಪ್ರಭಾವ” ವಿಷಯ ಕುರಿತು ಚಿತ್ರಕಲೆ ಮತ್ತು ಪೇಂಟಿಂಗ್ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಜುಲೈ 11 ರಂದು ಬೆಳಿಗ್ಗೆ 11 ಗಂಟೆಗೆ ಗುಲಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಹ ಪ್ರಧ್ಯಾಪಕರಾದ ಡಾ. ಪೂಜಾ ಮಾರ್ಗೋಲ್ ಅವರು "Empowering young people to create the families they want in a fair and hopeful world" ವಿಷಯ ಕುರಿತು ಉಪನ್ಯಾಸ ನೀಡುವರು. ನಂತರ ಮಧ್ಯಾಹ್ನ 12 ಗಂಟೆಗೆ ವಿದ್ಯಾರ್ಥಿ ಹಾಗೂ ಸಾರ್ವಜನಿಕರಿಗೆ “ಜನಸಂಖ್ಯೆ ಮತ್ತು ಆರೋಗ್ಯ” ಕುರಿತು ಮುಕ್ತ ರಸಪ್ರಶ್ನೆ ಕಾರ್ಯಕ್ರಮ ಹಾಗೂ ಬಹುಮಾನ ವಿತರಣಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಮೇಲ್ಕಂಡ ದಿನದಂದು ನಡೆಯುವ ಸ್ಪರ್ಧೆಗೆ ಜಿಲ್ಲೆಯ ಆಯಾ ಶಾಲೆಗಳು ತಮ್ಮ ಶಾಲೆಯ ವಿದ್ಯಾರ್ಥಿಗಳನ್ನು ಕಳುಹಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 08472–270608 ಅಥವಾ ವಾಟ್ಸ್‌ಆಪ್ ನಂಬರ್ 9788078048, 9447541616 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## 12 ರಂದು ತಾಡತೆಗನೂರ ಗ್ರಾಮದಲ್ಲಿ ಪುರಾಣ ಮಹಾಮಂಗಳ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.8: ತಾಲೂಕಿನ ತಾಡತೆಗನೂರ ಗ್ರಾಮದಲ್ಲಿ ಮಹಾಲಕ್ಷ್ಮೀದೇವಿಯ 3 ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಜುಲೈ 2 ರಿಂದ ಪ್ರಾರಂಭಗೊಂಡ ಮಹಾನ್ ತತ್ವಜ್ಞಾನಿ ಕಡಕೋಳ ಮಡಿವಾಳೇಶ್ವರ ಪುರಾಣ ಜುಲೈ 12 ರವರೆಗೆ ನಡೆಯಲಿದೆ.

ಚಿನ್ಮಯಗಿರಿಯ ಮಹಾತಪಸ್ವಿ ಶ್ರೀ ಗುರು ಮಹಾಂತೇಶ್ವರ ಮಠದ ನೂತನ ಪೀಠಾಧಿಪತಿ ವೀರಮಹಾಂತೇಶ್ವರ ಶಿವಾಚಾರ್ಯರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ. ಪ್ರತಿದಿನ ರಾತ್ರಿ 7 ರಿಂದ 11 ಗಂಟೆವರೆಗೆ ವೇ.ಶಿವಲಿಂಗಯ್ಯಶಾಸ್ತ್ರೀಗಳು ಗರೂರ ( ಬಿ) ಅವರು ಪ್ರಸ್ತುತ ಪಡಿಸುವ ಪುರಾಣ ಕಾರ್ಯಕ್ರಮದಲ್ಲಿ ಅನೇಕ ಪೂಜ್ಯರು, ಗಣ್ಯರು ಪಾಲ್ಗೊಳ್ಳುವರು.

ಜು.12 ರಂದು ಬೆಳಿಗ್ಗೆ 11 ಗಂಟೆಗೆ ಪುರಾಣ ಮಹಾಮಂಗಳ ಹಾಗೂ ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮವಿದೆ. ಜಾತ್ರಾ ಮಹೋತ್ಸವ ಕಾರ್ಯಕ್ರಮಕ್ಕೆ ಗ್ರಾಮದ ಮಹಿಳಾ ಸದ್ಭಕ್ತರು ಸ್ವಇಚ್ಛೆಯಿಂದ 2 ಸಾವಿರ ರೂ ದೇಣಿಗೆ ನೀಡಿರುವದು ವಿಶೇಷವಾಗಿದೆ.ಮಹಾಲಕ್ಷ್ಮೀ ದೇವಿಯ ಜಾತ್ರಾ ಮಹೋತ್ಸವ ಮತ್ತು ಪುರಾಣ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸದ್ಭಕ್ತರು ಆಗಮಿಸಿ ಮಹಾಲಕ್ಷ್ಮೀ ದೇವಿಯ ಕೃಪೆಗೆ ಪಾತ್ರರಾಗುವಂತೆ ತಾಡತೆಗನೂರ ಗ್ರಾಮದ ಸಕಲ ಸದ್ಭಕ್ತ ಮಂಡಳಿಯವರು ತಿಳಿಸಿದ್ದಾರೆ.

## ಗವಿಮಠದಲ್ಲಿ ಗುರುಪೂರ್ಣಿಮೆ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 9 ಪ್ರತಿವರ್ಷದಂತೆ ಈ ವರ್ಷವೂ ಕೂಡ ಗುರುಪೂರ್ಣಿಮೆ ನಿಮಿತ್ತ ದಿನಾಂಕ 10 – .07 – .2025 ರಂದು ಗುರುವಾರ ಬೆಳಗ್ಗೆ 11:00 ಗಂಟೆಗೆ ನಗರದ ಇತಿಹಾಸ ಪ್ರಸಿದ್ಧ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ಗವಿಮಠ ಟ್ರಸ್ಟ್ ಹಾಗೂ ಸಮಸ್ತ ಸದ್ಭಕ್ತರ ವತಿಯಿಂದ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ. ಬ್ರ. ಡಾಟಟ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರ ಪಾದಪೂಜೆ ಮಾಡಿ ಭಕ್ತಿಸಮರ್ಪಿಸಿ ಗುರುವಿನ ಕೃಪಾಶಿರ್ವಾದ ಪಡೆದು ಗುರುವಿನ



ಧರ್ಮ ಮಾರ್ಗದ ಆಶೀರ್ವಚನ ಆಲಿಸಿ ಪ್ರಸಾದ ಸ್ವೀಕರಿಸುವುದರ ಮೂಲಕ ಗುರುಪೂರ್ಣಿಮೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಪತ್ರಿಕಾ ಪ್ರಕಟಣೆ ತಿಳಿಸಿದ್ದಾರೆ.

## ಜುಲೈ 09ರಂದು ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 08– ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗದ–2ರ ವ್ಯಾಪ್ತಿಯ 20ಎಮ್‌ವಿಎ ನಿರ್ವಹಣೆ 110/33 ಕೆವಿ ಉಪಕೇಂದ್ರದಲ್ಲಿ ಜವಾಹರ ನಗರ ವಿದ್ಯುತ್ ಮಾರ್ಗದ ಪರಿವರ್ತಕ ಬದಲಾವಣೆಯ ಕಾಮಗಾರಿಯನ್ನು ಕೈಗೊಂಡ ಪ್ರಯುಕ್ತ ಜುಲೈ 09ರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5ಗಂಟೆವರೆಗೆ ವಿದ್ಯುತ್ ವ್ಯತ್ಯಯ ಉಂಟಾಗುಲಿದ್ದು ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ. ಅಂದು ಬೆಳಿಗ್ಗೆ ತಾಯಮ್ಮಗುಡಿ, ದೇವಿನಗರ, ಅಶ್ವಿನಿ ಕಾಲೋನಿ, ಅಗ್ರೀಗೋಲ್ಡ್, ಗದ್ವಾಲ ರೋಡ, ಎಮ್.ವಿ.ಜಿ. ಲೇಔಟ್, ಜವಾಹರ ನಗರ, ಹನುಮಾನ ಟಾಕೀಸ್, ಎನ್.ಜಿ.ಓ ಕಾಲೋನಿ, ವಾಸವಿ ನಗರ ಚಾಂನಿಕ್ ಪುರಿ ಲೇಔಟ್, ಬೋಳಂದೊಡ್ಡಿ ರೋಡ್ ಸೇರಿದಂತೆ ಸುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಹೆಚ್ಚಿನ ಮಾಹಿತಿಗಾಗಿ 24*7 ಗ್ರಾಹಕರ ನಿರಂತರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532–226386 ಅಥವಾ 08532–231999ಗೆ ಸಂಪರ್ಕಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗದ–2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಲೇಜು ವಿದ್ಯಾರ್ಥಿಗಳಿಗೆ ಕಲಿಕಾ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.08–ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಬೆಂಗಳೂರು ಹಾಗೂ ದಿ ಆರ್ಟ್ ಇಂಟಿಗ್ರೇಶನ್ ಸೊಸಾಯಿಟಿ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ “ಕಾಲೇಜು ವಿದ್ಯಾರ್ಥಿಗಳಿಗೆ ಕಲಿಕಾ ಕಾರ್ಯಾಗಾರ”ವನ್ನು ಇದೇ ಜುಲೈ 10 ರಿಂದ 12 ರವರೆಗೆ ಮೂರು ದಿನಗಳ ಕಾಲ ಕಲಬುರಗಿಯ ದಿ ಆರ್ಟ್ ಇಂಟಿಗ್ರೇಶನ್ ಸೊಸೈಟಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಜುಲೈ 10 ರಂದು ಬೆಳಿಗ್ಗೆ 10.30 ಗಂಟೆಗೆ ಕಲಬುರಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರಾದ ಜಗದೀಶ್ವರಿ ಅ. ನಾಸಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಕಲಬುರಗಿ ದಿ ಆರ್ಟ್ ಇಂಟಿಗ್ರೇಶನ್ ಚಿತ್ರಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಎಂ.ಎಚ್. ಬೆಳಮಗಿ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು. ಹಿರಿಯ ಕಲಾವಿದ ವೀರೇಂದ್ರ ಶಹಾ ಹಾಗೂ ಕರ್ನಾಟಕ ಶಿಲ್ಪಕಲಾ ಅಕಾಡೆಮಿಯ ಅಧ್ಯಕ್ಷ ಎಂ.ಸಿ. ರಮೇಶ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಬಾಗಲಕೋಟೆ ಶಿಲ್ಪಕಲಾವಿದ ದಾನಯ್ಯ ಎಸ್. ಚೌಕಿಮಠ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಳ್ಳುವರು.

ಜುಲೈ 11 ರಂದು ಮಧ್ಯಾಹ್ನ 2 ರಿಂದ ಸಂಜೆ 4 ಗಂಟೆಯವರೆಗೆ ಭಿತ್ತಿಶಿಲ್ಪ ಅಂದು–ಇಂದು–ಮುಂದು ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಗುಲಬರ್ಗಾ ವಿಶ್ವವಿದ್ಯಾಲಯದ ದೃಶ್ಯಕಲಾ ಅಧ್ಯಯನ ವಿಭಾಗದ ಅಧ್ಯಾಪಕ ಡಾ. ಮಲ್ಲಿಕಾರ್ಜುನ ಸಿ. ಭಾಗೋಡಿ ಅವರು ಉಪನ್ಯಾಸ ನೀಡುವರು.

ಜುಲೈ 12 ರಂದು ಮಧ್ಯಾಹ್ನ 3 ಗಂಟೆಗೆ ಸಮಾರೋಪ ಸಮಾರಂಭ ಜರುಗಲಿದ್ದು, ಕಲಬುರಗಿ ವಿಭಾಗದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಬಸವರಾಜ್ ಹೂಗಾರ್ ಸಮಾರೋಪ ನುಡಿ ಹೇಳುವರು. ಕರ್ನಾಟಕ ಶಿಲ್ಪಕಲಾ ಅಕಾಡೆಮಿಯ ಅಧ್ಯಕ್ಷ ಎಂ.ಸಿ. ರಮೇಶ ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು. ಕಲಬುರಗಿ ದಿ ಆರ್ಟ್ ಇಂಟಿಗ್ರೇಶನ್ ಚಿತ್ರಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಎಂ.ಎಚ್. ಬೆಳಮಗಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

## ಹ.ಬೊ.ಹಳ್ಳಿ ತಾಲೂಕಿನಲ್ಲಿ ಮೊಹರಂ ಕೊನೆ ದಿನದ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಹಗರಿಬೊಮ್ಮನಹಳ್ಳಿ: ಜು.08 ತಾಲೂಕಿನ ನಂದಿಪುರ ಪುಣ್ಯಕ್ಷೇತ್ರದಲ್ಲಿ ಹಿಂದೂ ಮುಸ್ಲಿಂರ ಭಾವೈಕ್ಯತೆ ಆಚರಣೆಯಾದ ಮೊಹರಂ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಿದರು.

ಉತ್ಸವದಲ್ಲಿ ಮೌಲಾನ ಸಿರಾಜುದ್ದೀನ್(ಹಜರತ್), ದೊಡ್ಡಮನಿ ನಬೀಸಾಬ್, ಜಗಳೂರು ಖಾಸೀಂ, ದೊಡ್ಡಮನಿ ರಹಿಮಾನ್ ಸಾಬ್, ದೊಡ್ಡಮನಿ ಜಯನ್ ಸಾಬ್, ಉತ್ತಂಗಿ ರಾಜಾಸಾಬ್, ದೊಡ್ಡಮನಿ ಇಂತಿಸಾಬ್, ಅಮಾನ್, ರಾಜಾಭಕ್ಷಿ ಇತರರು ಇದ್ದರು. ವಾದ್ಯಗಳೊಂದಿಗೆ ಉತ್ಸವ ಜರುಗಿತು.

ಮೊಹರಂ ಹಬ್ಬದ ಕೊನೆ ದಿನದಂದು ಪುಣ್ಯ ಪ್ರಾಪ್ತಿಗಾಗಿ ವಿಶೇಷ ಮೆರವಣಿಗೆಯಲ್ಲಿ ಗ್ರಾ.ಪಂ.ಅಧ್ಯಕ್ಷರು, ಸದಸ್ಯರು ಗ್ರಾಮಸ್ಥರು ಪಾಲ್ಗೊಂಡಿದ್ದರು.

## ರಸ್ತೆ ಮೇಲೆ ಚರಂಡಿ ನೀರು: ಸಾಂಕ್ರಾಮಿಕ ರೋಗ ಹರಡುವ ಭೀತಿ, ಬೇಸತ್ತ ಜನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ತಾಲೂಕಿನ ನಿರ್ಣಾ ಗ್ರಾಮದ ವಾರ್ಡ್ ಸಂಖ್ಯೆ 1, 3 ಮತ್ತು 5ರ ಮುಖ್ಯ ರಸ್ತೆಗೆ ಸೂಕ್ತ ರಸ್ತೆ, ಚರಂಡಿ ವ್ಯವಸ್ಥೆ ಇಲ್ಲದಿರುವುದರಿಂದ ರಸ್ತೆಗಳೇ ಚರಂಡಿಯಂತಾಗಿವೆ. ಇದರಿಂದ ಗ್ರಾಮಸ್ಥರು ಬೇಸತ್ತು ಹೋಗಿದ್ದಾರೆ. ಈ ಗ್ರಾಮದಲ್ಲಿ ಸುಮಾರು ಸಾವಿರ ಮನೆಗಳಿವೆ. ಆದರೆ ಸೂಕ್ತ ಚರಂಡಿ ವ್ಯವಸ್ಥೆ ಇಲ್ಲದಿರುವುದರಿಂದ ಹೊಲಸು ನೀರು ರಸ್ತೆಯ ಮೇಲೆಯೇ ಹರಿಯುತ್ತಿದೆ. ಇದರಿಂದ ಎಲ್ಲೆಡೆ ದುರ್ವಾಸನೆ ಬೀರುತ್ತಿದೆ. ರಸ್ತೆಯ ಮೇಲೆ ಚರಂಡಿ ನೀರು ತುಂಬಿ ಹರಿಯುತ್ತಿದೆ. ಇದರಿಂದ ಅಕ್ಕ ಪಕ್ಕದ ಮನೆಯವರು, ಪಾದಚಾರಿಗಳು ತುಂಬಾ ತೊಂದರೆ ಅನುಭವಿಸುವಂತಾಗಿದೆ. ಈ ಬಗ್ಗೆ ಪಂಚಾಯತ ಅಧ್ಯಕ್ಷೆ, ಸದಸ್ಯರು, ಅಭಿವೃದ್ಧಿ ಅಧಿಕಾರಿಗೆ ಹಲವು ಬಾರಿ ಮನವಿ ಮಾಡಿದರೂ ಪ್ರಯೋಜನವಾಗುತ್ತಿಲ್ಲ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಸ್ತೆ ಮೇಲೆ ಹರಿಯುವ ಚರಂಡಿ ನೀರಿನಿಂದ ಸೊಳ್ಳೆಗಳ ಕಾಟ ದಿನದಿಂದ ದಿನಕ್ಕೆ ವಿಪರೀತವಾಗುತ್ತಿದೆ. ಕೆ ಣ ಟಿ ಜ ಜ ಜು ಟಿ ಜ ಜ ಳ ಚೆ ನೀರಿನ ಮೇಲೆಯೇ ಮಕ್ಕಳು, ಮಹಿಳೆಯರು, ವಯೋವೃದ್ಧರು ನಿತ್ಯ ಓಡಾಟ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಗ್ರಾಮಸ್ಥರಿಗೆ ಸಾಂಕ್ರಾಮಿಕ ರೋಗ ಭೀತಿ ಕಾಡುತ್ತಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಗ್ರಾಮಗಳ ಅಭಿವೃದ್ಧಿಗೆ ಕೋಟಿ ಕೋಟಿ ರೂಪಾಯಿ ವೆಚ್ಚ ಮಾಡುತ್ತಿವೆ. ಆದರೆ ಕೆಲಸವೆಲ್ಲವು ಕಡತಗಳಲ್ಲಿ ಆಗುತ್ತಿದೆ. ಗ್ರಾಮದ ಅಭಿವೃದ್ಧಿ ಮಾಡಬೇಕಾದ ಅಧಿಕಾರಿಗಳು ಮಾತ್ರ ಇದಕ್ಕೂ ನಮಗೂ ಸಂಬಂಧವಿಲ್ಲ ಎನ್ನುವಂತೆ ವರ್ತಿಸುತ್ತಿರುವುದು ಅವರ ಬೇಜವಾಬ್ದಾರಿತನಕ್ಕೆ ಸಾಕ್ಷಿಯಾಗಿದೆ ಎಂದು ಗ್ರಾಮಸ್ಥರ ಮಾತಾಗಿದೆ.



“ ಈಗಾಗಲೇ ಹಲವು ಬಾರಿ ಇಲ್ಲಿನ ಅವ್ಯವಸ್ಥೆಯ ಬಗ್ಗೆ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರ ಗಮನಕ್ಕೂ ತಂದಿವೆ, ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೂ ತಂದಿವೆ ಆದರೂ ಕೂಡ ಅಭಿವೃದ್ಧಿ ಅಧಿಕಾರಿಯವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿಲ್ಲಾ, ಬದಲಾಗಿ ಕಛೇರಿಗೆ ಹೋಗಿ ತಿಳಿಸಿದ್ದಾಗ ಎರಡು ಮೂರು ದಿನಗಳಲ್ಲಿ ಬಂದು ಸರಿಪಡಿಸಲಾಗುವುದು ಎಂದು ಆಶ್ವಾಸನೆ ನೀಡುತ್ತಿದ್ದಾರೆ. ಈ ಸಮಸ್ಯೆ ಬಗ್ಗೆ ಹರಿಸದೆ ಇದಲ್ಲಿ ಗ್ರಾಮ ಪಂಚಾಯತ್ ಮುಂದೆ ಧರಣಿ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

**–ಜೆಡಿಎಸ್ ಯುವ ಮುಖಂಡ ಭರತರೆಡ್ಡಿ ಚಿಟನಳ್ಳಿ ನಿರ್ಣಾ**

ನಾನು ವೈಯಕ್ತಿಕವಾಗಿ ಸ್ಥಳ ಪರಿಶೀಲಿಸಿ ಎರೆಡು ದಿನಗಳಲ್ಲಿ ಸಮಸ್ಯೆ ಬಗ್ಗೆ ಹರಿಸುವಂತೆ ಗ್ರಾಪಂ ಅಭಿವೃದ್ಧಿ ಅಧಿಕಾರಿಗೆ ಸೂಚಿಸುತ್ತೇನೆ.

**–ಲಕ್ಷ್ಮಿ ಬಿರಾದಾರ್ ಕಾರ್ಯನಿರ್ವಾಹಕ ಅಧಿಕಾರಿ ಚಿಟಗುಪ್ಪ**

## ಜುಲೈ 10 ರಿಂದ 13 ರವರೆಗೆ ಮೂರು ದಿನಗಳ ಕಾಲ ನೀರು ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.08–ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಸರಡಗಿ ಭೀಮಾ ನದಿಯಿಂದ ನೀರು ಸರಬರಾಜಾಗುವ ಮುಖ್ಯ ಕೊಳವೆ ಮಾರ್ಗ ಸರಡಗಿಯಿಂದ ಕೊಟನೂರ ನೀರು ಶುದ್ಧೀಕರಣ ಘಟಕದ ಮಧ್ಯದಲ್ಲಿ ಇರುವ ಪೈಪ್ ಹಾಗೂ ಮ್ಯಾನಿಫೋಲ್ಡ್‌ಗಳ ತುರ್ತು ದುರಸ್ತಿ ಕಾರ್ಯ ಕೈಗೊಂಡಿರುವ ಹಿನ್ನೆಲೆಯಲ್ಲಿ ಕೊಟನೂರ ಹಾಗೂ ಶೋರಗುಂಬಜ್ ನೀರು ಶುದ್ಧೀಕರಣ ಘಟಕದ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಇದೇ ಜುಲೈ 10 ರಿಂದ 13 ರವರೆಗೆ 3 ದಿನಗಳ ಕಾಲ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ನಗರದ ಸಾರ್ವಜನಿಕರು ಮಹಾನಗರಪಾಲಿಕೆ, ಕೆಯುಐಡಿಎಫ್‌ಸಿ ಹಾಗೂ ಮೆ॥ ಎಲ್ ಆಂಡ್ ಟಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಕಲಬುರಗಿ ಕೆಯುಡಬ್ಲ್ಯುಎಸ್‌ಎಂಪಿ–ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

ಕಲಬುರಗಿ ನಗರದ ಬಿದ್ದಾಪೂರ, ರಾಯರಗುಡ್ಡಿ, ವಿಶಾಲ ನಗರ, ಅಂಬಿಕಾ ನಗರ, ಪಿಂಪ್ಳಿ ಟೆಂಪಲ್, ಪಿ ಆಂಡ್ ಟಿ ಕಾಲೋನಿ, ವಿದ್ಯಾನಗರ, ಯಶವಂತ ನಗರ, ಕರುಣೇಶ್ವರ ನಗರ, ಗಣೇಶ ನಗರ, ಭಾಗ್ಯವಂತಿ ನಗರ, ದೇವಾ ನಗರ, ತಿಲಕ್ಕ ನಗರ, ಬನಶಂಕರಿ ನಗರ, ಹರಿ ನಗರ, ಗಾಭರೆ ಲೇಔಟ್, ಜೇಮ್‌ಶೇಟಿ ನಗರ, ಕೃಷ್ಣನಗರ, ತಾರಫೈಲ್, ಉದಯ ನಗರ, ಎನ್‌ಜಿಓ ಕಾಲೋನಿ, ಜೇವರ್ಗಿ ಕಾಲೋನಿ, ಮಾಕಾ ಲೇಔಟ್, ಸಂತೋಷ ಕಾಲೋನಿ, ಪಿಡಬ್ಲ್ಯೂಡಿ ಕಾಲೋನಿ, ಬ್ಯಾಂಕ್ ಕಾಲೋನಿ, ಬಾಲಾಜಿ ನಗರ, ರಹೆಮತ್ ನಗರ, ಸಂಪಿಕೆ ನಗರ, ಬುದ್ಧ ನಗರ, ರೇವಣಸಿದ್ದೇಶ್ವರ ಕಾಲೋನಿ, ಸಾಯಿ ನಗರ, ಓಜಾ ಲೇಔಟ್, ಸ್ವಾಮಿ ವಿವೇಕಾನಂದ ನಗರ, ಪ್ರಗತಿ ಕಾಲೋನಿ ಹಾಗೂ ಸಿಐಬಿ ಕಾಲೋನಿ.

ಶಕ್ತಿನಗರ, ಸ್ಟೇಷನ್ ಬಜಾರ, ಐವಾನ್ ಶಾಹಿ, ಎತೀಮಖಾನಾ, ಶಾಂತಿ ನಗರ, ವಿಠ್ಠಲ ನಗರ, ಖುಬಾ ಪ್ಲಾಟ್, ಮಿಸಬಾ ನಗರ, ಅಜ್ಮರ್ ಕಾಲೋನಿ, ಕರಿಮ ನಗರ, ಗಾಲಿಫ್ ಕಾಲೋನಿ, ಮಹಮ್ಮದ ಚೌಕ್, ಖಾದಿಲ್ ಚೌಕ್, ಶಿವನಗರ, ಸಿದ್ಧರಾಮೇಶ್ವರ ಕಾಲೋನಿ, ನಬಿ ಕಾಲೋನಿ, ಶೇಖ ರೋಜಾ, ಕೈಲಾಸ ನಗರ, ಜಿಆರ್ ನಗರ, ಕಸ್ತೂರಿ ನಗರ, ಆಶರ್ಯ ಕಾಲೋನಿ, ಪೂಜಾ ಕಾಲೋನಿ, ಜಾಗೃತಿ ಕಾಲೋನಿ, ಓಂ ನಗರ, ಜಮ್‌ಜಮ್ ಕಾಲೋನಿ, ಜುಬೇರ್ ಕಾಲೋನಿ, ಅಜಾದಪೂರ ಕಾಲೋನಿ, ನಾಯ್ಡು ಕಾಲೋನಿ ಹಾಗೂ ಮಿನಿ ಅಮ್ಮಲವಾಡಿ ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಅವರು ತಿಳಿಸಿದ್ದಾರೆ.

## ಕಲಬುರಗಿ, ವಿದ್ಯಾರ್ಥಿ ವೇತನ ಯೋಜನೆಯಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.08. –ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ 2025–26ನೆ ಸಾಲಿಗೆ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ಸೇರಿದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ದ, ಸಿಖ್ ಮತ್ತು ಪಾರ್ಸಿ) ವಿದ್ಯಾರ್ಥಿಗಳಿಂದ ವಿದ್ಯಾರ್ಥಿವೇತನ ಯೋಜನೆಯಡಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಅರ್ಹ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯವು 15 ಲಕ್ಷ ರೂ. ಮೀರಿರಬಾರದು. ಕೋಸ್ ಪೂರ್ಣಕಾಲಿಕ ಸ್ನಾತಕೋತ್ತರ ಇರಬೇಕು. ವಿದ್ಯಾರ್ಥಿಗಳ ಗರಿಷ್ಠ ವಯೋಮಿತಿ 38 ವರ್ಷ ಮೀರಬಾರದು. ವಿದ್ಯಾರ್ಥಿವು ವ್ಯಾಸಂಗ ಮಾಡುತ್ತಿರುವ ವಿದೇಶಿ ವಿಶ್ವವಿದ್ಯಾಲಯವು ಕ್ಯೂಎಸ್ ಟಾಪ್ 500 ಯುನಿವರ್ಸಿಟಿ ರ್‍ಯಾಂಕಿಂಗ್ (QS Top 500 University Ranking) ಪಟ್ಟಿಯಲ್ಲಿ ಸ್ಥಾನ ಪಡೆದಿರಬೇಕು.

ಅರ್ಜಿದಾರರು https:/sevasindhu.karnataka.gov.in/sevasindhu/Departmentservices ಲಿಂಕ್‌ದಲ್ಲಿ ಆನ್‌ಲೈನ್ ಮೂಲಕ 2025ರ ಸೆಪ್ಟೆಂಬರ್ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ನಂತರ ಅರ್ಜಿ ಸಲ್ಲಿಸಿದ ಪ್ರತಿಯನ್ನು ಅಗತ್ಯ ದಾಖಲೆಗಳೊಂದಿಗೆ ಅಲ್ಪಸಂಖ್ಯಾತರ ನಿರ್ದೇಶನಾಲಯ, ನಂ–16ಸಿ, ಮೌಲಾನಾ ಅಬ್ದುಲ್ ಕಲಂ ಆಜಾದ್ ಭವನ, ಮಿಲ್ಲರ್ ಟ್ಯಾಂಕ್ ಬೆಡ್‌ರಸ್ತೆ, ವಸಂತನಗರ ಬೆಂಗಳೂರು–560052 ಇಲ್ಲಿಗೆ ನಿಗದಿತ ದಿನಾಂಕದೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧಿಕೃತ ಜಾಲತಾಣ htts://dom.karnataka.gov.in ವನ್ನು ಸಂಪರ್ಕಿಸಲು ಕೋರಲಾಗಿದೆ.

# ಮನೆ ಮೆಟ್ಟಿಲ ಮೇಲಿಂದ ಪ್ರಾರಂಭವಾದ ಸಾಧನೆಯ ಪಥ – ಬೀದರನ ಸಂತೋಷ್ ಗಿರಿ ಅವರ ಡ್ರ್ಯಾಗನ್ ಫ್ರೂಟ್ ಕೃಷಿಯ ದೀರ್ಘ ಹಾದಿ

ಒಬ್ಬ ಸಾಧಕನ ಪಥವು ಗಟ್ಟಿಯಾದ ಕನಸಿನಿಂದ ಪ್ರಾರಂಭವಾಗುತ್ತದೆ. ಈ ಕನಸು ಬೆಳೆಯಬೇಕೆಂದರೆ ಜಾಗದ ಅಗತ್ಯವಿಲ್ಲ – ಬೇಕಾಗುವದು ನಂಬಿಕೆ, ತಾಳ್ಮೆ ಮತ್ತು ಹಸಿರು ಮನಸ್ಸು. ಇಂಥದ್ದೇ ಒಂದು ಪ್ರೇರಣಾತ್ಮಕ ಹಸಿರು ಪಯಣವನ್ನು ಅನುಭವಿಸಿ, ಮನೆಯ ಮೆಟ್ಟಿಲ ಮೇಲಿಂದಲೇ ಡ್ರ್ಯಾಗನ್ ಫ್ರೂಟ್ (ಆಡಿಚಿರಂಟ ಈಡಿಣುಣ) ಕೃಷಿಯಲ್ಲಿ ಅದ್ಭುತ ಯಶಸ್ಸು ಗಳಿಸಿರುವ ವ್ಯಕ್ತಿ ಬೀದರನ M.Sc. in Biochemistry **ಹಾಗೂ** M.Sc. in Botany ಪದವೀಧರ, ಉಪನ್ಯಾಸಕ ಶ್ರೀ ಸಂತೋಷ್ ಗಿರಿ (Santosh Giri) s/o Chandrakant Mailurkar.




ಈ ಹಸಿರು ಪ್ರಯಾಣ ಆರಂಭವಾಗಿದ್ದು 2017ರಲ್ಲಿ. ಗಲ್ಬರ್ಗಾದ ಬಿಗ್ ಬಜಾರ್‌ನಲ್ಲಿ ಸಂಚರಿಸುತ್ತಿದ್ದಾಗ ಅವರು ಡ್ರ್ಯಾಗನ್ ಫ್ರೂಟ್ ಎಂಬ ಅಪರೂಪದ ಹಣ್ಣು ಕಂಡರು. ಅಲ್ಲಿ ಒಂದು ಹಣ್ಣಿಗೆ ₹100 ಬೆಲೆ ಇಟ್ಟಿರುವುದನ್ನು ನೋಡಿ ಅವರ ಮನಸ್ಸು ಆಶ್ಚರ್ಯದಿಂದ ಕೂಡಿತು. ಬಿದರ್ ಮಾರುಕಟ್ಟೆಯಲ್ಲಿ ಈ ಹಣ್ಣು ಲಭ್ಯವಿರದ ಕಾರಣ, ಅವರು ತಕ್ಷಣವೇ ಇದನ್ನು ಬೆಳೆಯುವ ಬಗ್ಗೆ ಕುತೂಹಲದಿಂದ ಅಧ್ಯಯನ ಆರಂಭಿಸಿದರು.

2018ರಲ್ಲಿ ಅವರು ತೀವ್ರವಾದ ಆರೋಗ್ಯ ಸಮಸ್ಯೆ ಎದುರಿಸಿದರು –ರಕ್ತದಲ್ಲಿನ ಪ್ಲೇಟ್ಲೆಟ್ ಪ್ರಮಾಣ ಕುಸಿತಗೊಂಡಿತ್ತು. ವೈದ್ಯರು ಡ್ರ್ಯಾಗನ್ ಫ್ರೂಟ್ ಸೇವನೆ ಮಾಡಲು ಸಲಹೆ ನೀಡಿದಾಗ, ಇದೇ ಹಣ್ಣು ಮನೆ ಮೇಲೆಯೇ ಬೆಳೆಸಬೇಕೆಂಬ ನಿರ್ಧಾರ ಗಟ್ಟಿಯಾದ ಕನಸಾಗಿ ಅವರ ಮನಸ್ಸಿನಲ್ಲಿ ಮೂಡಿತು. ಆದರೆ ಸಸಿಗಳನ್ನು ಎಲ್ಲಿಂದ ತರಬೇಕು ಎಂಬ ಪ್ರಶ್ನೆ ಅವರ ಮುಂದಿತ್ತು.

2019ರಲ್ಲಿ ಅಔಗಿIಆ ಲಾಕ್‌ಡೌನ್ ಸಮಯದಲ್ಲಿ India Mart ಮೂಲಕ ಹುಡುಕಿದ Santosh ಅವರು ಪುಣೆಯ ಮಾರಾಟಗಾರನಿಂದ ನಾಲ್ಕು ಸಸಿಗಳನ್ನು ಖರೀದಿಸಿದರು. Terrace ಮೇಲೆ ಪಾಟಗಳಲ್ಲಿ ಅವುಗಳನ್ನು ನೆಟ್ಟರು. ಆದರೆ ಅವರ ಅಜ್ಜಿ ಈ ಗಿಡಗಳನ್ನು 'Papaskali' ಎಂದು ಕರೆ–ಯುತ್ತಾ, ಅದು ಮನೆಗೆ ಅಶುಭ ಎಂಬ ನಂಬಿಕೆಯಿಂದ ಹೊರಗೆ ಎಸೆದುಬಿಟ್ಟರು. ಆದರೆ ತಮ್ಮ ಗಿಡಗಳ ಮೇಲಿನ ಪ್ರೀತಿ ಮತ್ತು ನಂಬಿಕೆಯು ಕಮ್ಮಿಯಾಗದ ಸಂತೋಷ್, ಮತ್ತೆ ಸಸಿಗಳನ್ನು ತರಿಸಿ ತೆಂಗಿನ ಮರದ ಅಡಿಯಲ್ಲಿ ನೆಟ್ಟರು. ಇದಾದ ಕೆಲವೇ ದಿನಗಳಲ್ಲಿ ಮಳೆ ಮತ್ತು ಗಾಳಿಯಿಂದ ತೆಂಗಿನ ಎಲೆ ಬಿದ್ದು ಒಂದು ಸಸಿ ಸಂಪೂರ್ಣ ನಾಶವಾಯಿತು. ಉಳಿದ ಮೂರು ಸಸಿಗಳನ್ನು ಅವರು ಮರುವಾಗಿ terrace ಮೇಲೆ ತಂದು, "ಹೊಸ ಮಡಕೆಗಳಲ್ಲಿ ನೆಟ್ಟು ಬೆಳೆಯಲಾರಂಭಿಸಿದರು. ಗಿಡಗಳು ಬೆಳೆಯುತ್ತಿದ್ದವು, ಆದರೆ ತಗ್ಗು–ಚಿಗುರುಗೊಳಿಸಲು ಬೆಂಬಲ ವ್ಯವಸ್ಥೆ ಬೇಕಾಗಿತ್ತು. 2021ರಲ್ಲಿ ಅವರು ಉಪನ್ಯಾಸಕರಾಗಿ ಕೆಲಸಕ್ಕೆ ಸೇರಿದ ತಕ್ಷಣ, ತಮ್ಮ ಮೊದಲ ಸಂಬಳದಿಂದ terrace ಮೇಲೆ ಲೋಹದ ಫ್ರೇಮ್ (metal frame) ನಿರ್ಮಿಸಿದರು.

ಈ ನಡುವೆ ಅವರು ಈ ace-book ಮೂಲಕ ಕೇರಳದ ಒಬ್ಬ ರೈತನನ್ನು ಸಂಪರ್ಕಿಸಿ, ಇನ್ನಷ್ಟು ಜಾತಿಯ ಡ್ರ್ಯಾಗನ್ ಫ್ರೂಟ್ ಸಸಿಗಳನ್ನು ಖರೀದಿಸಿದರು. 2022ರಲ್ಲಿ ಪಂಜಾಬ್‌ನ ಲುಧಿಯಾನಾದ ರೈತನಿಂದ ವಿದೇಶದಿಂದ ತರಲಾಗಿದ ಹಳದಿ ಬಣ್ಣದ ನಾಲ್ಕು ಸಸಿಗಳನ್ನು ಪಡೆದು ತಮ್ಮ ತೋಟವನ್ನು ಮತ್ತಷ್ಟು ವಿಶಿಷ್ಟಗೊಳಿಸಿದರು. ಈ ರೀತಿ terrace ಮೇಲೆ 12ಕ್ಕೂ ಹೆಚ್ಚು ಜಾತಿಗಳ ಡ್ರ್ಯಾಗನ್ ಫ್ರೂಟ್ ಗಿಡಗಳನ್ನು ಬೆಳೆಸುವಲ್ಲಿ ಯಶಸ್ವಿಯಾಗಿದರು.

ಸಂತೋಷ್ ಅವರು ಬೆಳೆಸಿದ ಪ್ರಮುಖ ಜಾತಿಗಳು ಹೀಗಿವೆ –

Yellow Varieties: Thai Gold, Australian Gold, Israeli Yellow, Ecuadorian Polara (USA)

Pink Varieties: Siyan Red, Moroccan, American Beauty, Red Jaina, Bruni, Godzilla

White Variety: Malaysian White

ಅವರ terrace area ಒಟ್ಟು 228 ಚದರ ಅಡಿ. ಈ ಜಾಗದಲ್ಲಿ 13 ಪಾಟಗಳಲ್ಲಿ ಗಿಡಗಳನ್ನು ನೆಟ್ಟಿದ್ದಾರೆ. ಇದರಿಂದಲೇ,

2022ರಲ್ಲಿ: 20 ಕೆಜಿ ಹಣ್ಣು, 2023ರಲ್ಲಿ: 35 ಕೆಜಿ, 2024ರಲ್ಲಿ: 50 ಕೆಜಿ , 2025ರ ಜೂನ್ ತಿಂಗಳ ಮೊದಲ ಸೀಸನ್‌ನಲ್ಲಿ: 300/350 ಕೆಜಿ bumper harvest ದೊರೆತಿದೆ!

ಆದರೆ ವಿಶೇಷವೆಂದರೆ – ಈ ಎಲ್ಲಾ ಹಣ್ಣುಗಳನ್ನು ಅವರು ಮಾರಾಟಕ್ಕೆ ಇಡಲಿಲ್ಲ. ಯಾವುದೆ ಲಾಭಾಸಕ್ತಿಯಿಲ್ಲದೆ, ಅವರು ಬೆಳೆದ ಪ್ರತಿಯೊಂದು ಹಣ್ಣನ್ನೂ ತಮ್ಮ ಸ್ನೇಹಿತರು, ಕುಟುಂಬದವರು, ವಿದ್ಯಾರ್ಥಿಗಳು ಮತ್ತು ಹಿತೈಷಿಗಳೊಂದಿಗೆ ಹಂಚಿಕೊಂಡಿದ್ದಾರೆ.

ಇದು ಕೇವಲ ಹಣ್ಣುಗಳ ಹಂಚಿಕೆ ಅಲ್ಲ – ಇದು ಪ್ರೀತಿ, ವಿಜ್ಞಾನ ಮತ್ತು ಔದಾರ್ಯದ ಹಂಚಿಕೆ. Terrace ಗೆ ಭೇಟಿ ಕೊಟ್ಟ ಪ್ರತಿಯೊಬ್ಬರಿಗೂ "ಈ ಹಣ್ಣು ನಿಮ್ಮದ್ದೇ" ಎಂಬ ಆತ್ಮೀಯ ಮಾತಿನಿಂದ ಅವರು ಗಿಡದ ಜೊತೆಗೆ ಸ್ನೇಹವನ್ನೂ ಬೆಳೆಸಿದವರು. ಅಲ್ಲದೆ, ತೋಟಕ್ಕೆ ಬರುವ ಪ್ರತಿಯೊಬ್ಬರಿಗೂ ಅವರು ಡ್ರ್ಯಾಗನ್ ಫ್ರೂಟ್ ಕೃಷಿಯ ಸಂಪೂರ್ಣ ಮಾಹಿತಿ ಹಂಚಿಕೊಳ್ಳುತ್ತಾರೆ – ಈ ಹಣ್ಣಿನ ಪೋಷಕಾಂಶ, ಬೆಳೆಯುವ ವಿಧಾನ, ವಿವಿಧ ಜಾತಿಗಳ ವೈಶಿಷ್ಟ್ಯತೆ, ಸಾವಯವ ಪರಿಹಾರ ಮತ್ತು ಕಾಳಜಿಯ ವಿಧಾನಗಳವರೆಗೆ ಎಲ್ಲವನ್ನೂ ಉದಾರಮನಸ್ಸಿನಿಂದ ವಿವರಿಸುತ್ತಾರೆ.

ಮತ್ತೊಂದು ಮಹತ್ವದ ಅಂಶ – ಅವರು ಬೆಳೆಸುವ ಎಲ್ಲಾ ಹಣ್ಣುಗಳು ಸಂಪೂರ್ಣವಾಗಿ ಸಾವಯವ (Organic). ಯಾವುದೇ ರಾಸಾಯನಿಕಗೊಬ್ಬರ ಅಥವಾ ಕೀಟನಾಶಕವಿಲ್ಲದೆ, ಶುದ್ಧ ನೈಸರ್ಗಿಕ ವಿಧಾನಗಳಲ್ಲಿ



ಕೃಷಿ ಮಾಡಲಾಗುತ್ತದೆ. ಇದು ಆರೋಗ್ಯಕ್ಕೂ ಪರಿಸರಕ್ಕೂ ಸಹ ಅನುಕೂಲಕರವಾಗಿದೆ.

ಡ್ರ್ಯಾಗನ್ ಫ್ರೂಟ್ ಗಿಡವು climbing cactu ಪ್ರಭೇದಕ್ಕೆ ಸೇರಿದದ್ದು. ಇದು ಹೆಚ್ಚು ಬೆಳಕಿನ ಅಗತ್ಯವಿರುವ ಗಿಡ, ಕಡಿಮೆ ನೀರಿನಲ್ಲಿ ಬೆಳೆಯಬಲ್ಲದು. Terrace ಮೇಲೆ ಬೆಳೆಸಲು ಅತ್ಯುತ್ತಮ ಆಯ್ಕೆ. ಇದರ ಹಣ್ಣುಗಳು ವಿಟಮಿನ್ ಅ, ಫೈಬರ್, ಕ್ಯಾಲ್ಸಿಯಂ, ಐರನ್, ಆಕ್ಸಿಡೆಂಟ್ಸ್ ಮುಂತಾದ ಪೋಷಕಾಂಶಗಳಿಂದ ಸಮೃದ್ಧ. ಇದು ರೋಗ ನಿರೋಧಕ ಶಕ್ತಿ ಹೆಚ್ಚಿಸಲು, ಪ್ಲೇಟ್ಲೆಟ್ ಪುನಃಸ್ಥಾಪನೆಗೆ, ಜೀರ್ಣಕ್ರಿಯೆ ಸುಧಾರಣೆಗೆ ಮತ್ತು ತೂಕ ಇಳಿಕೆಗೂ ಸಹಾಯಮಾಡುತ್ತದೆ. ಹೀಗೆ ಣಜಡಿಡಿಚಿಛಿಜ ಮೇಲೆ ಬೆಳೆದ ಹಣ್ಣುಗಳು ಮಾರುಕಟ್ಟೆಯಲ್ಲಿ ₹160 ರಿಂದ ₹400 ರಷ್ಟು ಬೆಲೆಯನ್ನೂ ಹೊಂದಿದ್ದರೂ, ಸಂತೋಷ್ ಅವರು ಹಣಕ್ಕಿಂತ ಹೆಚ್ಚು ಮೌಲ್ಯ ನೀಡಿದ್ದು ಮಾನವೀಯತೆಗೆ. ಇದು terrace gardening ನ ಅತಿ ಸುಂದರ ಮಾದರಿ.

ಯುವಕರಿಗೆ ಸಂದೇಶ:

ಈ ಹಸಿರು ಪಯಣವು ಯುವಕರಿಗೆ ಹೇಳಬೇಕಾದುದೆಂದರೆ–ಕನಸು ಎಷ್ಟೇ ದೊಡ್ಡದಾದರೂ, ಜಾಗ ಚಿಕ್ಕದಾಗಿರಬಹುದು. ಖಿಜಡಿ–ಡಿಚಿಛಿಜ ರಂಚಿಡಿಜಜಟಿಟಿಂ ಕೇವಲ ಹವ್ಯಾಸವಲ್ಲ – ಇದು ಸ್ವಾವಲಂಬನೆ, ಆರೋಗ್ಯ ಮತ್ತು ಪರಿಸರ ಪ್ರೀತಿಯ ಸಂಕೇತ. ವಿಜ್ಞಾನ ಮತ್ತು ಹಸಿರುತನವನ್ನು ಒಟ್ಟಿಗೆ ಜೋಡಿಸಿದಾಗ, ಮನೆ ಮೇಲೆ ಬೆಳೆದ ಗಿಡಗಳು ಸಹ ಸಾವಿರಾರು ಹಣ್ಣುಗಳನ್ನು ನೀಡುತ್ತವೆ ಎಂಬುದಕ್ಕೆ ಸಂತೋಷ್ ಗಿರಿ ಅವರು ಜೀವಂತ ಉದಾಹರಣೆ.

ಯುವಕರು ತಮ್ಮ ಸಮಯವನ್ನು terrace ಮೇಲೆ ಹಸಿರು ಕನಸುಗಳನ್ನು ಬೆಳೆಸುವಲ್ಲಿ ಬಳಸಿದರೆ, ನಿಸರ್ಗವೂ, ನಂಬಿಕೆಯೂ, Neighborhood ಕೂಡ ಹಸಿರಾಗುತ್ತದೆ.

ಅಂತಿಮವಾಗಿ, ಸಂತೋಷ್ ಗಿರಿ ಅವರ ಸಾಧನೆ ನಮಗೆ ಈ ಪಾಠವನ್ನು ಕಲಿಸುತ್ತದೆ – ಶ್ರದ್ಧೆ, ಶ್ರಮ, ತಾಳ್ಮೆ ಮತ್ತು ವೈಜ್ಞಾನಿಕ ಮನೋಭಾವ ಇವೆಲ್ಲ ಒಂದಾಗಿದಾಗ ಕನಸುಗಳು ಹಣ್ಣಾಗಿ ಬಿದ್ದು ಬರುತ್ತವೆ. ಹಸಿರು ಕನಸಿಗೆ ಬಣ್ಣ, ನೆನೆಪು, ಸಾರ್ಥಕತೆ ಎಲ್ಲವೂ ದೊರೆಯುತ್ತದೆ –ಮನೆ ಮೆಟ್ಟಿಲ ಮೇಲಿಂದ!



**ಲೇಖಕ:**
**ರೋಹಿತ್ ವಿಜಯ್ ಜಿರೋಬೆ**
**ಸಸ್ಯಶಾಸ್ತ್ರ ಉಪನ್ಯಾಸಕ,**
**ಬೀದರ.**

# ಭವಿಷ್ಯದ ಜೀವನ ರೂಪಿಸಿಕೊಳ್ಳುವಲ್ಲಿ ಕೈಗಾರಿಕಾ ತರಬೇತಿ ತುಂಬಾ ಮುಖ್ಯ : ಎಸ್ ಆರ್ ಹಿರೇಮಠ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆ ಕುಕನೂರ ತಾಲೂಕಿನ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಶಿಕ್ಷಣ ಪಡೆದವರು ಬೇಗನೆ ಸ್ವಾವಲಂಬಿಗಳಾಗುತ್ತಿದ್ದು, ಭವಿಷ್ಯದ ಜೀವನ ರೂಪಿಸಿಕೊಳ್ಳುವಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಪಾತ್ರ ಹೇಳಿದಾಗಿದೆ ಎಂದು ನಿವೃತ್ತ ಪ್ರಾಚಾರ್ಯ ಎಸ್ ಆರ್ ಹಿರೇಮಠ ಹೇಳಿದರು.




ಅವರು ಮಂಡಲಗಿರಿಯ ಶ್ರೀ ಜಗದ್ಗುರು ತೋಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಎರಡನೇ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ್ದರು.

ಓದಿನಲ್ಲಿ ಆಸಕ್ತಿ, ಮಾಡುವ ಕಾಯಕದಲ್ಲಿ ನಿಷ್ಠೆ, ಬದುಕಿನಲ್ಲಿ ಛಲ, ಇತರರಿಗೆ ಮಾದರಿಯಾಗಬಲ್ಲ ಜೀವನ ಕ್ರಮ ಇವುಗಳು ನಮ್ಮವಾಗಿದ್ದರೆ ಹೆತ್ತವರಿಗೂ, ಶಿಕ್ಷಣ ಸಂಸ್ಥೆಗೆ, ನಮ್ಮ ಜೀವನಕ್ಕೂ ಬೆಲೆ ಸಿಕ್ಕಂತಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಭಾರ ಪ್ರಾಚಾರ್ಯ ಸಿ ಎಸ್ ಅಂಗಡಿ ಮಾತನಾಡಿ, ಕೈಗಾರಿಕಾ ವಲಯಗಳಲ್ಲಿ ಮಾನವ ಸಂಪನ್ಮೂಲದ ಬೇಡಿಕೆ ಹೆಚ್ಚುತ್ತಿದೆ. ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ತರಬೇತಿ ಪಡೆದ ತರಬೇತುದಾರರಿಗೆ ವಿವಿದ ಅವಕಾಶಗಳಿದ್ದು ಅವುಗಳ ಸದುಪಯೋಗವನ್ನು ಪಡೆದುಕೊಳ್ಳಬೇಕೆಂಬ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಹನುಮಂತಪ್ಪ ಉಪ್ಪಾರ, ವಿ ಎಚ್ ಮೇಟಿ, ಎಸ್ ಬಿ ಚಂಗಳಿ, ಎಸ್ ಸಿ ಪಾಟೀಲ, ಸಿಬ್ಬಂದಿ ವರ್ಗ, ತರಬೇತುದಾರರು ಹಾಜರಿದ್ದರು.

# ರೀಡ್ ಸಂಸ್ಥೆಯ ಮುಖ್ಯಸ್ಥರಿಂದ ನರೇಗಾದಡಿ ಅನುಷ್ಠಾನಗೊಂಡ ಕಾಮಗಾರಿಗಳ ವೀಕ್ಷಣೆ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ತಾಲೂಕಿನ ರಾಜೂರ, ಕುದರಿಮೋತಿ ಗ್ರಾಮ ಪಂಚಾಯತಿಗೆ ಕೇಂದ್ರ ಸರ್ಕಾರದ ಗ್ರಾಮೀಣ ಅಭಿವೃದ್ಧಿ ಮಂತ್ರಾಲಯದಿಂದ ಆಯ್ಕೆಗೊಂಡ ಹೈದ್ರಾಬಾದ್ಮೂಲದ –ಖಇಇಆ ಸಂಸ್ಥೆಯ ಮುಖ್ಯಸ್ಥರಾದ ಡಾ. ದಾಯಕರ್ ರಡ್ಡಿ ರವರು ಕೇಂದ್ರ ಸರ್ಕಾರದ ಪ್ರಾಯೋಜಿತ ಯೋಜನೆಗಳ ಅಡಿಯಲ್ಲಿ ಅನುಷ್ಠಾನ ಬಗ್ಗೆ ಪರಿವೀಕ್ಷಣೆ ಮಾಡಿದರು.

ಸಂಧ್ಯಾ ಸುರಕ್ಷಾ ಯೋಜನೆಯ ಅಡಿಯಲ್ಲಿ ಫಲಾನುಭವಿವಾರು ಮಾಹಿತಿ ಪಡೆದು, ಕಾಲಮಿತಿ ಹಾಗೂ ನಿಖರವಾಗಿ ವೃದ್ದಾಪ್ಯ ವೇತನ ಬರುವ ಬಗ್ಗೆ ಫಲಾನುಭವಿಯಿಂದ ಮಾಹಿತಿ ಪಡೆದರು, ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ನಿರ್ವಹಿಸಲ್ಪಟ್ಟ ಕಾಮಗಾರಿ ಕಡತ, ಹಾಗೂ ಕಾಮಗಾರಿಗಳನ್ನು ವೀಕ್ಷಣೆ ಮಾಡಿ ನಾಮ ಫಲಕಗಳು ಕಡ್ಡಾಯವಾಗಿ ನಿರ್ವಹಿಸುವಂತೆ ಸಲಹೆ ನೀಡಿದರು.

ಓಖಐಒ ಸಂಜೀವಿನಿ ಯೋಜನೆಯಡಿ ವಿವಿಧ ಸಂಘ ಸ್ವ–ಸಹಾಯ ಸಂಘಗಳ ಪುಸ್ತಕ ನಿರ್ವಹಣೆ, ಲೋನ್ ಪಡೆದು ಕೈಗೊಂಡಿರುವ ಚಟುವಟಿಕೆಗಳ ಬಗ್ಗೆ ಮಾಹಿತಿ ಪಡೆದರು, ನಂತರ ಕಒಂಙ ಯೋಜನೆಯಡಿ ಅನುಷ್ಠಾನಗೊಂಡ ಮನೆಗಳ ಭೇಟಿ ಮಾಡಿ ಫಲಾನುಭವಿಗಳಿಂದ ಯೋಜನೆಯಿಂದ ಆಗಿರುವ ಉಪಯೋಗದ ಬಗ್ಗೆ ಮಾಹಿತಿ ಪಡೆದರು.

ನರೇಗಾದಡಿ ಅನುಷ್ಠಾನಗೊಂಡ ಶೌಚಾಲಯ ಕಾಮಗಾರಿ, ಶಾಲಾ ಕಂಪೌಂಡ್, ನಾಲಾ ಸುಧಾರಣೆ ಕಾಮಗಾರಿ, NRLM ಸಂಜೀವಿನಿ ಅಡಿಯಲ್ಲಿ ಕೋಳಿ ಸಾಕಾಣಿಕೆ ಶೆಡಡ ಉದ್ಯಮ ಘಟಕಕ್ಕೆ ಭೇಟಿ

ಸ್ಥಳದಲ್ಲಿ ಮಾನ್ಯ ಸಹಾಯಕ ನಿರ್ದೇಶಕರು ಗ್ರಾಮೀಣ ಉದ್ಯೋಗ ಶರಣಪ್ಪ ಕೆಳಗಿನಮನಿ, ಜಿಲ್ಲಾ ವಸತಿ ಶಾಖೆಯ ಹುಸೇನ್ ಸಾಬ್, ರಾಜೂರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸಿದ್ದನಗೌಡ ರಬ್ಬನಗೌಡ, ಕುದರಿಮೋತಿ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿ ಪರಶುರಾಮ ನಾಯಕ್, ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾದ್ಯಕ್ಷರು ಸದಸ್ಯರು, ಜಿಲ್ಲಾ ಐ.ಇ.ಸಿ ಸಂಯೋಜಕರಾದ ಶ್ರೀನಿವಾಸ್ ಚಿತ್ರಾಗಾರ, ತಾಂತ್ರಿಕ ಸಂಯೋಜಕ ಸುರೇಶ್ ದೇಸಾಯಿ, ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ, ಒಖಖ ಸಂಯೋಜಕ ಗೀರೀಶ್ ಗೂಡೂರ, ಓಖಐಒ ಸಂಯೋಜಕಿ ಪೂಜಾ ನಾಯಕ್ ಗ್ರಾಮ ಲೆಕ್ಕಾಧಿಕಾರಿಗಳು, ತಾಂತ್ರಿಕ ಸಹಾಯಕರು ಶ್ರೀದೇವಿ ಉಪ್ಪಾರ, ಮಂಜುನಾಥ ಮೇಟಿ,, ಗ್ರಾಮ ಪಂಚಾಯತಿ ಕಂಪ್ಯೂಟರ್ ಅಪರೇಟರ್ ಶರಣಪ್ಪ ರಡ್ಡಿ, ಹನುಮೇಸ್, ಬಿ.ಎಫ್.ಟಿ ಮಂಗಳೇಶ್, ಸಂತೋಷ ಗ್ರಾಮ ಕಾಯಕ ಮಿತ್ರರು, ಓಖಐಒ ಸಿಬ್ಬಂದಿಗಳು, ಅರಣ್ಯ ಇಲಾಖೆ , ಎಡಿ.ಎಲ್ ಆರ್, ಕಂದಾಯ ಇಲಾಖೆ, ಇತರೆ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು, ಸ್ವ ಸಹಾಯ ಸಂಘದ ಪ್ರತಿನಿಧಿಗಳು ಗ್ರಾಪಂ ಇತರೆ ಸಿಬ್ಬಂದಿಗಳು ಹಾಜರಿದ್ದರು.

# ಸಾರ್ವತ್ರಿಕ ವ್ಯಾಜ್ಯಗಳ ಇತ್ಯಾರ್ಥಕ್ಕೆ ಸದಾವಕಾಶ– ನ್ಯಾ, ಹೇಮಾ ಪಸ್ತಾಪುರ,

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಮುಂಬರುವ ಜು,12ರಂದು ರಾಷ್ಟ್ರೀಯ ಲೋಕ ಅಧಾಲತ್ ಕಾರ್ಯಕ್ರಮ ಆಯೋಜನೆ ಮಾಡಿದ್ದು, ವ್ಯಾಜ್ಯಪೂರ್ವ ಕಕ್ಷಿದಾರರು ಬಾಕಿ ಇರುವ ಪ್ರಕರಣಗಳು ಕೌಟುಂಬಿಕ, ಜನನ ನೊಂದಣಿ ಪ್ರಕರಣಗಳು, ಭೂ ಸ್ವಾಧಿನ ಪ್ರಕರಣ, ಆಸ್ತಿಪಾಸ್ತಿ, ಪ್ರಕರಣಗಳು, ಅಫಘಾತ ಪ್ರಕರಣಗಳು ಇತ್ಯಾರ್ಥ ಮಾಡಿಕೊಳ್ಳಲು ಸದಾವಕಾಶವಿದ್ದು ರಾಜಿಸಂಧಾನಗಳ ಮುಖಾಂತರ ಪ್ರಕರಣಗಳನ್ನು ಬಗೆಹರಿಸಕೊಳ್ಳಬಹುದಾಗಿದೆ ಎಂದು ಶಹಾಪುರ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ಹೇಮಾ ಪಸ್ತಾಪುರ ತಿಳಿಸಿದರು, ಅವರು ನ್ಯಾಯಾಲ ಅವರಣದಲ್ಲಿ ಪತ್ರಕರ್ತರ ಸಭೆಯಲ್ಲಿ ಮಾತನಾಡಿ ಈ ವಿಷಯ ವಿವರಣೆ ನೀಡಿದರು, ಇಂತಹ ರಾಜಿ ಸಂಧಾನಗಳಿಂದ ಪರಸ್ಪರ ಬಾಂಧವ್ಯತೆಗಳು ಗಟ್ಟಿಗೊಳ್ಳುತ್ತವೆ ಎಂದು ಅವರು ತಿಳಿಸಿದರು, ಅಲ್ಲದೆ ನ್ಯಾಯಾಲಯದಿಂದ ಮಾಡುವ ಇ ರಾಷ್ಟ್ರೀಯ ಲೋಕ ಆದಾಲತ್ ನಲ್ಲಿ ನ್ಯಾಯಾಲಯದ ಶುಲ್ಕ ವಿನಾಯಿತಿಗೊಳಿಸಲಾಗಿದೆ ಎಂದರು, ಈ ಸಭೆಯಲ್ಲಿ, ವಕೀಲರ ಸಂಘದ ಅಧ್ಯಕ್ಷರಾದ ಸಂತೋಷದೇಶಮುಖ,ಸಂಘದ ಪಧಾಧಿಕಾರಿಗಳು, ವಕೀಲರು ಹಾಜರಿದ್ದರು,

# ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಅಧ್ಯಯನ ಶಿಬಿರ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಅಧ್ಯಯನ ಶಿಬಿರವನ್ನು ನಡೆಸಲಾಗುತ್ತಿದ್ದು, ಅರ್ಜಿ ಆಹ್ವಾನಿಸಲಾಗಿದೆ.

ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಆಗಸ್ಟ್ 3ನೇ ವಾರ ಅಥವಾ ಕೊನೆಯ ವಾರದಲ್ಲಿ ನಡೆಸಲು ಕರ್ನಾಟಕ ಸಾಹಿತ್ಯ ಅಕಾಡೆಮಿಯು ಉದ್ದೇಶಿಸಿದ್ದು, ಆಸಕ್ತಿಯಿರುವ 20 ರಿಂದ 40 ವರ್ಷ ವಯಸ್ಸುಳ್ಳ ಈಗಾಗಲೇ ಪತ್ರಿಕೆಯಲ್ಲಿ ಕೆಲಸ ಮಾಡುತ್ತಿರುವವರು, ಪತ್ರಿಕೋದ್ಯಮ ಪದವಿ ಪಡೆದವರು ಹಾಗೂ ಆಸಕ್ತಿಯುಳ್ಳವರು ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಜುಲೈ 25 ಕೊನೆಯ ದಿನವಾಗಿದ್ದು, ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ https://sahithyaacademy.karnataka.gov.in ಯಿಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ರಿಜಿಸ್ಟ್ರಾರ್ ಎನ್.ಕರಿಯಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜು.11ರಂದು ಪಟ್ಟಣದ ಈಶ್ವರ ದೇವಸ್ಥಾನದಲ್ಲಿ ತಾಲೂಕ

# ಸರಕಾರಿ ನಿವೃತ್ತ ನೌಕರರ ಸಭೆ:ಅಮರೇಶಪ್ಪ ಹೂನೂರು




ಲಿಂಗಸೂಗೂರು ಜು:–ಪಟ್ಟಣದ ಪತ್ರಿಕಾ ಭವನದಲ್ಲಿ ಮಾತನಾಡಿದ ಅವರು ಕೇಂದ್ರ ಸರ್ಕಾರದಿಂದ 2004ರಲ್ಲಿ ಹೊಸ ಪಿಂಚಣಿಯನ್ನು ಜಾರಿಗೆ ತರಲಾಯಿತು. ಅದೇ ರೀತಿ ದೇಶದ ಎಲ್ಲಾ ರಾಜ್ಯಗಳು ಕೇಂದ್ರ ಸರ್ಕಾರದ ಮಾದರಿಯಲ್ಲಿ ಹೊಸದಾಗಿ ಸರ್ಕಾರಿ ಸೇವೆಗೆ ನೇಮಕಗೊಳ್ಳುವ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗಿದೆ. ಇದರಿಂದ ಸರ್ಕಾರಿ ನೌಕರರು, ನಿವೃತ್ತಿ ಹೊಂದುವ ಸಂದರ್ಭದಲ್ಲಿ ಬರಬೇಕಾದ ಆರ್ಥಿಕ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರಬೇಕೆಂದು ಸಾಕಷ್ಟು ಹೋರಾಟಗಳನ್ನು ಮಾಡಿದರೂ ಸರ್ಕಾರ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿರುವುದಿಲ್ಲ. ಮುಂದಿನ ದಿನಗಳಲ್ಲಿ ಸರ್ಕಾರಿ ಸೇವೆಯಿಂದ ನೌಕರರು ನಿವೃತ್ತಿ ಹೊಂದಿದಾಗ ಅವರಿಗೆ ಹಳೆ ಪಿಂಚಣಿಯ ಆರ್ಥಿಕ ಸೌಲಭ್ಯಗಳು ದೊರೆಯುವುದಿಲ್ಲ. ನಿವೃತ್ತಿಯಾದ ಸರ್ಕಾರಿ ನೌಕರರಿಗೆ ಮತ್ತು ಕುಟುಂಬ ಪಿಂಚಣಿದಾರರಿಗೆ ಆರ್ಥಿಕ ಸಂಕಷ್ಟವುಂಟಾಗದಂತೆ ಹಳೆ ಪಿಂಚಣಿ ಜಾರಿಗಾಗಿ ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ತಾಲೂಕಿನ ಸರಕಾರಿ ನಿವೃತ್ತ ನೌಕರರು ಹಾಜರಿದ್ದು, ಸಲ್ಲಿಸಲಿರುವ ಮನವಿ ಪತ್ರಕ್ಕೆ ಸಹಿ ಮಾಡಬೇಕು ಎಂದು ಹೇಳಿದರು. ಅಖಿಲ ಭಾರತ ರಾಜ್ಯಗಳ ಪಿಂಚಣಿದಾರರ ಒಕ್ಕೂಟವು ಹಳೆ ಪಿಂಚಣಿ ಜಾರಿಗಾಗಿ ರಾಜ್ಯದ ನಿವೃತ್ತಿ ನೌಕರರು ತಮ್ಮಗಳ ಸಹಿಯೊಂದಿಗೆ ಮನವಿ ಪತ್ರವನ್ನು ಜಿಲ್ಲಾಧಿಕಾರಿಗಳು/ ಸಹಾಯಕ ಆಯುಕ್ತರು/ ತಹಶೀಲ್ದಾರರ ಮೂಲಕ ನೇರವಾಗಿ ಗೌರವಾನ್ವಿತ ಪ್ರಧಾನ ಮಂತ್ರಿಗಳಿಗೆ ಸಲ್ಲಿಸಲು ತೀರ್ಮಾನಿಸಿದ್ದು. ಜು.11ರಂದು ಪಟ್ಟಣದ ಈಶ್ವರ ದೇವಸ್ಥಾನದಲ್ಲಿ ತಾಲೂಕ ಸರಕಾರಿ ನಿವೃತ್ತ ನೌಕರರ ಸಭೆಯನ್ನು ಕರೆಯಲಾಗಿದೆ ಎಂದು ತಾಲೂಕ ಸರಕಾರಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಅಮರೇಶಪ್ಪ ಹೂನೂರು ಹೇಳಿದರು. ಈ ಸಂದರ್ಭದಲ್ಲಿ ಸರ್ಕಾರಿ ಉಪಾಧ್ಯಕ್ಷ ಹಾಜಿ ಮಲಂಗ ಬಾಬಾ, ಹನುಮಂತಪ್ಪ ಮೇಟಿ, ಶರಣಬಸವರಾಜ ನಾಡಗೌಡ್ರ, ಸಹಕಾರಿ ಸಂಘದ ಅಧ್ಯಕ್ಷರು ಎಂ ಜಿ ಹಿರೇಮಠ. ಹಾಗೂ ಸುರೇಶ್ ಕುಲಕರ್ಣಿ ಸೇರಿದಂತೆ ಉಪಸ್ಥಿತರಿದ್ದರು.

# ಖಾಸ್ಗತ ಅಜ್ಜನ ಜಾತ್ರೆ: ವಿಶೇಷ ಪ್ರಸಾದ ವ್ಯವಸ್ಥೆ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಐತಿಹಾಸಿಕ ಶ್ರೀ ಖಾಸ್ಗತೇಶ್ವರ ಜಾತ್ರಾ ಮಹೋತ್ಸವದ ಕೊನೆಯ ದಿನವಾದ ಮಂಗಳವಾರ ದಂದು ಆನೆ ಅಂಬಾರಿ ಮೆರವಣಿಗೆ ಹಾಗೂ ಮಹಾರಥೋತ್ಸವದಲ್ಲಿ ಭಾಗವಹಿಸಲು



ಆಗಮಿಸುವ ಸಾವಿರಾರು ಭಕ್ತಾದಿಗಳಿಗೆ ವಿಜಯಪುರ ಅನುಗ್ರಹ ಕಣ್ಣಿನ ಆಸ್ಪತ್ರೆಯ ಮುಖ್ಯಸ್ಥರಾದ ಡಾ.ಪ್ರಭುಗೌಡ ಲಿಂಗದಳ್ಳಿ ಇವರ ವತಿಯಿಂದ ಭಕ್ತಾದಿಗಳಿಗೆ ವಿಶೇಷ ಪ್ರಸಾದ ವ್ಯವಸ್ಥೆ ಮಾಡಲಾಯಿತು. ಪ್ರಸಾದ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಡಾ.ಪ್ರಭುಗೌಡ ಲಿಂಗದಳ್ಳಿ ಸಹೋದರ ಸಂಗನಗೌಡ ಲಿಂಗದಳ್ಳಿ ಅವರು ಕಳೆದ ಕೆಲವು ವರ್ಷಗಳಿಂದ ನಾವು ಶ್ರೀ ಖಾಸ್ಗತ ಅಜ್ಜನ ಜಾತ್ರೆಯಲ್ಲಿ ಪ್ರಸಾದ ವ್ಯವಸ್ಥೆಯನ್ನು ಮಾಡುತ್ತಲೇ ಬಂದಿದ್ದೇವೆ ಪ್ರತಿ ವರ್ಷವೂ ವಿಶಿಷ್ಟವಾದ ಖಾದ್ಯ ಪದಾರ್ಥಗಳನ್ನು ಸಿದ್ಧಪಡಿಸುತ್ತೇವೆ ಈ ಬಾರಿ ಎಲ್ಲರೂ ಇಷ್ಟಪಡುವ ಪಲಾವ್ ಹಾಗೂ ಸಿಹಿ ಪದಾರ್ಥವಾದ ಶಿರಾದ

ವ್ಯವಸ್ಥೆಯನ್ನು ಮಾಡಿದ್ದು ಸುಮಾರು 8 ರಿಂದ10, ಸಾವಿರ ಕ್ಕಿಂತಲೂ ಹೆಚ್ಚು ಭಕ್ತಾದಿಗಳು ಈ ಪ್ರಸಾದವನ್ನು ಸ್ವೀಕರಿಸಲಿದ್ದಾರೆ, ಇದರ ಜೊತೆಗೆ 10, ಸಾವಿರ ಜನರಿಗೆ ಕುಡಿಯುವ ನೀರಿನ ಪೌಚ್ ಗಳನ್ನು ವಿತರಿಸುತಿದ್ದೇವೆ, ಇದಕ್ಕಿಂತಲೂ ಮೊದಲು ನಮ್ಮ ಅನುಗ್ರಹ ಕಣ್ಣಿನ ಆಸ್ಪತ್ರೆ ಮತ್ತು ಬಿ.ಎಲ್.ಡಿ.ಇ. ವೈದ್ಯಕೀಯ ಆಸ್ಪತ್ರೆ ಸಹಯೋಗದಲ್ಲಿ "ಆರೋಗ್ಯ ಜಾತ್ರೆ" ಹೆಸರಿನಲ್ಲಿ ಬೃಹತ್ ಉಚಿತ ಆರೋಗ್ಯ ಶಿಬಿರವನ್ನು ಹಮ್ಮಿಕೊಂಡಿದ್ದು ಸಾವಿರಾರು ಗ್ರಾಮಸ್ಥರು ಇದರ ಸದುಪಯೋಗ ಮಾಡಿಕೊಂಡಿದ್ದಾರೆ. ಶ್ರೀ ಖಾಸ್ಗತ ಅಜ್ಜನ ಕೃಪೆ ಎಲ್ಲರಿಗೂ ಆಗಲೆಂದು ಪ್ರಾರ್ಥಿಸುತ್ತೇನೆ ಎಂದರು. ಪ್ರಸಾದ ವಿತರಣಾ ಕಾರ್ಯಕ್ರಮದಲ್ಲಿ ಪಿಎಸ್ಐ ರಾಮನಗೌಡ ಸಂಕನಾಳ, ಗಣ್ಯರಾದ ಶಿವು ದೇಸಾಯಿ, ಮುತ್ತುಗೌಡ ಯಾಳವಾರ, ಮಲ್ಲನಗೌಡ ಬಿರಾದಾರ, ಪ್ರವೀಣ ರೆಡ್ಡಿ, ಬಾಲು ತಳವಾರ, ಸಂಗನಗೌಡ ಬಿರಾದಾರ, ಸಿ.ಎಸ್. ನ್ಯಾಮಣ್ಣವರ, ಗುರುಸಂಗಪ್ಪಗೌಡ ಮ್ಯಾಗೇರಿ, ಬಸವರಾಜ ಕಲಕೇರಿ, ಸುರೇಶಕುಮಾರ ಪೀರಾಪೂರ, ಸತೀಶ ಕುಲಕರ್ಣಿ, ಮುದ್ದಣ್ಣ ಚೌದ್ರಿ, ಮಹಾಂತೇಶ ಹುಜರತಿ ಹಾಗೂ ಅನುಗ್ರಹ ಆಸ್ಪತ್ರೆ ತಾಳಿಕೋಟಿ ಶಾಖೆಯ ಸಿಬ್ಬಂದಿಗಳು ಇದ್ದರು.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

## ನೆರೆ ಪ್ರವಾಹ ನಿರ್ವಹಿಸಲು ಅಗತ್ಯ ಸಿದ್ಧತೆ ಕೈಗೊಳ್ಳಿ: ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.08–ತುಂಗಭದ್ರಾ ಜಲಾಶಯದಿಂದ ನದಿಗೆ ನೀರು ಹರಿಸಲಾಗಿದ್ದು, ನೆರೆ ಪ್ರವಾಹ ನಿರ್ವಹಿಸಲು ಅಗತ್ಯ ಸಿದ್ಧತೆ ಮಾಡಿಟ್ಟುಕೊಳ್ಳಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಅವರು ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈ ಬಾರಿ ಮಲೆನಾಡು ಭಾಗದಲ್ಲಿ ಹೆಚ್ಚಾಗಿ ಮಳೆ ಸುರಿಯುತ್ತಿರುವುದರಿಂದ ತುಂಗಭದ್ರಾ ಆಣೆಕಟ್ಟೆ ಜಲಾಶಯವು ನಿಗಧಿತ ವೇಳೆ ಮುಂಚಿತವಾಗಿಯೇ ಭರ್ತಿಯಾಗಿದೆ. ಮುಖ್ಯವಾಗಿ ಈ ಬಾರಿ ಕೇವಲ 80 ರಿಂದ 85 ಟಿಎಂಸಿ ನೀರನ್ನು ಉಳಿಸಿಕೊಳ್ಳಲು ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಹೆಚ್ಚುವರಿ ನೀರನ್ನು ನದಿಗೆ ಹರಿಸಲಾಗುತ್ತಿದ್ದೆ. ಹಾಗಾಗಿ ಪ್ರವಾಹಕ್ಕೀಡಾಗುವ ನದಿ ಪಾತ್ರದ ಗ್ರಾಮಗಳನ್ನು ಸುರಕ್ಷಿತ ಸ್ಥಳದೆಡೆಗೆ ಸ್ಥಳಾಂತರಿಸಬೇಕು ಎಂದು ಕಂಪ್ಲಿ ಮತ್ತು ಸಿರುಗುಪ್ಪ ತಾಲ್ಲೂಕು ತಹಶೀಲ್ದಾರರಿಗೆ ನಿರ್ದೇಶನ ನೀಡಿದರು. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧಿಕಾರಿ ಪರಮೇಶ್ ಅವರು ಮಾತನಾಡಿ, ಪ್ರಸ್ತುತ ತುಂಗಭದ್ರಾ ಜಲಾಶಯದಲ್ಲಿ 76.731 ಟಿಎಂಸಿ ನೀರು ಸಂಗ್ರಹವಿದ್ದು, 54,550 ಕ್ಯೂಸೆಕ್ ನೀರು ಒಳಹರಿವು ಇದ್ದು, 61,645 ಕ್ಯೂಸೆಕ್ ನೀರು ಹೊರಹರಿವು ಇದೆ ಎಂದು ಹೇಳಿದರು.

ಜಲಾಶಯದಿಂದ 1 ಲಕ್ಷ ಕ್ಯೂಸೆಕ್ ಗೂ ಅಧಿಕ ನೀರು ನದಿಗೆ ಹರಿಸಿದಾಗ ಮಾತ್ರ ಕಂಪ್ಲಿ ಮತ್ತು ಗಂಗಾವತಿ ಸೇತುವೆ ಮುಳುಗಡೆಯಾಗಲಿದೆ ಮತ್ತು ಕಂಪ್ಲಿ ಭಾಗದ 2 ಗ್ರಾಮ ಮತ್ತು ಸಿರುಗುಪ್ಪ ಭಾಗದ 1 ಗ್ರಾಮವು ಪ್ರವಾಹ ಪಿಡೀತವಾಗುತ್ತದೆ. ಈಗಾಗಲೇ ಸುರಕ್ಷತೆಗಾಗಿ ಕಾಳಜಿ ಕೇಂದ್ರಗಳನ್ನು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಸಭೆಗೆ ತಿಳಿಸಿದರು. ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ಪ್ರವಾಹ ಕುರಿತಾಗಿ ನಿತ್ಯ ಆಯಾ ತಾಲ್ಲೂಕು ತಹಶೀಲ್ದಾರರು ಪರಿಶೀಲನೆ ನಡೆಸುತ್ತಿರಬೇಕು. ನದಿಪಾತ್ರದ ಜನರಿಗೆ ನದಿಗೆ ಇಳಿಯದಂತೆ ಎಚ್ಚರಿಕೆ ನೀಡಬೇಕು. ಜನ–ಜಾನುವಾರು ಬಗ್ಗೆ ಎಚ್ಚರವಹಿಸಬೇಕು. ಜೀವಹಾನಿ, ಬೆಳೆಹಾನಿಯಾಗದಂತೆ ಆಯಾ ತಹಶೀಲ್ದಾರರು ಸೂಕ್ತ ಯೋಜನೆ ರೂಪಿಸಬೇಕು ಎಂದು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಜೂನ್ ತಿಂಗಳಲ್ಲಿ ಶೇ.49 ರಷ್ಟು ಮಳೆ ಕೊರತೆಯಾಗಿದೆ. ಅದೇರೀತಿಯಾಗಿ ಜುಲೈ ತಿಂಗಳಲ್ಲಿ ಶೇ.9.6 ರಷ್ಟು ಮಳೆ ಸುರಿದಿದ್ದು, ಶೇ.45 ರಷ್ಟು ಮಳೆ ಕೊರತೆಯಾಗಿದೆ.


ಹವಮಾನ ಇಲಾಖೆಯ ವರದಿಯನ್ವಯ ಮುಂದಿನ ದಿನಗಳಲ್ಲಿ ಮಳೆಯಾಗುವ ಸಂಭವವಿದೆ. ಜಿಲ್ಲೆಯಲ್ಲಿ ಈಗಾಗಲೇ ಹತ್ತಿ, ಮುಸುಕಿನ ಜೋಳ, ತೊಗರಿ ಬೆಳೆಗಳು ಬಿತ್ತನೆಯಾಗಿದ್ದು, ಖಾರೀಫ್ ಬೆಳೆಗಳ ಬಿತ್ತನೆಗೆ ಇನ್ನೂ ಅವಕಾಶವಿದೆ ಎಂದು ಸಭೆಗೆ ತಿಳಿಸಿದರು.

ಇದಕ್ಕೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಪ್ರತಿಕ್ರಿಯಿಸಿ, ಈಗಾಗಲೇ ತಾಲ್ಲೂಕುವಾರು ಮಳೆ ಕೊರತೆಯಾಗಿರುವ ಕುರಿತು ಆಯಾ ತಾಲ್ಲೂಕು ತಹಶೀಲ್ದಾರರು ಕ್ಷೇತ್ರ ಭೇಟಿ ನಡೆಸಿ ಮಾಹಿತಿ ಸಂಗ್ರಹಿಸಿ ಕೃಷಿ ಇಲಾಖೆಗಳ ಅಧಿಕಾರಿಗಳೊಂದಿಗೆ ಚರ್ಚಿಸಿ ಸರ್ಕಾರಕ್ಕೆ ವರದಿ ಸಲ್ಲಿಸಬೇಕು ಎಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ರಾಜ್ಯ ವಿಪತ್ತು ನಿರ್ವಹಣಾ ನಿಧಿಯಡಿ ಜಿಲ್ಲೆಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ಜಿಲ್ಲಾಧಿಕಾರಿಯವರು ಚರ್ಚಿಸಿ, ಸಂಬಂಧಿಸಿದ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಡಿಡಿಎಲ್ಆರ್ ಪ್ರಮೋದ್, ಲೋಕೋಪಯೋಗಿ ಇಲಾಖೆ, ಪಶುಸಂಗೋಪನೆ, ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಐದು ತಾಲ್ಲೂಕುಗಳ ತಹಶೀಲ್ದಾರರು ವಿಡಿಯೋ ಸಂವಾದದಲ್ಲಿ ಭಾಗವಹಿಸಿದ್ದರು.

## ಆಶಾಕಿರಣ ಯೋಜನೆ: ಕಣ್ಣಿನ ದೃಷ್ಟಿದೋಷವುಳ್ಳವರಿಗೆ ವರದಾನ–ಡಿಹೆಚ್ಓ ಡಾ.ಯಲ್ಲಾ ರಮೇಶಬಾಬು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.08–ಕಣ್ಣಿನ ಸಮಸ್ಯೆ ಕಂಡುಬಂದಲ್ಲಿ ಗ್ರಾಮೀಣ ಭಾಗದ ಜನತೆಯು ಜಿಲ್ಲೆಯ ಆರೋಗ್ಯ ಕೇಂದ್ರಗಳ ದೃಷ್ಟಿಕೇಂದ್ರಗಳಿಗೆ ಆಗಮಿಸಿ ನೇತ್ರ ಪರೀಕ್ಷೆ ಕೈಗೊಳ್ಳುವ ಮೂಲಕ ಕಣ್ಣಿನ ಆರೈಕೆ ಮಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು ಅವರು ಹೇಳಿದರು.

ಮಂಗಳವಾರ ಮೋಕಾ ಸಮುದಾಯ ಆರೋಗ್ಯ ಕೇಂದ್ರದಲ್ಲಿಯ ದೃಷ್ಟಿಕೇಂದ್ರಕ್ಕೆ ಭೇಟಿ ನೀಡಿ ಕಣ್ಣಿನ ಪರೀಕ್ಷೆ ಕೈಗೊಂಡು ಕನ್ನಡಕ ಪಡೆದು–ಕೊಂಡ ಸಾರ್ವಜನಿಕರ ಜೊತೆ ಮಾತನಾಡಿದ ಅವರು, ಕಳೆದ ಗುರುವಾರ ಉಪಮುಖ್ಯಮಂತ್ರಿಯವರು ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು, ಏಕಕಾಲಕ್ಕೆ ರಾಜ್ಯಾದ್ಯಂತ ಈ ಯೋಜನೆಯ ಚಾಲನೆ ನೀಡಿದ್ದಾರೆ. ಇದು ಕಣ್ಣಿನ ದೃಷ್ಟಿದೋಷವುಳ್ಳವರಿಗೆ ವರದಾನವಾಗಿದೆ ಎಂದು ಅವರು ತಿಳಿಸಿದರು.

ಕಣ್ಣಿನ ದೃಷ್ಟಿಯಿಂದ ಉಂಟಾಗುವ ಸಣ್ಣ ಹಾನಿಯು ಜೀವನ ನಡೆಸುವುದಕ್ಕೆ ಕಷ್ಟವಾಗುವುದನ್ನು ಮನಗಂಡು ಉಚಿತ ಕಣ್ಣಿನ ತಪಾಸಣೆ, ಕನ್ನಡಕ ವಿತರಣೆ ಹಾಗೂ ಅಗತ್ಯವುಳ್ಳವರಿಗೆ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ಸೌಲಭ್ಯ ಒದಗಿಸಿದೆ ಎಂದರು.

ಜಿಲ್ಲೆಯಲ್ಲಿ ಬಳ್ಳಾರಿಯ ಜಿಲ್ಲಾ ಆಸ್ಪತ್ರೆ, ಸಂಡೂರು, ಸಿರುಗುಪ್ಪ ಸಾರ್ವಜನಿಕ ಆಸ್ಪತ್ರೆ, ಮೋಕಾ, ರೂಪನಗುಡಿ, ಕಂಪ್ಲಿ, ಕುರುಗೋಡು, ತೋರಣಗಲ್ಲು, ತೆಕ್ಕಲಕೋಟೆ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ರಾಜ್ಯ ಸರ್ಕಾರದ ನಿರ್ದೇಶನದಂತೆ ದೃಷ್ಟಿಕೇಂದ್ರಗಳನ್ನು ಆರಂಭಿಸಲಾಗಿದ್ದು, ಕಣ್ಣಿನ ತಪಾಸಣೆಗಾಗಿಯೇ ನಗರಗಳಿಗೆ ಆಗಮಿಸಿ ಹಣದ ವೆಚ್ಚ ಮಾಡಿಕೊಳ್ಳದೇ ತಮ್ಮ ಹತ್ತಿರದ ದೃಷ್ಟಿಕೇಂದ್ರ ಇರುವ ಆಸ್ಪತ್ರೆಗೆ ತೆರಳಿ ಕಣ್ಣಿನ ಸಮಸ್ಯೆಗಳನ್ನು ನಿವಾರಿಸಿಕೊಳ್ಳಬೇಕು ಎಂದು ವಿನಂತಿಸಿದರು.

ಈ ವೇಳೆ ಮೋಕಾ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಭಾರತಿ, ದಂತ ತಜ್ಞರಾದ ಡಾ.ಅರ್ಜುನ್ ಮುನ್ನಿಸಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ದೃಷ್ಟಿಕೇಂದ್ರದ ನೇತ್ರಾಧಿಕಾರಿ ಮಂಜುನಾಥ, ಸಿಬ್ಬಂದಿ ವೈಷ್ಣವಿ ಸೇರಿದಂತೆ ಇತರರು ಇದ್ದರು.

## ವಿವಿಧ ವಾರ್ಡಗಳಿಗೆ ಸಚಿವ ದರ್ಶನಾಪುರ ಬೇಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ.ನಗರದ ವಾರ್ಡನಂ, 14 ಮತ್ತು 20 ನೇಯ ವಾರ್ಡಗಳಿಗೆ ಸಣ್ಣ ಕೈಗಾರಿಕಾ ಸಾರ್ವಜನಿಕ ಉಧ್ಯಮಗಳ ಮಂತ್ರಿ ಶರಣಬಸ್ಸಪ್ಪಗೌಡ ದರ್ಶನಾಪುರವರು ಬೇಟ್ಟಿ ನೀಡಿ, ಅಮೃತ ಯೊಜನಡಿಯಲ್ಲಿ ನಡೆದ ಕಾಮಗರಿಗಳ ವಿಕ್ಷಣೆ ಮಾಡಿದರು, ಅಲ್ಲದೆ ಚರಂಡಿಗಳಲ್ಲಿನ ಸ್ವಚ್ಚತೆ ಕುರಿತು ಅವರು ನಿರ್ದೇಶನ ನೀಡಿದರು, ಮತ್ತು ಸಿಸಿ ರಸ್ತೆ ಚರಂಡಿ ಕಾಮಗಾರಿ ಗುಣಮಟ್ಟದ್ದನ್ನಾಗಿ ಮಾಡಲು ಅವರು ನಗರಸಭೆ ಅಧಿಕಾರಿಗಳಿಗೆ ತಿಳಿಸಿದರು,

ಈ ಸಮಯದಲ್ಲಿ ಪೌರಾಯುಕ್ತರಾದ ಜೀವನಕುಮಾರ ಕಟ್ಟಿಮನಿ, ಎಇಇ ನಾನಾಸಾಹೇಬ್ ಮಡಿವಾಳಕರ್, ಸೇರಿದಂತೆ ವಾರ್ಡ ಸದಸ್ಯರು ಮುಖಂಡರು ಅಧಿಕಾರಿಗಳು ಹಾಜರಿದ್ದರು,

## ಉಚಿತ ಪಾಸ್ಟ್ ಪುಡ್ ತರಬೇತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.08–ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಗ್ರಾಮೀಣ ಪ್ರದೇಶದ 20 ರಿಂದ 45 ವಯೋಮಿತಿಯೊಳಗಿನ ನಿರುದ್ಯೋಗಿ ಯುವಕ ಮತ್ತು ಯುವತಿಯರಿಗೆ ಉಚಿತ ಪಾಸ್ಟ್ ಪುಡ್ ತರಬೇತಿಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಜುಲೈ 21 ರಿಂದ 12 ದಿನಗಳ ಕಾಲ ವಸತಿ ಸಹಿತವಾಗಿ ಉಚಿತ ತರಬೇತಿ ಮತ್ತು ಕೌಶಲ್ಯದ ಜೊತೆಗೆ ಉದ್ಯಮಶೀಲತೆ, ವ್ಯಕ್ತಿತ್ವ ವಿಕಾಸನಕ್ಕೆ ಸಂಬಂಧಿಸಿದ ಮಾಹಿತಿ ನೀಡಲಾಗುತ್ತದೆ.

**ಅರ್ಹತೆಗಳು:**

ಬಿ.ಪಿ.ಎಲ್. ಕಾರ್ಡ್ ಹೊಂದಿರಬೇಕು. ಕನ್ನಡ ಭಾಷೆ ಓದಲು ಹಾಗೂ ಬರೆಯಲು ಬರುವಂತಹ ನಿರುದ್ಯೋಗಿ ಸ್ವ–ಉದ್ಯೋಗ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳು ತರಬೇತಿಯಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ.

ವಿದ್ಯಾರ್ಹತೆ ಕನಿಷ್ಠ 10ನೇ ತರಗತಿ ಪಾಸಾಗಿರಬೇಕು. ತರಬೇತಿಯ ಬಗ್ಗೆ ಪ್ರಾಥಮಿಕ ಅನುಭವ ಹೊಂದಿದವರಿಗೆ ಆದ್ಯತೆ ನೀಡಲಾಗುವುದು. 35 ಜನರಿಗೆ ಮಾತ್ರ ಅವಕಾಶ ನೀಡಲಾಗುತ್ತದೆ. ಸಂದರ್ಶನ ಮೂಲಕ ಆಯ್ಕೆ ಮಾಡಲಾಗುವುದು. ಈ ಮೊದಲು ತರಬೇತಿ ಪಡೆದವರು ಪುನಃ ತರಬೇತಿ ಪಡೆಯಲು ಅರ್ಹರಿರುವುದಿಲ್ಲ. ಆಸಕ್ತ ಅರ್ಹ ಅಭ್ಯರ್ಥಿಗಳು ತ್ವರಿತವಾಗಿ ತಮ್ಮ ಹೆಸರು, ವಿಳಾಸ, ಸಂಪರ್ಕಕ್ಕೆ ಲಭ್ಯವಿರುವ ದೂರವಾಣಿ ಸಂ–ಖ್ಯೆ, ವಯಸ್ಸು, ವಿದ್ಯಾರ್ಹತೆ, ಪಡೆಯಲಿಚ್ಚಿಸಿರುವ ತರಬೇತಿ, ಸಂಬಂಧಿತ ವಿಷಯದಲ್ಲಿ ಇರುವ ಪ್ರಾಥಮಿಕ ಜ್ಞಾನ, ಅನುಭವ ಮುಂತಾದ ಮಾಹಿತಿಯೊಂದಿಗೆ ಬಿಳಿ ಹಾಳೆಯ ಮೇಲೆ ಅರ್ಜಿಯನ್ನು ಬರೆದು ಪಾಸ್ ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರದೊಂದಿಗೆ ರೇಷನ್ ಕಾರ್ಡ್ ಒಂದು ಝೆರಾಕ್ಸ್ ಪ್ರತಿ ಲಗತ್ತಿಸಿ ಅರ್ಜಿಯನ್ನು ಜು.18 ರೊಳಗಾಗಿ ಸಲ್ಲಿಸಬೇಕು.

ಅರ್ಜಿಗಳು ನಮಗೆ ತಲುಪಿದ ನಂತರ ತರಬೇತಿಯಲ್ಲಿ ಭಾಗವಹಿಸುವ ಬಗೆಗೆ ಅರ್ಜಿಯಲ್ಲಿ ನಮೂದಿಸಿದ ಪೋನ್ ನಂಬರ್‌ಗೆ ಪೋನ್ ಮಾಡಿ ತಿಳಿಸಲಾಗುವುದು. ತರಬೇತಿಯಲ್ಲಿ ಪಾಲ್ಗೊಳ್ಳಲು ತಗುಲುವ ಪ್ರಯಾಣ ಭತ್ಯೆಯನ್ನು ತಾವೇ ಭರಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಹತ್ತಿರದ ಡಿಐಸಿ ಕಾಂಪೌಂಡ್‌ನ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರ ಕಚೇರಿ ಅಥವಾ ಮೊ.9008464120,9980123603 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಕಾಣೆಯಾದ ಬಾಲಕ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.08–ನಗರದ ದೇವಿನಗರ ಬಡಾವಣೆಯ 1ನೇ ಕ್ರಾಸ್‌ನ ಸರ್ಕಾರಿ ವೀಕ್ಷಣಾಲಯದಲ್ಲಿ ದಾಖಲಾದ ಮಾರುತಿ ಎನ್ನುವ 16 ವರ್ಷದ ಬಾಲಕ ಜು.06 ರಂದು ವೀಕ್ಷಣಾಲಯದಿಂದ ಕಾಣೆಯಾಗಿದ್ದು, ಈ ಕುರಿತು ಕೌಲ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬಾಲಕನ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

ಚಹರೆ: ಅಂದಾಜು 5.7 ಅಡಿ ಎತ್ತರ, ಕಪ್ಪು ಮೈಬಣ್ಣ, ತೆಳುವಾದ ಮೈಕಟ್ಟು ಹೊಂದಿರುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ತುಂಬು ತೋಳಿನ ಟಿ–ಶರ್ಟ್, ಬೂದಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ.

ಮೇಲ್ಕಂಡ ಚಹರೆ ಗುರುತುಗಳುಳ್ಳ ಬಾಲಕ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆಯ ದೂ.08392–240731, 244145, ಪಿಐ ಮೊ.9480803047, ಪಿಎಸ್ಐ ಮೊ.94808203085 ಮತ್ತು ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 10 ರಂದು ಮೀನು ಕೃಷಿಕರ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.08.–ಮೀನುಗಾರಿಕೆ ಇಲಾಖೆ ವತಿಯಿಂದ ಇದೇ ಜುಲೈ 10 ರಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿಯ ಆಳಂದ ರಸ್ತೆಯಲ್ಲಿರುವ ಕೃಷಿ ವಿಜ್ಞಾನ ಕೇಂದ್ರದ (ಕೆ.ವಿ.ಕೆ) ಆವರಣದಲ್ಲಿ ಮೀನು ಕೃಷಿಕರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಮೀನು ಕೃಷಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಕಲಬುರಗಿ ಮೀನುಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

ಉದ್ಯೋಗ ಆಧಾರಿತ ಪ್ರೋತ್ಸಾಹಧನ ಯೋಜನೆಗೆ ಅನುಮೋದನೆ

## ಹೊಸ ಉದ್ಯೋಗಿಗಳು ಹಾಗೂ ಉದ್ಯೋದಾತರು ಯೋಜನೆಯ ಪ್ರಯೋಜನ ಪಡೆದುಕೊಳ್ಳಿ: ಕೆ.ವಿ.ಪ್ರವೀಣ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.08–ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯವು ಉದ್ಯೋಗ ಆಧಾರಿತ ಪ್ರೋತ್ಸಾಹಧನ (ಇಎಲ್ಐ) ಯೋಜನೆಗೆ ಅನುಮೋದನೆ ನೀಡಿದ್ದು, ಉದ್ಯೋಗ ಸೃಷ್ಠಿ ಮತ್ತು ಎಲ್ಲಾ ಉತ್ಪಾದನಾ ವಲಯಗಳಲ್ಲಿ ಉದ್ಯೋಗಾವಕಾಶ ಮತ್ತು ಸಾಮಾಜಿಕ ಭದ್ರತೆ ಹೆಚ್ಚಿಸುವುದು ಈ ಯೋಜನೆಯ ಉದ್ದೇಶವಾಗಿದೆ ಎಂದು ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆ (ಇಪಿಎಫ್ಓ) ಬಳ್ಳಾರಿ ಪ್ರಾದೇಶಿಕ ಕಚೇರಿಯ ಆಯುಕ್ತ ಕೆ.ವಿ.ಪ್ರವೀಣ್ ಅವರು ಹೇಳಿದರು.

ಮಂಗಳವಾರ ನಗರದ ಕಾರ್ಮಿಕರ ಭವಿಷ್ಯನಿಧಿ ಸಂಸ್ಥೆ (ಇಪಿಎಫ್ಓ) ಬಳ್ಳಾರಿ ಪ್ರಾದೇಶಿಕ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆ (ಇಪಿಎಫ್ಓ) ಬಳ್ಳಾರಿ ಪ್ರಾದೇಶಿಕ ಕಚೇರಿ ವ್ಯಾಪ್ತಿಯಲ್ಲಿ ಬಳ್ಳಾರಿ, ವಿಜಯನಗರ, ಚಿತ್ರದುರ್ಗ ಮತ್ತು ಕೊಪ್ಪಳ ಸೇರಿ ನಾಲ್ಕು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುವ ಕೈಗಾರಿಕಾ ವಲಯ ಮತ್ತು ಇತರೆ ವಲಯಗಳ ಹೊಸ ಉದ್ಯೋಗಿಗಳು ಹಾಗೂ ಉದ್ಯೋಗಿಗಳಿಗೆ ಕೆಲಸ ನೀಡಿದ ಉದ್ಯೋಗದಾತರು ಇಬ್ಬರಿಗೂ ಈ ಯೋಜನೆಯ ಪ್ರಯೋಜನ ಪಡೆಯಬಹುದಾಗಿದೆ ಎಂದರು.

ಉದ್ಯೋಗ ಆಧಾರಿತ ಪ್ರೋತ್ಸಾಹಧನ ಯೋಜನೆಯ ಭಾಗವಾಗಿ ಹೊಸದಾಗಿ ಉದ್ಯೋಗದಲ್ಲಿರುವ ವ್ಯಕ್ತಿಗಳು ಹಾಗೂ ಹೊಸ ಉದ್ಯೋಗಗಳನ್ನು ಸೃಷ್ಟಿಸುವ ಉದ್ಯೋಗದಾತರು ಕೇಂದ್ರ ಸರ್ಕಾರದ ಪ್ರೋತ್ಸಾಹಕಗಳಿಂದ ಪ್ರಯೋಜನ ಪಡೆಯುತ್ತಾರೆ ಎಂದು ತಿಳಿಸಿದರು.

ಈ ಯೋಜನೆಯನ್ನು 2024–25ರ ಕೇಂದ್ರ ಬಜೆಟ್‌ನಲ್ಲಿ ಪರಿಚಯಿಸಲಾಯಿತು. ಯುವಕರಿಗೆ ಉದ್ಯೋಗ, ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆಯನ್ನು ಬೆಂಬಲಿಸುವ ಸಲುವಾಗಿ ಜಾರಿಗೊಳಿಸಲಾಯಿತು. ಈ ಯೋಜನೆಯ ಪ್ರಯೋಜನವು 2025 ರ ಆಗಸ್ಟ್ 01 ರಿಂದ 2027 ರ ಜುಲೈ 31 ರ ನಡುವೆ ಸೃಷ್ಟಿಯಾದ ಉದ್ಯೋಗಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದರು.

ಇಪಿಎಫ್ಓ ಕಚೇರಿ ವತಿಯಿಂದ ಈಗಾಗಲೇ ಪ್ರತಿ ತಿಂಗಳು ಆಯೋಜಿಸುತ್ತಿರುವ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮದಲ್ಲಿ ಯೋಜನೆಯ ಕುರಿತು ಅರಿವು ಮೂಡಿಸಲಾಗುವುದು ಹಾಗೂ ತಾಲ್ಲೂಕು ಮಟ್ಟದಲ್ಲಿ ಜಾಗೃತಿ ಸಭೆ ನಡೆಸಲಾಗುವುದು ಎಂದು ತಿಳಿಸಿದರು.

ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆ (ಇಪಿಎಫ್ಓ) ಬಳ್ಳಾರಿ ಪ್ರಾದೇಶಿಕ ಕಚೇರಿಯ ಆರ್ಥಿಕ ನಿರ್ವಹಣಾಧಿಕಾರಿ ಕೆ.ಎಸ್. ವೇಣುಗೋಪಾಲ್ ಅವರು ಮಾತನಾಡಿ, ಈ ಯೋಜನೆಯಡಿ ಮೊದಲ ಬಾರಿಗೆ ಉದ್ಯೋಗಕ್ಕೆ ಸೇರುವವರಿಗೆ 2 ಕಂತುಗಳಲ್ಲಿ ರೂ.15,000 ವರೆಗಿನ 1 ತಿಂಗಳ ವೇತನ ನೀಡಲಾಗುವುದು. ಹೊಸ ಉದ್ಯೋಗಿಯ ಸೇರ್ಪಡೆಗಾಗಿ ಉದ್ಯೋಗದಾತರಿಗೆ 2 ವರ್ಷಗಳವರೆಗೆ ತಿಂಗಳಿಗೆ ಗರಿಷ್ಠ 3,000 ರೂ.ಗಳ ಪ್ರೋತ್ಸಾಹಧನ ನೀಡಲಾಗುವುದು ಎಂದು ತಿಳಿಸಿದರು.

ಈ ಯೋಜನೆಯು ಎರಡು ಭಾಗಗಳನ್ನು ಒಳಗೊಂಡಿದ್ದು, 'ಭಾಗ–ಎ' ಮೊದಲ ಬಾರಿಗೆ ಕೆಲಸ ಮಾಡುವವರ ಮೇಲೆ ಗಮನ ಕೇಂದ್ರೀಕರಿಸಿದರೆ 'ಭಾಗ–ಬಿ' ಉದ್ಯೋಗದಾತರ ಮೇಲೆ ಗಮನ ಕೇಂದ್ರೀಕರಿಸಿದೆ ಎಂದರು.

*ಭಾಗ ಎ: ಮೊದಲ ಬಾರಿಯ ಉದ್ಯೋಗಿಗಳಿಗೆ ಪ್ರೋತ್ಸಾಹ:*

ಈ ಭಾಗವು 'ಇಪಿಎಫ್ಓ'ನಲ್ಲಿ ನೋಂದಾಯಿತರಾದ ಮೊದಲ ಬಾರಿಯ ಉದ್ಯೋಗಿಗಳನ್ನು ಗುರಿಯಾಗಿಸಿಕೊಂಡಿದ್ದು, ಈ ಯೋಜನೆಯ ಸಾಮಾಜಿಕ ಭದ್ರತೆಯ ಮೂಲಕ ಸುರಕ್ಷತಾ ಜಾಲವನ್ನು ಒದಗಿಸುತ್ತದೆ ಮತ್ತು ಔಪಚಾರಿಕ ಆರ್ಥಿಕತೆಗೆ ಸಂಯೋಜಿಸಲು ಅವರಿಗೆ ಸಹಾಯ ಮಾಡುತ್ತದೆ. 1 ಲಕ್ಷ ರೂ.ವರೆಗೆ ಮಾಸಿಕ ವೇತನ ಪಡೆಯುವ ಉದ್ಯೋಗಿಗಳು ಅರ್ಹರಾಗಿರುತ್ತಾರೆ.

ಪ್ರತಿಯೊಬ್ಬ ಅರ್ಹ ಉದ್ಯೋಗಿಗೆ ಒಂದು ತಿಂಗಳ ಇಪಿಎಫ್ ವೇತನ (ರೂ. 15,000 ವರೆಗೆ) ಎರಡು ಕಂತುಗಳಲ್ಲಿ ಲಭಿಸಲಿದೆ. ಆರು ತಿಂಗಳ ನಿರಂತರ ಸೇವೆಯ ನಂತರ ಮೊದಲ ಕಂತನ್ನು ವಿತರಿಸಲಾಗುತ್ತದೆ. 12 ತಿಂಗಳ ನಂತರ ಮತ್ತು ಕಡ್ಡಾಯ ಆರ್ಥಿಕ ಸಾಕ್ಷರತಾ ಕಾರ್ಯಕ್ರಮ ಪೂರ್ಣಗೊಂಡ ನಂತರ ಎರಡನೇ ಕಂತನ್ನು ಬಿಡುಗಡೆ ಮಾಡಲಾಗುತ್ತದೆ. ದೀರ್ಘಕಾಲೀನ ಹಣಕಾಸು ಯೋಜನೆಯನ್ನು ಉತ್ತೇಜಿಸಲು ಪ್ರೋತ್ಸಾಹದ ಒಂದು ಭಾಗವನ್ನು ಉಳಿತಾಯ ಸಾಧನ ಅಥವಾ ಠೇವಣಿ ಖಾತೆಯಲ್ಲಿ ಇಡಲಾಗುತ್ತದೆ.

*ಭಾಗ ಬಿ: ಉದ್ಯೋಗದಾತರಿಗೆ ಬೆಂಬಲ:*

ಈ ಭಾಗವು ಎಲ್ಲಾ ಕ್ಷೇತ್ರಗಳಲ್ಲಿ ಹೆಚ್ಚುವರಿ ಉದ್ಯೋಗ ಸೃಷ್ಟಿಯತ್ತ ಗಮನ ಹರಿಸುತ್ತದೆಯಾದರೂ, ಉತ್ಪಾದನಾ ವಲಯದ ಮೇಲೆ ವಿಶೇಷವಾಗಿ ಗಮನ ಕೇಂದ್ರೀಕರಿಸುತ್ತದೆ. ಗರಿಷ್ಟ 1 ಲಕ್ಷ ರೂ.ವರೆಗಿನ ವೇತನ ಹೊಂದಿರುವ ಉದ್ಯೋಗಿಗಳಿಗೆ ಸಂಬಂಧಿಸಿದಂತೆ ಉದ್ಯೋಗದಾತರು ಈ ಪ್ರೋತ್ಸಾಹಧನವನ್ನು ಪಡೆಯುತ್ತಾರೆ. ಕನಿಷ್ಠ ಆರು ತಿಂಗಳವರೆಗೆ ನಿರಂತರ ಉದ್ಯೋಗ ಹೊಂದಿರುವ ಪ್ರತಿ ಹೆಚ್ಚುವರಿ ಉದ್ಯೋಗಿಗೆ ಸರ್ಕಾರವು ಎರಡು ವರ್ಷಗಳವರೆಗೆ ತಿಂಗಳಿಗೆ 3,000 ರೂ.ಗಳವರೆಗೆ ಪ್ರೋತ್ಸಾಹಧನ ನೀಡುವ ಮೂಲಕ ಉದ್ಯೋಗದಾತರನ್ನು ಪ್ರೋತ್ಸಾಹಿಸುತ್ತದೆ. ಉತ್ಪಾದನಾ ವಲಯಕ್ಕೆ, ಪ್ರೋತ್ಸಾಹಕಗಳನ್ನು 3 ಮತ್ತು 4 ನೇ ವರ್ಷಗಳಿಗೂ ವಿಸ್ತರಿಸಲಾಗುವುದು.

ಉದ್ಯೋಗದಾತರಿಗೆ ದೊರೆಯುವ ಪ್ರೋತ್ಸಾಹಧನವು ನೇಮಕಗೊಂಡ ಪ್ರತಿ ಹೊಸ ಉದ್ಯೋಗಿಗೆ ಉದ್ಯೋಗದಾತರು ಮಾಸಿಕ ಪ್ರೋತ್ಸಾಹ ಧನವನ್ನು ಪಡೆ–ಯುತ್ತಾರೆ.

10,000 ರೂ. ವರೆಗಿನ ಸಂಬಳಕ್ಕೆ 1,000 ರೂ., 10,001 ರೂ. ರಿಂದ 20,000 ರೂ. ವರೆಗಿನ ಸಂಬಳಕ್ಕೆ 2,000 ರೂ., 20,000 ರೂ. ಕ್ಕಿಂತ ಹೆಚ್ಚಿನ ಸಂಬಳಕ್ಕೆ 3,000 ರೂ. (ರೂ. 1 ಲಕ್ಷದವರೆಗೆ) ಉದ್ಯೋಗದಾತರು ಪ್ರೋತ್ಸಾಹಧನ ಪಡೆಯಲು ಅರ್ಹತಾ ಮಾನಡಂಡಗಳನ್ನು ಹೊಂದಿರಬೇಕು.

ಕನಿಷ್ಠ 2 ಹೊಸ ಉದ್ಯೋಗಿಗಳನ್ನು ಸೇರ್ಪಡೆ ಮಾಡಿಕೊಳ್ಳಬೇಕು (ಒಟ್ಟು 50 ಸಿಬ್ಬಂದಿ ಇದ್ದ ಪಕ್ಷದಲ್ಲಿ). ಕನಿಷ್ಠ 5 ಹೊಸ ಉದ್ಯೋಗಿಗಳನ್ನು ಸೇರ್ಪಡೆ ಮಾಡಿಕೊಳ್ಳಬೇಕು (ಒಟ್ಟು 50 ಸಿಬ್ಬಂದಿ ಅಥವಾ ಅದಕ್ಕಿಂತ ಹೆಚ್ಚು ಇದ್ದಲ್ಲಿ).

*ಯೋಜನೆಯ ಅನುಷ್ಠಾನ:*

ಉದ್ಯೋಗ ಆಧಾರಿತ ಪ್ರೋತ್ಸಾಹಧನ ಯೋಜನೆಯಡಿ ಎಲ್ಲಾ ವಿತರಣೆಗಳು ಪಾರದರ್ಶಕತೆ ಮತ್ತು ದಕ್ಷತೆಗಾಗಿ ನೇರ ನಗದು ವರ್ಗಾವಣೆ (ಡಿಬಿಟಿ) ಮಾದರಿ ಅನುಸರಿಸುತ್ತದೆ. ಉದ್ಯೋಗಿಗಳಿಗೆ ಪಾವತಿಗಳನ್ನು (ಭಾಗ ಎ) ಆಧಾರ್ ಸಂಯೋಜಿತ ಪಾವತಿ ವ್ಯವಸ್ಥೆ (ಎಬಿಪಿಎಸ್) ಮೂಲಕ ರವಾನಿಸಲಾಗುತ್ತದೆ. ಉದ್ಯೋಗಿ ಪ್ರೋತ್ಸಾಹಕಗಳನ್ನು (ಭಾಗ ಬಿ) ನೇರವಾಗಿ ಪಾನ್–ಸಂಬಂಧಿತ ಖಾತೆಗಳಿಗೆ ಜಮಾ ಮಾಡಲಾಗುತ್ತದೆ. ಉದ್ಯೋಗದಾತ ಮತ್ತು ಉದ್ಯೋಗಿ ಪ್ರಯೋಜನಗಳು ಎರಡೂ ನಿರಂತರತೆ ಮತ್ತು ಅನುಸರಣೆಗೆ ಸಂಬಂಧಿಸಿರುವುದರಿಂದ, ಪ್ರೋತ್ಸಾಹಕ–ಸಂಬಂಧಿತ ಮಾದರಿಯು ನಿರಂತರ ಉದ್ಯೋಗವನ್ನು ಪ್ರೋತ್ಸಾಹಿಸುತ್ತದೆ ಮತ್ತು ದುರುಪಯೋಗವನ್ನು ಕಡಿಮೆ ಮಾಡುತ್ತದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಭವಿಷ್ಯ ನಿಧಿ ಪ್ರಾದೇಶಿಕ ಕಚೇರಿಯ ಸಹಾಯಕ ಆಯುಕ್ತ ಟಿ.ನಂದನ್ ಸಿಂಗ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಉರಗ ರಕ್ಷಕ ಮಲ್ಲಯ್ಯ್ಯ ಪೋಲಂಪಲ್ಲಿ ಅವರಿಂದ ದೊಡ್ಡ ಗಾತ್ರದ ಹಾವು ರಕ್ಷಣೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ ತಾಲೂಕಿನ ಗೋಗಿ ಗ್ರಾಮದಲ್ಲಿದ್ದ ಹೆಬ್ಬಾವು ಸುಮಾರು 30 ಕೆಜಿ ತೂಕ ಹಾಗೂ 10 ರಿಂದ 15 ಅಡಿ ಉದ್ದದ ಹೆಬ್ಬಾವು

ದೊಡ್ಡ ಗಾತ್ರದ ಹೆಬ್ಬಾವು ಕಂಡು ಭಯಬೀತರಾಗಿದ್ದ ಗ್ರಾಮಸ್ಥರು

ಗ್ರಾಮಸ್ಥರ ಮನವೋಲಿಸಿ ಹೆಬ್ಬಾವನ್ನು ಹಿಡಿದು ಅರಣ್ಯ ಅಧಿಕಾರಿಗಳಿಗೆ ಒಪ್ಪಿಸಿದ ಪೋಲಂಪಲ್ಲಿ ಹತ್ತಿಕುಣಿ ಗ್ರಾಮದ ಹೊರವಲಯದಲ್ಲಿರುವ ಅರಣ್ಯ ಪ್ರದೇಶಕ್ಕೆ ಹೆಬ್ಬಾವು ರವಾನೆ ಹೆಬ್ಬಾವು ರಕ್ಷಣೆಗೆ ಮಲ್ಲಯ್ಯ ಪೋಲಂಪಲ್ಲಿ ಅವರಿಗೆ ಸಾಥ್ ನೀಡಿದ ಅರಣ್ಯಾಧಿಕಾರಿ ಶ್ರೀಧರ ಯಕ್ಷಿಂತಿ ಗಸ್ತು ವನಪಾಲಕರಾದ ಸುಧಾನಂದ ಹಿರೇಮಠ, ರಾಜು ಇದ್ದರು. ಮಲ್ಲಯ್ಯ ಪೋಲಂಪಲ್ಲಿ ಅವರಿಂದ ಇದುವರೆಗೆ ಸುಮಾರು 3 ರಿಂದ 4 ಸಾವಿರ ಹಾವು ರಕ್ಷಣೆ ಮಾಡಿ ತಾಲೂಕಿಗೆ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಯಾವುದೇ ಮನೆಯಲ್ಲಿ ಹಾವು ಕಂಡರೆ ಯಾವುದೇ ಫಲಪೇಕ್ಷವಿಲ್ಲದೆ ಉರಗ ರಕ್ಷಣೆ ಮಾಡುವುದರ ಜೊತೆಗೆ ತಾಲೂಕಿನ ಉರಗ ರಕ್ಷಕ ಖ್ಯಾತ ಮಲ್ಲಯ್ಯ ಪೋಲಂಪಲ್ಲಿ ಅವರಿಗೆ ಸಲ್ಲುತ್ತದೆ.

**ತಾಲೂಕಿನ ಅತ್ಯಂತ ಹಗಲು ರಾತ್ರಿ ಎನ್ನದೆ 24*7 ಯಾವ ಸಂದರ್ಭದಲ್ಲಿ ಕಾಲ್ ಮಾಡಿದರು. ಸಹ ಹೊರಗ ತಜ್ಞಸ್ಥಳಕ್ಕೆ ಧಾವಿಸಿ ಉರಗ ಹಿಡಿದು ಅರಣ್ಯಕ್ಕೆ ಬಿಡುವುದು ಇವರ ದೊಡ್ಡ ಸೇವೆ ಇವರದಾಗಿದೆ. ಇವರಿಗೆ ಸರ್ಕಾರದಿಂದ ಕೆಲವೊಂದು ತಾಂತ್ರಿಕ ಕವಚ ಹಾಗೂ ಉರಗ ಹಿಡಿಯುವ ಕೋಲು ಕೊಡಿಸುವ ಕೆಲಸ ಸರ್ಕಾರ ಮಾಡಬೇಕಾಗಿದೆ**

**–ನೀಲಪ್ಪ ವಿಭೂತಿಹಳ್ಳಿ ಸಮಾಜಸೇವಕರು.**

# ಬಹುಗ್ರಾಮ ಕುಡಿಯುವ ನೀರಿನ ಘಟಕಕ್ಕೆ ಸಿಇಓ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8–ಬೀಳಗಿ ತಾಲೂಕಿನ ತೋಳಮಟ್ಟಿ ಗ್ರಾಮದ ಬಹುಗ್ರಾಮ ಕುಡಿಯುವ ನೀರಿನ ಘಟಕಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಂಗಳವಾರ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಬೀಳಗಿ ತಾಲೂಕಿನ ವಿವಿಧೆಡೆ ಭೇಟಿ ನೀಡಿದ ಸಂದರ್ಭದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಘಟಕಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ಬೀಳಗಿ ಕ್ರಾಸ್‌ನಲ್ಲಿರುವ ಬಸ್ ನಿಲ್ದಾಣಕ್ಕೆ ಭೇಟಿ ನೀಡಿದ ಸಮಯದಲ್ಲಿ ಸ್ವಚ್ಛತೆಯ ಬಗ್ಗೆ ಹೆಚ್ಚಿನ ಗಮನ ಹರಿಸಲು ಸೂಚಿಸಿದರು. ಮನ್ನಿಕೇರಿ ಗ್ರಾಮದ ನರೇಗಾ ಯೋಜನೆಯಡಿ ಕೈಗೊಂಡ ಹಳ್ಳ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ವೀಕ್ಷಣೆ ಮಾಡಿದರು. ಕೂಲಿಕಾರ್ಮಿರನ್ನು ಮಾತನಾಡಿಸಿ ಸರಿಯಾದ ಸಮಯಕ್ಕೆ ಕೂಲಿ ಜಮೆಗೆ ಕ್ರಮವಹಿಸಲು ಅವರು ತಿಳಿಸಿದರು.

ಮನ್ನಿಕೇರಿ ಗ್ರಾಮದ ಡಿಬಿಓಟಿ–2 ಕಾಮಗಾರಿ ವೀಕ್ಷಣೆ ಮಾಡಿದ ಕುರೇರ, ಸುನಗ ಗ್ರಾಮದ ಸರಕಾರಿ ಪ್ರೌಢಶಾಲೆಯ ಕೊಠಡಿ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿ ನಿಗದಿತ ಸಮಯದಲ್ಲಿ ಗುಣಮಟ್ಟದ ಕಾಮಗಾರಿ ಕೈಗೊಳ್ಳಲು ಸೂಚನೆ ನೀಡಿದರು.

ಬೀಳಗಿ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಿವಾಸ ಪಾಟೀಲ್, ಬೀಳಗಿ ಉಪ ವಿಭಾಗದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರವಿಕಿರಣ ಡಂಬಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪ್ರಾಣಿಜನ್ಯ ರೋಗದ ಬಗ್ಗೆ ಜಾಗೃತಿ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8–ಪ್ರಾಣಿಜನ್ಯ ರೋಗಗಳ ನಿರ್ವಹಣೆ ಆಗದಿದ್ದರೆ ಮಾನವನ ಆರೋಗ್ಯದ ಮೇಲೆ ಭಾರೀ ಪ್ರಮಾಣದಲ್ಲಿ ಪರಿಣಾಮ ಬೀರಲಿದೆ ಎಂದು ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆನ್ನವರ ಹೇಳಿದರು.

ಇತ್ತೀಚೆಗೆ ನಗರದ ಡಾ.ಸುಭಾಸ ಪಾಟೀಲ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸ್ ಕಾಲೇಜ್‌ನಲ್ಲಿ ವಿಶ್ವ ಪ್ರಾಣಿಜನ್ಯ ಸಾಂಕ್ರಾಮಿಕ ರೋಗಗಳ ದಿನಾಚರಣೆ ಅಂಗವಾಗಿ ನಡೆದ ವಿಶೇಷ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಪ್ರತಿ ವರ್ಷ ನಾವು ಶ್ರೇಷ್ಠ ವಿಜ್ಞಾನಿ ಲೂಯಿಸ್ ಪ್ಯಾಶ್ಚರ್ ಅವರ ಗೌರವಾರ್ಥ ಜುಲೈ 6 ರಂದು ವಿಶ್ವ ಪ್ರಾಣಿಜನ್ಯ ರೋಗ ದಿನವನ್ನು ಆಚರಿಸುತ್ತೇವೆ ಎಂದರು.

ಪ್ರಾಣಿಜನ್ಯ ರೋಗಗಳಲ್ಲಿ ಒಂದಾಗಿರುವ ರೇಬಿಸ್ ವಿರುದ್ಧ ಮೊದಲನೆಯ ಲಸಿಕೆಯನ್ನು ಲೂಯಿಸ್ ಪ್ಯಾಶ್ಚರ್ ಆವಿಷ್ಕರಿಸಿದವರು. ಸಾಂಕ್ರಾಮಿಕ ರೋಗಗಳ ಜತೆ ಇಲಿ ಜ್ವರ, ಹಂದಿಜ್ವರ, ರೇಬೀಸ್ ಹೀಗೆ ಪ್ರಾಣಿಗಳಿಂದ ಬರುತ್ತವೆ. ಆದ್ದರಿಂದ ಪ್ರಾಣಿಗಳ ಕಡಿತ ಕಾಯಿಲೆಗಳ ಬಗ್ಗೆ ಮುಂಜಾಗ್ರತೆ ಅಗತ್ಯವೆಂದರು.

ಜಿಲ್ಲಾ ಎಪಿಡಮೋಲಾಜಿಸ್ಟ ಡಾ. ಸೀಮಾ ಹುದ್ದಾರ ಮಾತನಾಡಿ, ನೈಸರ್ಗಿಕವಾಗಿ ಪ್ರಾಣಿ ಮತ್ತು ಮನುಷ್ಯ ಸಂಕುಲದ ನಡುವೆ ಪರಸ್ಪರ ರೋಗ ಹರಡುವ ಪ್ರಕ್ರಿಯೆ ಇದೆ. ಪ್ರಾಣಿ ಜನ್ಯ ರೋಗಗಳ ಸರಿಯಾದ ನಿರ್ವಹಣೆ ಆಗದಿದ್ದರೆ ಮನುಕುಲದ ಮೇಲೆ ಭಾರಿ ಪರಿಣಾಮ ಬೀರಲಿದೆ ಎಂದರು. ಪ್ರಾಣಿಜನ್ಯ ಸಾಂಕ್ರಾಮಿಕ ರೋಗಗಳ ಬಗ್ಗೆ ಸಾರ್ವಜನಿಕರು ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು. ಮನೆಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಮೇಲಿಂದ ಮೇಲೆ ಕೈಗಳನ್ನು ತೊಳೆದುಕೊಳ್ಳಬೇಕು. ನಾಯಿ ಸೇರಿದಂತೆ ಇತರೆ ಸಾಕು ಪ್ರಾಣಿಗಳಿಗೆ ಮುಂಜಾಗೃತ ಕ್ರಮವಾಗಿ ಲಸಿಕೆ ಹಾಕಿಸಿದರೆ ರೋಗಗಳ ನಿಯಂತ್ರಣ ಮಾಡಿಕೊಳ್ಳಬಹುದು ಎಂದು ತಿಳಿಸಿದರು.

ಡಾ.ಸುಭಾಷ ಪಾಟೀಲ್ ಪ್ಯಾರಾಮೆಡಿಕಲ್ ಕಾಲೇಜಿನ ಪ್ರಾಚಾರ್ಯ ಡಾ.ಸಂಗಮೇಶ ರಕರಡ್ಡಿ, ಡಿಟಿಓ ಡಾ.ಸುವರ್ಣ ಕುಲಕರ್ಣಿ, ಡಿಎಲ್‌ಓ ಡಾ.ಎಸ್.ಸಿ.ಪಾಟೀಲ, ಡಾ.ಅಜೀತ ಪಾಟೀಲ, ಮಲ್ಲನಗೌಡ ಪಾಟೀಲ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಚ್.ಪಿ.ನಾಯ್ಕರ, ತಂಬಾಕು ಸಲಹೆಗಾರರು ಶಶಿಕುಮಾರ ಕುಮಟಳ್ಳಿ, ಮೈಕ್ರೋಬಯಾಲಾಜಿಸ್ಟ್ ಸುಪ್ರಿಯಾ ಪಂಡಿತ್, ಜಿಲ್ಲಾ ಡಾಟಾ ಮ್ಯಾನೇಜರ್ ಪ್ರವೀಣ ಕಾಶಿನಕುಂಟಿ ಇದ್ದರು.

# ಪರಿಸರ ರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು–ಎಸ್.ಬಿ.ಗೌಡರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8–ಮನುಷ್ಯನ ಸು:ಖ, ಸಂತೋಷ ಪ್ರಕೃತಿಯಲ್ಲಿ ಅಡಗಿದ್ದು, ಪರಿಸರ ರಕ್ಷಣೆ ಮಾಡುವಲ್ಲಿ ಪ್ರತಿಯೊಬ್ಬರೂ ಕೈಜೋಡಿಸಬೇಕಿದೆ ಎಂದು ಪ್ರಾರ್ಥನಾ ಪಿಯು ಕಾಲೇಜು ಅಧ್ಯಕ್ಷ ಎಸ್.ಬಿ.ಗೌಡರ ಹೇಳಿದರು.

ಪರಿಸರ ಬಳಗ ಬಾಗಲಕೋಟ ಹಾಗೂ ಸೆಕ್ಟರ್ 16ರ ನಾಗರಿಕ ಸೇವಾ ಸಮಿತಿ ಇವರ ಸಂಯುಕ್ತ ಆಶ್ರಯದಲ್ಲಿ ಸೆಕ್ಟರ್ ನಂ.16ರಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರಮದಾನ ಹಾಗೂ ಸಸಿ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಡೀ ಬಾಗಲಕೋಟೆ ನಗರವನ್ನು ಹಸಿರು ಕೋಟೆಯನ್ನಾಗಿ ಮಾಡುವ ಸಂಕಲ್ಪವನ್ನು ಪರಿಸರ ಬಳಗ ಹೊಂದಿದೆ ಎಂದರು.

ನಗರದಲ್ಲಿ ಪ್ರತಿ ರವಿವಾರ ಶ್ರಮದಾನ ನಡೆಸುವುದರ ಮೂಲಕ ಗುರಿ ಸಾಧಿಸುವದಾಗಿ ತಿಳಿಸಿದ ಗೌಡರ, ಈಗ ಪರಿಸರ ನಾಶವಾಗುತ್ತಿದೆ. ಇದಕ್ಕೆ ಮುಖ್ಯ ಕಾರಣ ಮನುಷ್ಯನ ಆಸೆಗಳು ಹೆಚ್ಚಾಗುತ್ತಿರುವುದು. ಇಂದಿನ ಕಾಲದಲ್ಲಿ ಮನುಷ್ಯನ ಆಸೆಗಳಿಗೆ ಕೊನೆಯೇ ಇಲ್ಲದಂತಾಗಿದೆ. ಮನುಷ್ಯ ಸಮಸ್ಯೆಗಳಲ್ಲಿ ಸಿಲುಕಿಕೊಂಡಾಗ ಅದರಿಂದ ಪರಿಹಾರ ಕಂಡುಕೊಳ್ಳಲು ಮತ್ತು ಸಮಾಧಾನ, ನೆಮ್ಮದಿಗಾಗಿ ಪ್ರಕೃತಿಯನ್ನೇ ಹುಡುಕಿಕೊಂಡು ಹೋಗುತ್ತಾನೆ. ಹೀಗಿದ್ದರೂ ಸಹ ನಮ್ಮಲ್ಲಿ ಬದಲಾವಣೆಯಾಗುತ್ತಿಲ್ಲ ಎಂದು ಹೇಳಿದರು.

ನಗರಸಭೆ ಸದಸ್ಯ ಹಾಲೇಶ ಬಳ್ಳಾರಿ ಮಾತನಾಡಿ, ಪರಿಸರ ಸಂರಕ್ಷಣೆಯ ನಿಟ್ಟಿನಲ್ಲಿ ತಾವು ಎಲ್ಲ ರೀತಿಯ ಸಹಾಯ–ಸಹಕಾರ ನೀಡುವದಾಗಿ ತಿಳಿಸಿ ಎಲ್ಲರೂ ಪರಿಸರ ರಕ್ಷಣೆಗೆ ಸಂಕಲ್ಪವನ್ನು ಮಾಡಬೇಕಿದೆ ಎಂದರು.

ಅರಣ್ಯ ಸಂರಕ್ಷಣಾಧಿಕಾರಿ ಮಹೇಶ ಮನ್ನನ್ನವರ, ಪ್ರೊ.ವಿ.ಜಿ.ಜಡಿಮಠ, ನ್ಯಾಯಾಂಗ ಇಲಾಖೆಯ ಬಸವರಾಜ ಬಾದೋಡಗಿ, ಆರತಿ ಮಹಿಷಿ, ಸಂತೋಷ ದಾಸ, ವಿಶ್ವನಾಥ ಹೇಮಾದ್ರಿ, ಮುರಳಿಧರ ಪಮ್ಮಾರ, ಎಂ.ಎಚ್.ಗಂಗಲ, ಸಿ.ಬಿ.ಬೇನಾಳ, ರಮೇಶ ಲಮಾಣಿ, ನಾಗರಿಕ ಸೇವಾ ಸಮಿತಿ ಸಂಘಟನಾ ಕಾರ್ಯದರ್ಶಿ ವಿನಾಯಕ ಪವಾರ, ನಾಗರಿಕ ಸೇವಾ ಸಮಿತಿ ಪ್ರಧಾನ ಕಾರ್ಯದರ್ಶಿ ಐ.ಡಿ.ಅತ್ತಾರ, ವಿನಾಯಕ ಭಗವತಿ, ಅಬ್ದುಲಹಮೀದ್ ಸಂಗತ್ರಾಸ್ ಇತರರು ಭಾಗವಹಿಸಿದ್ದರು.

# ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್‌ಶಿಪ್ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8–ಕರ್ನಾಟಕ ಮಾಧ್ಯಮ ಅಕಾಡೆಮಿ ಮಹಿಳಾ ಆಯವ್ಯಯ ಹಾಗೂ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಗಳಡಿ ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಸ್ನಾತಕೋತ್ತರ ಪದವೀಧರರಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್‌ಶಿಪ್ ಅವಕಾಶ ಕಲ್ಪಿಸಿದೆ.

ಪತ್ರಿಕೋದ್ಯಮದಲ್ಲಿ ಸ್ನಾತ–ಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು. ಬರವಣಿಗೆಯಲ್ಲಿ ಪರಿಣಿತಿ ಹೊಂದಿರುವ, ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. 2022–23 ಹಾಗೂ 2023–24 ನೇ ಶೈಕ್ಷಣಿಕ ವರ್ಷದಲ್ಲಿ ಯಾವುದೇ ವಿಷಯದಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

10 ಮಹಿಳಾ, 10 ಪರಿಶಿಷ್ಟ ಜಾತಿಯ, 4 ಪರಿಶಿಷ್ಟ ಪಂಗಡ ಸೇರಿ ಒಟ್ಟು 24 ಅಭ್ಯರ್ಥಿಗಳಿಗೆ ಇಂಟರ್ನ್‌ಶಿಪ್ ಅವಕಾಶ ಒದಗಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಎರಡು ತಂಡಗಳಲ್ಲಿ ಎರಡು ತಿಂಗಳ ಇಂಟರ್ನ್‌ಶಿಪ್‌ಗೆ ಅವಕಾಶ ಕಲ್ಪಿಸಲಾಗುವುದು. ಇಂಟರ್ನ್‌ಶಿಪ್‌ಗೆ ಸಂಸ್ಥೆ ಹಾಗೂ ಸ್ಥಳವನ್ನು ಅಕಾಡೆಮಿಯೇ ನಿಗದಿಪಡಿಸುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಅಕಾಡೆಮಿ ವತಿಯಿಂದ ಮಾಸಿಕ 20 ಸಾವಿರ ರೂ. ಸ್ಟೈಪೆಂಡ್ ನೀಡಲಾಗುವುದು.

ಅಭ್ಯರ್ಥಿಗಳು ತಮ್ಮ ಸ್ವವಿವರದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ https://forms.gle/UgNqDcFs1v6akyAD9ರಲ್ಲಿ ಅರ್ಜಿ ಸಲ್ಲಿಸಬೇಕು. ಅಭ್ಯರ್ಥಿಗಳ ಆಯ್ಕೆಯ ಅಂತಿಮ ತೀರ್ಮಾನ ಅಕಾಡೆಮಿಯ ಸಮಿತಿಯದ್ದೇ ಆಗಿರುತ್ತದೆ.

ಅರ್ಜಿ ಸಲ್ಲಿಸಲು ಜುಲೈ 25 ಕೊನೆಯ ದಿನವಾಗಿದೆ. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಎಂದು ಅಧ್ಯ–ಕ್ಷೆ ಆಯೇಶಾ ಖಾನಂ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಜು.18 ಜಿಪಂ ಕೆಡಿಪಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8–ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅವರ ಅಧ್ಯಕ್ಷತೆಯಲ್ಲಿ ಜುಲೈ 18 ರಂದು ಬೆಳಿಗ್ಗೆ 10.30 ಗಂಟೆಗೆ ಪ್ರಸಕ್ತ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಥಮ ತ್ರೈಮಾಸಿಕ ಸಭೆ ಜರುಗಲಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತರಿಗೆ ಅಧ್ಯಯನ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8–ಕರ್ನಾಟಕ ಸಾಹಿತ್ಯ ಅಕಾಡೆಮಿ ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಅಗಷ್ಟ 3ನೇ ವಾರ ಅಥವಾ ಕೊನೆಯ ವಾರದಲ್ಲಿ ನಡೆಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20 ರಿಂದ 40 ವರ್ಷ ವಯಸ್ಸಿನ, ಈಗಾಗಲೇ ಪತ್ರಿಕೆಯಲ್ಲಿ ಕೆಲಸ ಮಾಡುತ್ತಿರುವವರು, ಪತ್ರಿಕೋದ್ಯಮ ಪದವಿ ಪಡೆದವರು ಹಾಗೂ ಅಸಕ್ತಿಯುಳ್ಳವರು ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜುಲೈ 25 ಆಗಿದ್ದು, ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿ ವೆಬ್ ಸೈಟ್ https://sahithyaacademy.karnataka.gov.inದಿಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ ಕರಿಯಪ್ಪ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಾಸಿಮಯ್ಯ ವಚನಗಳಲ್ಲಿ ತಾತ್ವಿಕ ಚಿಂತನೆಯಿದೆ–ಗೌರೀಶ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8–ದೇವರ ದಾಸಿಮಯ್ಯನವರ ವಚನಗಳಲ್ಲಿ ಸಾಮಾಜಿಕ ಕಳಕಳಿಯಿದ್ದು, ತಾತ್ವಿಕ ಚಿಂತನೆ ಅಡಗಿದೆ ಎಂದು ನಿವೃತ್ತ ಬ್ಯಾಂಕ್ ಅಧಿಕಾರಿ ಮೋಹನ ಗೌರೀಶ್ ಹೇಳಿದರು.

ನಗರದ ದೇವಾಂಗ ಸಮಾಜ ರವಿವಾರ ನವನಗರದ ಬೃಂದಾವನ ಸೆಕ್ಟರ ನಿವಾಸಿ ಪ್ರದೀಪ ಗುರೂಜಿ ಅವರ ನಿವಾಸದಲ್ಲಿ ಹಮ್ಮಿಕೊಂಡಿದ್ದ ಮನೆ ಮನಗಳಲ್ಲಿ ದಾಸಿಮಯ್ಯ ವಚನ ಉತ್ಸವ ಕಾರ್ಯಕ್ರಮದಲ್ಲಿ ದೇವರ ದಾಸಿಮಯ್ಯ ವಚನ ಕುರಿತು ಅವರು ಉಪನ್ಯಾಸ ನೀಡಿದರು.


ದಾಸಿಮಯ್ಯನವರ ವಚನಗಳಲ್ಲಿ ಆತ್ಮಶಕ್ತಿಯ ಚಿಂತನೆಯಿದೆ. ಆತ್ಮ ಸಂವಾದ, ಲೋಕ ಸಂವಾದ ಹಾಗೂ ದೈವ ಸಂವಾದದ ಮೂರು ವಿಧದ ವಚನಗಳು ಬಹಳಷ್ಟು ಮೌಲಿಕವಾಗಿದೆ. ಮಾನವೀಯ ಮೌಲ್ಯಗಳನ್ನು ಒಳಗೊಂಡಿರುವ ಎಲ್ಲ ವಚನಗಳೂ ಆತ್ಮ ಚಿಂತನೆಗೆ ಮಹತ್ವ ಕೊಡುತ್ತವೆ ಎಂದ ಗೌರೀಶ್, ಪ್ರತಿಯೊಬ್ಬ ವ್ಯಕ್ತಿ ಆತ್ಮಶಕ್ತಿಯ ಅನುಭವ ಪಡೆದುಕೊಂಡಾಗ ಬದುಕು ಅರ್ಥಪೂರ್ಣ ಹಾಗೂ ಸುಂದರಮಯವಾಗುತ್ತದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ, ಪ್ರತಿಯೊಬ್ಬ ವ್ಯಕ್ತಿ ಲೌಕಿಕ ಜೀವನದ ಜೊತೆ ಆತ್ಮ ಸುವಿಚಾರ ಚಿಂತನ ಮಾಡಬೇಕು ಎನ್ನುವ ದೃಷ್ಟಿಯಲ್ಲಿ ಮನೆ ಮನದಲ್ಲಿ ಚಿಂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ದೇವಾಂಗ ಸಮಾಜದ ಅಧ್ಯಕ್ಷ ಎಸ್.ವಿ.ಚೌಡಾಪೂರ ಅಧ್ಯಕ್ಷತೆ ವಹಿಸಿ ಮಾತನಾಡಿ, ದೇವರ ದಾಸಿಮಯ್ಯನವರು ರಾಮನಾಥ ಅಂಕಿತ ನಾಮದೊಂದಿಗೆ ರಚಿಸಿದ ವಚನಗಳು ಮನುಕುಲದ ಒಳಿತಿಗೆ ದಾರಿದೀಪಗಳಾಗಿವೆ ಎಂದು ಹೇಳಿದರು. ಎಚ್.ವಾಯ್. ಗದ್ದನಕೇರಿ ಇದ್ದರು.

ಸುರೇಶ ದಡ್ಡಿ ನಿರೂಪಿಸಿದರು. ಶಿವು ಹೊಸಕೋಟಿ ವಂದಿಸಿದರು.

# ಪದವಿ ಪರೀಕ್ಷೆ: ವಿದ್ಯಾರ್ಥಿಗಳ ಉತ್ತಮ ಸಾಧನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8–ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಮತ್ತು ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು, ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಮೇ–ಜೂನ್ ತಿಂಗಳಲ್ಲಿ ನಡೆಸಿದ ಬಿ.ಎ ಹಾಗೂ ಬಿ.ಕಾಂ 6ನೇ ಸೆಮೆಸ್ಟರ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ತಿಳಿಸಿದ್ದಾರೆ.

ಬಿ.ಎ ವಿಭಾಗದ ಒಟ್ಟಾರೆ ಫಲಿತಾಂಶ 100 ರಷ್ಟಾಗಿದ್ದು 4 ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆಯೊಂದಿಗೆ ಉತ್ತೀರ್ಣರಾಗಿದ್ದು, 16 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ದಲ್ಲಿ ಹಾಗೂ 12 ವಿದ್ಯಾರ್ಥಿಗಳು ಪ್ರಥಮ ವರ್ಗದಲ್ಲಿ ತೇರ್ಗಡೆಯಾಗಿದ್ದಾರೆ.

ಸುರೇಖಾ ಕಟ್ಟೆನ್ನವರ (ಶೇ.92.46) ಪ್ರಥಮ, ಮುತ್ತು ದಳವಾಯಿ (ಶೇ.90.77) ದ್ವಿತೀಯ ಹಾಗೂ ಮಹಾಲಿಂಗಪ್ಪ ಗೌಡರ (ಶೇ.90.62) ತೃತೀಯ ಸ್ಥಾನ ಪಡೆದಿದ್ದಾರೆ.

ಬಿ.ಕಾಂ ವಿಭಾಗದ ಫಲಿತಾಂಶ ಶೇ.90 ರಷ್ಟಾಗಿದ್ದು 2 ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆಯೊಂದಿಗೆ ಉತ್ತೀರ್ಣರಾಗಿದ್ದು, 3 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ದಲ್ಲಿ ತೇರ್ಗಡೆಯಾಗಿದ್ದಾರೆ. ಶ್ರವಣಾ ಸಿದ್ನಾಳ (ಶೇ.90.57) ಪ್ರಥಮ, ದಿವ್ಯಾ ಬಿಲ್ಲಾರ (ಶೇ.89.71) ದ್ವಿತೀಯ ಹಾಗೂ ನಾಗವೇಣಿ ರೊಟ್ಟಿ (ಶೇ.88.85) ತೃತೀಯ ಸ್ಥಾನ ಪಡೆದಿದ್ದಾರೆ.

ಸಂಸ್ಥೆಯ ಕಾರ್ಯಾಧ್ಯಕ್ಷೆ ಶ್ರೀಮತಿ ಶ್ರೀಲತಾ ಹೆರಂಜಲ್, ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ, ಕಾಲೇಜು ಉಪವಿಭಾಗದ ಅಧ್ಯಕ್ಷ ಡಾ.ಪಿ.ಆರ್.ಜೋಶಿ ಹಾಗೂ ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ ಈ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

# ಬಾಗಲಕೋಟೆಯಲ್ಲಿ ಖೇಲೋ ಇಂಡಿಯಾ ಕೇಂದ್ರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8–ಭಾರತ ಸರ್ಕಾರದ ಖೇಲೋ ಇಂಡಿಯಾ ಯೋಜನೆಯಡಿ ಬಾಗಲಕೋಟ ಜಿಲ್ಲೆಯಲ್ಲಿ ಸೈಕ್ಲಿಂಗ್ ಕ್ರೀಡೆಗೆ ಸಣ್ಣ ಖೇಲೋ ಇಂಡಿಯಾ ತರಬೇತಿ ಕೇಂದ್ರವನ್ನು ಸ್ಥಾಪಿಸಲಾಗಿದೆ.

ಆಸಕ್ತ ಸೈಕ್ಲಿಂಗ್ ಕ್ರೀಡಾಪಟುಗಳನ್ನು ಆಯ್ಕೆ ಪ್ರಕ್ರಿಯೆ ಮೂಲಕ ತೆಗದುಕೊಳ್ಳಲಾಗುವುದು. ಆಯ್ಕೆ ಪ್ರಕ್ರಿಯೆ ಜುಲೈ 15 ರಂದು ಬೆಳಗ್ಗೆ 10 ಗಂಟೆಗೆ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದೆ.

ಆಯ್ಕೆಯಾದವರಿಗೆ ಉಚಿತ ವೈಜ್ಞಾನಿಕ ತರಬೇತಿ ಒದಗಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯನ್ನು ದೂರವಾಣಿ ಸಂಖ್ಯೆ 9739722700, 9480210536 ಮೂಲಕ ಸಂಪರ್ಕಿಸಬೇಕೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಹುದ್ದೆಗಳ ನೇಮಕಾತಿ; ಜು.11 ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.08–ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ 2025–26 ನೇ ಸಾಲಿಗೆ ವಿವಿಧ ಕಾರ್ಯಕ್ರಮಗಳಡಿ ಮಂಜೂರಾಗಿ ಖಾಲಿ ಇರುವ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದ್ದು, ಜುಲೈ 11 ರಂದು ನೇರ ಸಂದರ್ಶನ ಏರ್ಪಡಿಸಲಾಗಿದೆ.

**ಹುದ್ದೆಗಳ ವಿವರ:**

ಮಕ್ಕಳ ಆರೋಗ್ಯ ವಿಭಾಗ–01(ಎಂಬಿಬಿಎಸ್), ಇ–ಆಸ್ಪತ್ರೆ ವಿಭಾಗ–02(ಎಂಬಿಬಿಎಸ್), ಎಸ್‌ಎನ್‌ಸಿಯು ವಿಭಾಗ–06(ಎಂಬಿಬಿಎಸ್), ತಾಯಿ ಆರೋಗ್ಯ ವಿಭಾಗ–02(ಎಂಬಿಬಿಎಸ್), ಎನ್‌ಸಿಡಿ ವಿಭಾಗ–05(ಎಂಬಿಬಿಎಸ್), ಎನ್‌ಯುಹೆಚ್‌ಎಂ ವಿಭಾಗ–02(ಎಂಬಿಬಿಎಸ್), ನಮ್ಮ ಕ್ಲಿನಿಕ್–03(ಎಂಬಿಬಿಎಸ್) ಸೇರಿ ಒಟ್ಟು 21 ಮತ್ತು ಮಕ್ಕಳ ತಜ್ಞ ವೈದ್ಯರು–01, ಇತರೆ ತಜ್ಞ ವೈದ್ಯರು–01.

ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳು ಜುಲೈ 11 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಚೇರಿಯಲ್ಲಿ ನೇರ ಸಂದರ್ಶನ ಏರ್ಪಡಿಸಲಾಗಿದೆ.

ಗುತ್ತಿಗೆ ಆಧಾರದ ನೇಮಕಾತಿಯನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ಮೆರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುವುದು.

ಗುತ್ತಿಗೆ ಆಧಾರದ ನೇಮಕಾತಿಯು ಎನ್.ಹೆಚ್.ಎಂ ನಿಯಮಾವಳಿಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ. ಮಾಹಿತಿಗಾಗಿ www.Ballari.nic.in ಅಂತರ್ ಜಾಲಕ್ಕೆ ಭೇಟಿ ನೀಡಿ ಪರಿಶೀಲಿಸಬಹುದು.

**ವಿಶೇಷ ಸೂಚನೆ:**

ಜುಲೈ–2025ರಿಂದ ಮಾರ್ಚ್–2026 ರವರೆಗೆ ಭರ್ತಿ ಆಗಿರುವ ಹುದ್ದೆಗಳು ಖಾಲಿ ಆದಲ್ಲಿ ಪ್ರತಿ ದಿನ ನೇರ ಸಂದರ್ಶನ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಯೋಜನಾ ನಿರ್ವಹಣಾ ಘಟಕ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳ ಕಾರ್ಯಾಲಯ, ಬಳ್ಳಾರಿ ಅಥವಾ ಮೊ.9449843102 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲುಷಿತ ನೀರು ಸೇವನೆ ಮೂವರ ಸಾವು

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ,ಜು.7:ಕಲುಷಿತ ನೀರು ಸೇವಿಸಿ ಮೂವರು ಮೃತಪಟ್ಟಿರುವ ಘಟನೆ ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ತಿಪ್ಪನಟಗಿ ಗ್ರಾಮದಲ್ಲಿ ಸಂಭವಿಸಿದೆ. ಘಟನೆಯಲ್ಲಿ 6 ಜನರ ಸ್ಥಿತಿ ಗಂಭೀರವಾಗಿದೆ.

ಮೃತರನ್ನು ದೇವಿಕೆಮ್ಮ ಹೊಟ್ಟಿ (48), ವೆಂಕಮ್ಮ (60), ರಾಮಣ್ಣ ಪೂಜಾರಿ (50) ಎಂದು ಗುರುತಿಸಲಾಗಿದೆ. 10 ದಿನಗಳ ಹಿಂದೆ ಕಲುಷಿತ ನೀರು ಸೇವಿಸಿ ತಿಪ್ಪನಟಗಿ ಗ್ರಾಮಸ್ಥರು ವಾಂತಿ–ಭೇದಿಯಿಂದ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ, ಚಿಕಿತ್ಸೆ ಫಲಿಸದೆ ಇಂದು ಮೂವರು ಸಾವನ್ನಪ್ಪಿದ್ದಾರೆ.

7 ಜನರ ಸ್ಥಿತಿ ಗಂಭೀರವಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆ–ಯುತ್ತಿದ್ದಾರೆ.

ಹಲವರ ಆರೋಗ್ಯದಲ್ಲಿ ಚೇತರಿಕೆ ಕಂಡಿದ್ದು, ಇನ್ನೂ 20 ಮಂದಿ ಅಸ್ವಸ್ಥರಾಗಿದ್ದಾರೆ.

ತಿಪ್ಪನಟಗಿ ಗ್ರಾಮಕ್ಕೆ ಸುರಪುರ ತಾಲ್ಲೂಕು ಅಧಿಕಾರಿ ರಾಜವೆಂಕಟಪ್ಪ ಭೇಟಿನೀಡಿ ಪರಿಶೀಲನೆ ನಡೆಸಿದರು. ವಾಂತಿ–ಭೇದಿ ಪ್ರಕರಣ ವರದಿ ನೀಡುವಂತೆ ಜಿಲ್ಲಾ ಆರೋಗ್ಯಾಧಿಕಾರಿ ಮಹೇಶ್ ಬಿರಾದಾರ ಸೂಚಿಸಿದ್ದಾರೆ.

# ಮಟಕಾ: ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.8–ನಗರದ ಆಳಂದ ಚೆಕ್‌ಪೋಸ್ಟ್ ಹತ್ತಿರದ ಶಿವಲಿಂಗ ನಗರ ಕಾಲೋನಿಯ ಗಾರ್ಡನ್ ಹತ್ತಿರದ ಲೇಔಟ್‌ನ ಖುಲ್ಲಾ ಪ್ಲಾನ್‌ಗಳಲ್ಲಿರುವ ಸಾರ್ವಜನಿಕ ರಸ್ತೆಯ ಮೇಲೆ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ರವೀಂದ್ರಕುಮಾರ, ಶ್ರೀಶೈಲ, ಸುನೀಲಕುಮಾರ, ನಾಗರಾಜ ಅವರು ದಾಳಿ ನಡೆಸಿ ಬುಲಂದ್ ಪರ್ವೇಜ್ ಕಾಲೋನಿಯ ಮಹ್ಮದ್ ಮಜೀದ್ (32) ಎಂಬಾತನನ್ನು ಬಂಧಿಸಿ 3,500 ರೂ.ನಗದು, ಮಟಕಾ ಚೀಟಿ, ಒಂದು ಬಾಪೆನ್ ಜಪ್ತಿ ಮಾಡಿದ್ದಾರೆ. ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ರಾಚೋಟಿ ವೀರಣ್ಣ ದೇವಾಲುಯ ಪ್ರದೇಶ ಹಾಗೂ ಪರಿಸರ ರಕ್ಷಿಸಲು ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಜು.8: ನಮ್ಮ ದೇಶ ಧಾರ್ಮಿಕ ಪ್ರಧಾನವಾದ ದೇಶ, ಇಲ್ಲಿ ಅನಾದಿ ಕಾಲದಿಂದ ದೇವಸ್ಥಾನಗಳಿಗೆ ತಮ್ಮದೇ ಆದ ಮೌಲ್ಯಗಳಿವೆ, ಅದರಲ್ಲಿ ಒಂದಾದ ಗಿರಿ ಜಿಲ್ಲಾ ಕೇಂದ್ರಕ್ಕೆ ಹೊಂದಿಕೊಂಡಿರುವ ಐತಿಹಾಸಿಕ ಹಿನ್ನೆಲೆ ಹೊಂದಿದ ಶ್ರೀ ರಾಚೋಟಿ ವೀರಣ್ಣ ದೇವಸ್ಥಾನ ಸುತ್ತ-ಮುತ್ತಲಿರುವ ಸರ್ಕಾರಿ ಜಮೀನನ್ನು ಗುರುತಿಸಿ, ಅಲ್ಲಿನ ಪರಿಸರವನ್ನು ರಕ್ಷಣೆ ಮಾಡಬೇಕೆಂದು ಮುಖ್ಯಮಂತ್ರಿಗಳ ವಿಶ್ರಾಂತ ಹೆಚ್ಚುವರಿ ಕಾರ್ಯದರ್ಶಿ ಎಂ. ಲಕ್ಷ್ಮೀ ನಾರಾಯಣ ಆಗ್ರಹಿಸಿದರು.

ನಗರದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಜಿಲ್ಲಾ ಘಟಕ, ಕರವೇ ಉತ್ತರ ಕರ್ನಾಟಕ ಘಟಕ ಯಾದಗಿ-ರಿಯ ಶ್ರೀ ರಾಚೋಟಿ ವೀರಣ್ಣ ಸದ್ಭಕ್ತ ಮಂಡಳಿ ಹಮ್ಮಿಕೊಂಡಿದ್ದ ಬೃಹತ್ ಜನ ಜಾಗೃತಿ ಪ್ರತಿಭಟನಾ ಪಾದಯಾತ್ರೆ ಜಿಲ್ಲಾಧಿಕಾರಿಗಳ ಕಛೇರಿ ಮುಂಭಾಗದಲ್ಲಿ ಸಮಾಗಮಗೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅನಾದಿ ಕಾಲದಿಂದ ನಾಡಿನಲ್ಲಿ ನಾವೇಲ್ಲರೂ ನಾನಾ ದೇವಸ್ಥಾನಗಳ ಧಾರ್ಮಿಕ ಉತ್ಸವಗಳನ್ನು ಆಚರಿಸಿಕೊಂಡು ಬಂದಿದ್ದೇವೆ, ನಾನು ಈ ಭಾಗದಲ್ಲಿ ಸಹಾಯಕ ಆಯುಕ್ತರಾಗಿ, ಜಿಲ್ಲಾಧಿಕಾರಿಗಳಾಗಿ ಕಾರ್ಯ ನಿರ್ವಹಿಸಿ, ಇಲ್ಲಿನ ಸ್ಥಿತಿ-ಗತಿಗಳ ಅರಿವು ನನಗಿದೆ, ಸರ್ವೆ.ನಂ, 671ರಲ್ಲಿ ಒಟ್ಟು 96 ಎಕರೆ ಸರ್ಕಾರಿ ಭೂಮಿ ದೇವಸ್ಥಾನ ಸುತ್ತ-ಮುತ್ತವಿದೆ, ಬದಲಾದ ಕಾಲಗಟ್ಟದಲ್ಲಿ ಇಲ್ಲಿನ ಪರಿಸರ ಹಾಳಾಗಿ ದೇವಸ್ಥಾನಕ್ಕೆ ದಕ್ಕೆ ಬರುತ್ತಿದೆ, ಅಲ್ಲದೇ ಸರ್ಕಾರಿ ಜಮೀನನ್ನು ಕೆಲ ಪ್ರಭಾವಿಗಳು ಒತ್ತುವರಿ ಮಾಡಿಕೊಂಡಿದ್ದಾರೆ, ಕಂದಾಯ ಇಲಾಖೆ ಅಧಿಕಾರಿಗಳು ಕೂಡಲೇ ಪ್ರಾಮಾಣಿಕವಾಗಿ ಸರ್ವೆ ಮಾಡಿ, ಗಡಿ ರೇಖೆ ಗುರುತಿಸಿ, ಸೀಮೆ ಕಲ್ಲುಗಳನ್ನು ಹಾಕಿ ರಕ್ಷಿಸಲು ಕ್ರಮ ಕೈಗೊಳ್ಳಬೇಕೆಂದು ಹೇಳಿದರು.

ಕರವೇ ಉತ್ತರ ಕರ್ನಾಟಕ ಅಧ್ಯಕ್ಷ ಶರಣು ಗದ್ದುಗೆ ಮಾತನಾಡಿ, ರಾಚೋಟಿ ವೀರಣ್ಣ ದೇವಸ್ಥಾನಕ್ಕೆ




ಎಲ್ಲಾ ವರ್ಗದ ಜನರು ದರ್ಶನಕ್ಕೆ ಆಗಮಿಸುತ್ತಾರೆ, ಆದರೆ ಸುತ್ತ-ಮುತ್ತಲೂ ಯಾವುದೇ ಧಾರ್ಮಿಕ ಕಾರ್ಯಕ್ರಮ ಮಾಡಲು ತೊಂದ-ರೆಯಾಗುತ್ತಿದೆ, ಜಿಲ್ಲಾಡಳಿತ ಭಕ್ತರ ಭಾವನೆಗಳನ್ನು ಅರಿತು ಜಮೀನನ್ನು ಸರ್ವೆ ಮಾಡಿ, ದೇವಸ್ಥಾನದಲ್ಲಿ ನಡೆಯುವ ಶ್ರದ್ಧಾ ಭಕ್ತಿಯ ಸಮಾರಂಭಗಳಿಗೆ ಅನುಕೂಲತೆ ಮಾಡಿ ಕೊಡಬೇಕೆಂದು ಒತ್ತಾಯಿಸಿದರು.

ಬಿಜೆಪಿ ಜಿಲ್ಲಾ ಮಾಜಿ ಜಿಲ್ಲಾಧ್ಯಕ್ಷ ಡಾ. ಶರಣಭೂಪಾಲರಡ್ಡಿ ನಾಯ್ಕಲ್ ಹಾಗೂ ಬಿಜೆಪಿ ಯುವ ಮುಖಂಡ ಮಹೇಶರಡ್ಡಿ ಮುದ್ನಾಳ ಮಾತನಾಡಿ, ಯಾವುದೇ ಭಾಗದಲ್ಲಾಗಲೀ ಒಂದು ಒಳ್ಳೇಯ ದೇವಸ್ಥಾನ ಹಾಗೂ ಉತ್ತಮ ಪರಿಸರ ಇದ್ದ-ರೇ ಮಾತ್ರ ಎಲ್ಲರೂ ಧರ್ಮದ ಹಾದಿಯಲ್ಲಿ ಬದುಕು ಸಾಗಿಸಲು ಸಹಾಯಕವಾಗುತ್ತದೆ, ಶ್ರೀ ರಾಚೋಟಿ ವೀರಣ್ಣ ದೇವಸ್ಥಾನ ಜಿಲ್ಲಾ ಕೇಂದ್ರದ ಅಸ್ಮಿತೆಯಾಗಿದೆ, ಅದರ ರಕ್ಷಣೆ ಹಾಗೂ ಅಭಿವೃದ್ಧಿಪಡಿಸುವುದು ಎಲ್ಲರ ಕರ್ತವ್ಯವಾಗಿದೆ, ಜಿಲ್ಲಾಧಿಕಾರಿಗಳು ಸರ್ಕಾರಿ ರಕ್ಷಿಸುವ ನಿಟ್ಟಿನಲ್ಲಿ ಯಾರೇ ತಪ್ಪು ಮಾಡಿದರು, ಕ್ರಮ ಕೈಗೊಂಡು ಭಕ್ತರ ಅನುಕೂಲತೆ ಮಾಡಿಕೊಡಬೇಕೆಂದು ಆಗ್ರಹಿಸಿದರು, ಪ್ರತಿಭಟನೆಕಾರರು ಜಿಲ್ಲಾಧಿಕಾರಿ ಡಾ. ಸುಶೀಲಾ.ಬಿ ಅವರಿಗೆ ಮನವಿ ಪತ್ರ ಸಲ್ಲಿಸಿ ಕ್ರಮಕ್ಕೆ ಮನವಿ ಮಾಡಿದರು, ಅದ-ಕ್ಕೆ ಉತ್ತರಿಸಿದ ಜಿಲ್ಲಾಧಿಕಾರಿಗಳು ಈಗಾಗಲೇ ನಾವೂ ಜಮೀನು ಸರ್ವೆ ಮಾಡಲು ಕಂದಾಯ ಅಧಿಕಾರಿಗಳಿಗೆ ಸೂಚಿಸಿದ್ದೇವೆ, ಬರುವ ದಿನಗಳಲ್ಲಿ ಸಮಸ್ಯೆ ಪರಿಹಾರಕ್ಕೆ ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿದರು, ಈ ಸಂದರ್ಭದಲ್ಲಿ ಜಗದ್ಗುಗಳಾದ ಡಾ. ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಜಿ, ಶ್ರೀ ಮುನೀಂದ್ರ ಶಿವಾಚಾರ್ಯರು ಕಟ್ಟಿಮನಿ ಹಿರೇಮಠ ಹಲಕಟ್ಟಿ, ಶ್ರೀ ಸಿದ್ದಲಿಂಗ ಸ್ವಾಮಿಜಿ ರಾವೂರ, ಕಲ್ಕೇರಿ, ನಾವದಗಿ ಶ್ರೀಗಳು, ವಿಶ್ವ ಸೇವಾ ಮಿಷನ್ ಅಧ್ಯಕ್ಷ ವಿಶ್ವನಾಥ ಸ್ವಾಮಿಜಿ, ಶ್ರೀ ಅಮರೇಶ ಹಿರೇಮಠ, ಸಿದ್ದಯ್ಯಸ್ವಾಮಿ ದಂಡಗುಂಡ ಬಸವಣ್ಣ ದೇವಸ್ಥಾನ, ಮಹಾದೇವಯ್ಯ ಕರದಳ್ಳಿ, ಜಿಲ್ಲಾ ವೀರಶೈವ ಸಮಾಜದ ಅಧ್ಯಕ್ಷ ಚನ್ನಪ್ಪಗೌಡ ಮೋಸಂಬಿ, ನಗರಸಭೆ ಅಧ್ಯಕ್ಷೆ ಲಲಿತಾ ಅನಪೂರ, ಚಂದ್ರಶೇಖರರಡ್ಡಿ ಪರಸರಡ್ಡಿ ನಾಲವಾರ, ಬಸವಂತರಾಯಗೌಡ ಮಾಲಿ ಪಾಟೀಲ್, ಶರಣಪ್ಪ ಗುಳಗಿ, ಹಣಮಂತ ಇಟಗಿ, ಬಿಜೆಪಿ ಜಿಲ್ಲಾ ಯುವ ಘಟಕದ ಅಧ್ಯಕ್ಷ ಶ್ರೀಧರ ಸಾಹುಕಾರ, ಶಿವು, ವಿಶ್ವನಾಥ ಶಿರವಾರ, ಡಾ. ಸಿದ್ದರಾಜರಡ್ಡಿ ನಾಲವಾರ, ಡಾ. ಜ್ಯೋತಿಲತಾ ತಳಬಿಡಿಮಠ, ಅನ್ನಪೂರ್ಣ ಸಿ. ಪಾಟೀಲ್, ಸುರೇಶ ಜಾಕಾ, ದೇವಿಂದ್ರನಾಥ ನಾದ, ಅಡಿವೆಪ್ಪ ಜಾಕಾ, ರಾಜುಸ್ವಾಮಿ, ರಮೇಶ ದೊಡ್ಡಮನಿ ಸೇರಿದಂತೆ ಸಹಸ್ರಾರು ಭಕ್ತರು ಉಪಸ್ಥಿತರಿದ್ದರು.

# ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಂದ

## ಕೆ.ಎಸ್.ಆರ್.ಟಿ.ಸಿ.ಯಲ್ಲಿ ಅನುಕಂಪದ ನೇಮಕಾತಿ ಆದೇಶ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಜು.08 :ಕೆ.ಎಸ್. ಆರ್.ಟಿ.ಸಿ ಸಂಸ್ಥೆಯಲ್ಲಿ ಸುಮಾರು 10 ವರ್ಷಗಳಿಗೂ ಮೇಲ್ಪಟ್ಟು ಅನುಕಂಪದ ಆಧಾರದ ಮೇಲೆ ನೇಮಕಾತಿ ಕೋರಿ ಅರ್ಜಿ ಸಲ್ಲಿಸಿದ್ದ 14 ಮೃತರ ಅವಲಂಬಿತರುಗಳಿಗೆ ಇಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಕಚೇರಿ ಸಹಾಯಕ (ಸ್ವಚ್ಛತೆ) ಹುದ್ದೆಗೆ ನೇಮಕಾತಿ ಆದೇಶ ವಿತರಣೆ ಮಾಡಿದರು. ಕಳೆದ 1 ವರ್ಷದಲ್ಲಿ ಒಟ್ಟಾರೆ 212 ಮೃತರ ಅವಲಂಬಿತರುಗಳಿಗೆ ಅನುಕಂಪದ ಆಧಾರದ ನೇಮಕಾತಿ ಮಾಡಲಾಗಿದೆ. ಕರಾಸಾಪೇದ É(SecurityGuard) 107, ಕಚೇರಿ ಸಹಾಯಕ (ಸ್ವಚ್ಛತೆ) 46, ತಾಂತ್ರಿಕ ಸಹಾಯಕ 37, ಚಾಲಕ / ನಿರ್ವಾಹಕ / ಚಾಲಕ ಕಂ ನಿರ್ವಾಹಕ 22 ಹೀಗೆ ಒಟ್ಟು 212 ಹುದ್ದೆಗಳಿಗೆ ನೀಡಲಾಗಿದ್ದು, ಈ ದಿನ ನೀಡಿರುವ ಆದೇಶ ಸೇರಿ 226 ಅನುಕಂಪದ ನೌಕರಿ ಆದೇಶ ವಿತರಣೆ ಮಾಡಲಾಗಿದೆ. ಕರಾಸಾಪೇದೆ (SecurityGuard) ಹುದ್ದೆಗಳಿಗೆ 50 ಮೃತರ ಅವಲಂಬಿತರುಗಳಿಗೆ ಮುಂದಿನ ಒಂದು ವಾರದಲ್ಲಿ ದೇಹದಾಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆ ನಡೆಸುವ ಮೂಲಕ ಅನುಕಂಪದ ನೇಮಕಾತಿ ನೀಡುವ ಪ್ರಕ್ರಿಯೆ ಜಾರಿಯಲ್ಲಿದೆ. ಇಂದು ಮಾನ್ಯ ಮುಜರಾಯಿ ಮತ್ತು ಸಾರಿಗೆ ಸಚಿವರು 14 ಮೃತರ ಅವಲಂಬಿತರುಗಳಿಗೆ ಕಚೇರಿ ಸಹಾಯಕ (ಸ್ವಚ್ಛತೆ) ಹುದ್ದೆಗೆ ನೇಮಕಾತಿ ಆದೇಶ ವಿತರಣೆ ಮಾಡಿರುತ್ತಾರೆ. ಈ ಸಂಧರ್ಭದಲ್ಲಿ ಮಾನ್ಯ ಉಪಾಧ್ಯಕ್ಷರಾದ ಮೊಹಮ್ಮದ್ ರಿಜ್ವಾನ್ ನವಾಬ್, ವ್ಯವಸ್ಥಾಪಕ ನಿರ್ದೇಶಕರಾದ ಅಕ್ರಂಪಾಷ, ನಿರ್ದೇಶಕರು (ಸಿ ಮತ್ತು ಜಾ) ಡಾ. ನಂದಿನಿದೇವಿಕೆ, ಹಾಗೂ ನಿರ್ದೇಶಕರು (ಮಾಹಿತಿ ತಂತ್ರಜ್ಞಾನ) ಇಬ್ರಾಹಿಂ ಮೈಗೂರ್ ಅವರು ಉಪಸ್ಥಿತರಿದ್ದರು.

# ಡಾ.ಆಕಾಶ ಬಾಗಲಕೋಟೆ ಜಿಪಂ ನೂತನ ಸಿಇಓ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.8-ಬಾಗಲಕೋಟೆ ಜಿಲ್ಲಾ ಪಂಚಾಯತ ನೂತನ ಸಿಇಓ ಆಗಿ ಡಾ.ಆಕಾಶ ಎಸ್. ನೇಮಕಗೊಂಡಿದ್ದಾರೆ. ಈತನಕ ಸಿಇಓ ಆಗಿದ್ದ ಶಶಿಧರ ಕುರೇರ ಬೆಂಗಳೂರಿನ ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆ

(ಕೆಯುಐಡಿಎಫ್ ಸಿ)ಯ ಜಂಟಿ ಮ್ಯಾನೇಜಿಂಗ್ ಡೈರೆಕ್ಟರ್ ಹುದ್ದೆಗೆ ವರ್ಗಾವಣೆಗೊಂಡಿದ್ದಾರೆ.

# ಜಿಲ್ಲಾಡಳಿತ ಭವನದ ಕಚೇರಿಗಳ ಸ್ಥಳಾಂತರ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.08 : ಕರ್ನಾಟಕ ಸರ್ಕಾರದ ಆದೇಶದಂತೆ ಜಿಲ್ಲಾಧಿಕಾರಿಗಳ ಕಾರ್ಯಾಲಯ ಕಟ್ಟಡವು ಶಿಥಿಲಗೊಂಡಿರುವ ಹಿನ್ನೆಲೆಯಲ್ಲಿ ಹೊಸ ಪ್ರಜಾ ಸೌಧ ನಿರ್ಮಾಣ ಕಾರ್ಯವು ಪ್ರಾರಂಭಗೊಳ್ಳಿಸಬೇಕಾಗಿರುವುದರಿಂದ, ಸದರಿ ಸಂಕೀರ್ಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳನ್ನು ಪ್ರಜಾ ಸೌಧ ಕಟ್ಟಡ ನಿರ್ಮಾಣ ಕಾರ್ಯ ಮುಕ್ತಾಯವಾಗುವವರೆಗೆ ಜಿಲ್ಲಾಧಿಕಾರಿಗಳ ಕಛೇರಿ ಕಟ್ಟಡದಲ್ಲಿರುವ ವಿವಿಧ ಇಲಾಖೆಗಳ ಕಛೇರಿಗಳನ್ನು ಜುಲೈ.10 ರಂದು ಈ ಕೆಳಕಂಡ ಸ್ಥಳಗಳಲ್ಲಿ ಸ್ಥಳಾಂತರಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸ್ಥಳಾಂತರಗೊಣಂಡಿರುವ ಕಚೇರಿಗಳ ವಿವರ: ಬೀದರ ಜಿಲ್ಲಾಧಿಕಾರಿಗಳ ಕಛೇರಿಯನ್ನು ಗಾಂಧಿ ಭವನ ಚಿಕ್ಕಪೇಟ ಬೀದರ ಇಲ್ಲಿಗೆ ಸ್ಥಳಾಂತರಿಸಲಾಗಿದೆ.

ಸಹಾಯಕ ಆಯುಕ್ತರ ಕಛೇರಿಯನ್ನು -ಕೇಂದ್ರ ಗ್ರಂಥಾಲಯ ಕಟ್ಟಡ ಮೊದಲನೇ ಮಹಡಿ ಜನವಾಡ ರಸ್ತೆ ಬೀದರ, ವಿಶೇಷ ಭೂಸ್ವಾಧಿನಾಧಿಕಾರಿಗಳ ಕಛೇರಿಯನ್ನು-ಉಪ ನಿರ್ದೇಶಕರು ರೇಷ್ಮೆ ಇಲಾಖೆ ಕಟ್ಟಡ ಮೊದಲನೇ ಮಹಡಿ ಬೀದರ, ಉಪ ನೋಂದಣಾಧಿಕಾರಿಗಳ ಕಛೇರಿಯನ್ನು-ವಮೌಲಾನಾ ಆಜಾದ್ ಭವನ ಚಿಕ್ಕಪೇಟ ಬೀದರ, ಉಪನಿರ್ದೇಶಕರು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯನ್ನು-ಮೌಲಾನಾ ಆಜಾದ್ ಭವನ ಚಿಕ್ಕಪೇಟ ಬೀದರ, ಉಪನಿರ್ದೇಶಕರು ಭೂ ದಾಖಲೆಗಳ ಇಲಾಖೆಯನ್ನು-ಮೌಲಾನಾ ಆಜಾದ್ ಭವನ ಚಿಕ್ಕಪೇಟ ಬೀದರ, ಸಹಾಯಕ ನಿರ್ದೇಶಕರು ಪಿಂಚಣಿ, ಸಣ್ಣ ಉಳಿತಾಯ ಮತ್ತು ಆಸ್ತಿ ಋಣ ನಿರ್ವಹಣೆ

ಇಲಾಖೆಯನ್ನು-ಮೌಲಾನಾ ಆಜಾದ್ ಭವನ ಚಿಕ್ಕಪೇಟ ಬೀದರ, ಜಿಲ್ಲಾ ವಕ್ಫ ಸಲಹಾ ಸಮಿತಿ ಬೀದರ ಕಛೇರಿಯನ್ನು-ವಮೌಲಾನಾ ಆಜಾದ್ ಭವನ ಚಿಕ್ಕಪೇಟ ಬೀದರ, ಕಾರ್ಯದರ್ಶಿಗಳು, ಬೀದರ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿದೋದ್ದೇಶ, ಸಹಕಾರ ಸಂಘ ನಿಯಮಿತ, ಜಿಲ್ಲಾಧಿಕಾರಿಗಳ ಕಛೇರಿಯನ್ನು-ಮೌಲಾನಾ ಆಜಾದ್ ಭವನ ಚಿಕ್ಕಪೇಟ ಬೀದರ, ಪ್ರವಾಸೋದ್ಯಮ ಇಲಾಖೆಯನ್ನು-ಕನ್ನಡ ಭವನ ಚಿಕ್ಕಪೇಟ ಬೀದರ, ಯೋಜನಾ ನಿರ್ದೇಶಕರು ನಗರಾಭಿವೃದ್ಧಿ ಕೋಶ ಕಛೇರಿಯನ್ನು-ಬೊಮ್ಮಗೊಂಡೇಶ್ವರ ಸಮುದಾಯ (ಗೊಂಡ) ಭವನ ಚಿಕ್ಕಪೇಟ ಬೀದರ ಇಲ್ಲಿಗೆ ಸ್ಥಳಾಂತರಿಸಲಾಗಿದೆ.

# ವಿಜೃಂಭಣೆಯ ಖಾಸ್ಗತ ಶಿವಯೋಗಿಗಳ ಮಹಾ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಜು.8: ಪಟ್ಟಣದ ಐತಿಹಾಸಿಕ ಶ್ರೀ ಖಾಸ್ಗತೇಶ್ವರ ಮಹಾಮಠದ ಶ್ರೀ ಖಾಸ್ಗತ ಶಿವಯೋಗಿಗಳ ಜಾತ್ರಾಮಹೋತ್ಸವದ ಪ್ರಯುಕ್ತ ಮಂಗಳವಾರ ಮಹಾ ರಥೋತ್ಸವ ಲಕ್ಷಾಂತರ ಭಕ್ತ ಸಮೂಹದ ಮಧ್ಯೆ ಶ್ರದ್ಧಾ ಭಕ್ತಿ ಹಾಗೂ ವಿಜೃಂಭಣೆಯಿಂದ ಜರುಗಿ-ತು. ಸುರಿಯುವ ಜಿಟಿ ಮಳೆಯ ನಡುವೆಯೂ ಭಕ್ತಾದಿಗಳು ಉತ್ಸಾಹದಿಂದ ಮಹಾರಥೋತ್ಸವದಲ್ಲಿ ಭಾಗವಹಿಸಿದರು. ಜಾತ್ರಾ ಮಹಾ ರಥೋತ್ಸವದ ಅಂಗವಾಗಿ ಬೆಳಗ್ಗೆ 5:00 ಘಂಟೆಯಿಂದ ಶ್ರೀ ಖಾಸ್ಗತೇಶ್ವರ ಮಠದ ಕರ್ತೃ ಗದ್ದುಗೆಗೆ ಮಹಾಭಿಷೇಕ, ಪುಷ್ಪಾರ್ಚನೆ ಹಾಗೂ ನಾನಾ ಧಾರ್ಮಿಕ ಪೂಜಾ ವಿಧಿ ವಿಧಾನಗಳು ಹಾಗೂ ಮಹಾ ಮಂಗಳಾರತಿ ಕಾರ್ಯಕ್ರಮವನ್ನು ಶ್ರೀ ಮಠದ ವೇದಮೂರ್ತಿ ವಿಶ್ವನಾಥ ವಿರಕ್ತಮಠ ಶಾಸ್ತ್ರೋಕ್ತವಾಗಿ ನೆರವೇರಿಸಿದರು. ಮಹಾ ರಥೋತ್ಸವದ ಪೂರ್ವ ಮುಂಜಾನೆ ಎಂಟು ಗಂಟೆಗೆ ಐತಿಹಾಸಿಕ ಪಾರಂಪರಿಕ ಹಿನ್ನೆಲೆ ಹೊಂದಿದ ಖಾಸ್ಗತ ಮಹಾಶಿವಯೋಗಿಗಳ ಗಂಗಸ್ಥಳ ಹಾಗೂ ಲಿಂಗೈಕ್ಯ ಶ್ರೀಗಳ ಮೂರ್ತಿ ಹಾಗೂ ಭಾವಚಿತ್ರದ ಭವ್ಯ ಮೆರವಣಿಗೆ ಕಾರ್ಯಕ್ರಮ ಶ್ರೀ ಮಠದ ಪರಮಪೂಜ್ಯ ಸಿದ್ದಲಿಂಗ ದೇವರ ದಿವ್ಯ ಸಾನಿಧ್ಯದಲ್ಲಿ ಜರುಗಿತು. ಮೆರುಗು ತಂದ ಆನೆ ಅಂಬಾರಿ ಕಾರ್ಯಕ್ರಮ: ಆನೆ ಅಂಬಾರಿ ಮೆರವಣಿಗೆ ಉದ್ದಕ್ಕೂ ವಿವಿಧ ವಾದ್ಯ ಮೇಳಗಳು, ಕರಡಿಮಜಲು, ಗೊಂಬೆ ಕುಣಿತ, ಸನಾದಿಯನಾದ, ಹನುಮಾನ ವೇಷದಾರಿ ಕುಣಿತ ಸಹಿತ ವಿವಿಧ ಕಲಾತಂಡಗಳು ಭಾಗವಹಿಸಿದ್ದವು. ಮೆರವಣಿಗೆಯಲ್ಲಿ ಅನೇಕ ಜನರು ಮನೆ ಹಾಗೂ ಅಂಗಡಿಗಳ ಮೇಲಿಂದ ಆಸ್ಕತರ ಬೆಳ್ಳಿ ಮೂರ್ತಿ ಹಾಗೂ ವಿರಕ್ತ ಶ್ರೀಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಅನ್ನಪ್ರಸಾದ ವ್ಯವಸ್ಥೆ: ಮಹಾ ರಥೋತ್ಸವ ಹಾಗೂ ಮೆರವಣಿಗೆಯಲ್ಲಿ ಪಟ್ಟಣದ ರಾಜವಾಡೆ ಕಿಂಗ್ಸ್ ಗೆಳೆಯರ ಬಳಗ, ಅನುಗ್ರಹ ಕಣ್ಣಿನ ಆಸ್ಪತ್ರೆ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ ಅಭಿಮಾನಿ ಬಳಗ, ಭಗತ್ ಸಿಂಗ್ ಗೆಳೆಯರ ಬಳಗ, ನಮ್ಮ ಗೆಳೆಯರ ಬಳಗ, ಸಜ್ಜನ ಸಹೃದಯ ಗೆಳೆಯರ ಬಳಗ, ಶ್ರೀ ಮಲ್ಲಿಕಾರ್ಜುನ ಯುವಕ ಹಾಗೂ ಹಲವಾರು ಯುವಕರ ಸಂಘದವರು ದಾರಿ ಉದ್ದಕ್ಕೂ ಪೂರಿ ಭಾಜಿ, ಮಾದಲಿ ಪಲಾವ್, ರೈಸ್ ಬಾತ್, ಶೀರಾ, ಕೇಸರಿಬಾತ್, ಬಜ್ಜಿ ಚಟ್ನಿ ಹೀಗೆ ಹತ್ತು ಹಲವು ಬಗೆಯ ಖಾದ್ಯ ಪದಾರ್ಥಗಳನ್ನು ಸಿದ್ಧಪಡಿಸಿ ಭಕ್ತಿ ಭಾವದಿಂದ ಪ್ರಸಾದ ಸೇವೆಯನ್ನು ಮಾಡಿದರು. ಮಹಾ ರಥೋತ್ಸವದಲ್ಲಿ ಮುಂಬೈ ಪುಣೆ ಹೈದರಾಬಾದ್ ಹುಬ್ಬಳ್ಳಿ ಧಾರವಾಡ ಬೆಂಗಳೂರು ಕಲಬುರಗಿ ಸೇರಿದಂತೆ ವಿವಿಧ ನಗರಗಳಿಂದ ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿದ ಸದ್ಭಕ್ತ ಸಮೂಹ ಭಾಗವಹಿಸಿತ್ತು. ಮೆರವಣಿಗೆಯಲ್ಲಿ ಖಾಸ್ಗತೇಶ್ವರ ಮಠದ ಉಸ್ತುವಾರಿ ಮುರುಗೇಶ ವಿರಕ್ತಮಠ, ವಿಶ್ವನಾಥ ವಿರಕ್ತಮಠ ಹಾಗೂ ಹಲವಾರು ಗಣ್ಯಮಾನ್ಯರು ಪಾಲ್ಗೊಂಡಿದ್ದರು. ಪೊಲೀಸ್ ಬಂದೋಬಸ್ತ್: ಬೃಹತ್ ಮೆರವಣಿಗೆ ಹಾಗೂ ಮಹಾರಥೋತ್ಸವದಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪಿಎ??? ರಾಮನಗೌಡ ಸಂಕನಾಳ, ಆರ್. ಎಸ್.ಭಂಗಿ ತಮ್ಮ ಸಿಬ್ಬಂದಿಯೊಂದಿಗೆ ಸೂಕ್ತ ಬಂದೋಬಸ್ತ್ ಏರ್ಪಡಿಸಿದ್ದರು.

# ಇಂದು ಭಾರತ್ ಬಂದ್

ನವದೆಹಲಿ:ಜು.8: ಕೇಂದ್ರದ ಕಾರ್ಮಿಕ-ರೈತ ವಿರೋಧಿ ಕ್ರಮಗಳು ಹಾಗೂ ಕಾರ್ಪೊರೇಟ್ ಪರ ನಿಲುವು ಖಂಡಿಸಿ ಬುಧವಾರ ಭಾರತ್ ಬಂದ್‌ಗೆ 10ಕ್ಕೂ ಹೆಚ್ಚು ಸಂಘಟನೆಗಳು ಕರೆ ನೀಡಿವೆ.

ಬ್ಯಾಂಕಿಂಗ್, ಇನ್ಶುರೆನ್ಸ್, ಪೋಸ್ಟ್, ಗಣಿ, ಹೆದ್ದಾರಿ ಕಾರ್ಮಿಕರು ಸೇರಿದಂತೆ 25 ಕೋಟಿಗೂ ಅಧಿಕ ಸಂಘಟಿತ ಹಾಗೂ ಅಸಂಘಟಿತ ಕಾರ್ಮಿಕರು ಬಂದ್‌ನಲ್ಲಿ ಭಾಗಿಯಾಗುವ ಸಾಧ್ಯತೆ ಇದೆ. ಆದರೆ, ರಾಜ್ಯಕ್ಕೆ ಭಾರತ್ ಬಂದ್ ಬಿಸಿ ತಟ್ಟುವ ಸಾಧ್ಯತೆ ಕಡಿಮೆ ಇದೆ. ರಾಜ್ಯದಲ್ಲಿ ಶಾಲಾ ಕಾಲೇಜುಗಳು, ಮೆಟ್ರೋ, ಬಸ್ ಸಂಚಾರ, ಖಾಸಗಿ ಕಂಪನಿಗಳು ಇರಲಿವೆ. ಆದರೆ, ಬ್ಯಾಂಕಿಂಗ್ ಸೇವೆಯಲ್ಲಿ ಸ್ವಲ್ಪ ವ್ಯತ್ಯಯವಾಗುವ ಸಾಧ್ಯತೆ ಇದೆ. ಕಳೆದ ವರ್ಷ ಕಾರ್ಮಿಕ ಸಚಿವ ಮನ್ಸುಖ್ ಮಾಂಡವಿಯಾ




ಅವರಿಗೆ ವಿವರವಾದ 17 ಅಂಶಗಳ ಬೇಡಿಕೆ ಪಟ್ಟಿಯನ್ನು ಸಲ್ಲಿಸಿದ್ದರೂ, ಸರ್ಕಾರದಿಂದ ಯಾವುದೇ ಪ್ರತಿಕ್ರಿಯೆ ಕಂಡುಬಂದಿಲ್ಲ ಎಂದು ಒಕ್ಕೂಟಗಳು ಹೇಳುತ್ತವೆ. ಸರ್ಕಾರ ದೇಶದ ಕಲ್ಯಾಣ ರಾಜ್ಯ ಸ್ಥಾನಮಾನವನ್ನು ಕೈಬಿಟ್ಟಿದೆ. ಅದು ವಿದೇಶಿ ಮತ್ತು ಭಾರತೀಯ ಕಾರ್ಪೊರೇಟ್‌ಗಳ ಹಿತಾಸಕ್ತಿಗಾಗಿ ಕೆಲಸ ಮಾಡುತ್ತಿದೆ. ಇದು ತೀವ್ರವಾಗಿ ಅನುಸರಿಸುತ್ತಿರುವ ನೀತಿಗಳಿಂದ ಸ್ಪಷ್ಟವಾಗಿದೆ ಎಂದು ಯೂನಿಯನ್ ಫೋರಂ ಹೇಳಿಕೆಯಲ್ಲಿ ತಿಳಿಸಿದೆ.

ಕರ್ನಾಟಕದಲ್ಲಿ ಭಾರತ ಬಂದ್ ಎಫೆಕ್ಟ್ ಇಲ್ಲದಿದ್ದರೂ ಉತ್ತರ ಭಾರತದ ಹಲವೆಡೆ ಬಂದ್ ಆಗುವ ಸಾಧ್ಯತೆ ಇದೆ. ಇನ್ನು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಾಳೆ ಕಾರ್ಮಿಕ ಸಂಘಟನೆಗಳಿಂದ ಬೃಹತ್ ಪ್ರತಿಭಟನೆ ನಡೆಯಲಿದೆ.


ಕರ್ನಾಟಕ ಸರ್ಕಾರ

**ಕಾರ್ಯಾಲಯ ಕಾರ್ಯನಿರ್ವಾಹಕ ಅಭಿಯಂತರರು,**
**ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೀದರ.**

ಸಂ: ಕಾನಿಅ/ಪಂರಾಇಂವಿ/ಬೀದರ/ತಾಶಾ-3/2025-26/645 ದಿನಾಂಕ: 05-07-2025

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಕರ್ನಾಟಕ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ ರಾಜ್ ಇಂಜಿನಿಯರಿಂಗ ವಿಭಾಗ, ಬೀದರ ಇವರಿಂದ ಕೆ.ಕೆ.ಆರ್.ಡಿ.ಬಿ. ಯೋಜನೆಯಡಿ ಮಂಜೂರಾದ 03 ಕಾಮಗಾರಿಗಳಿಗೆ (ಕನಿಷ್ಟ ರೂ. 41,79,875.05. (Rupees Forty One Lakhs Seventy Nine Thousand Eight Hundred Seventy Five and paise five only) ಮತ್ತು ಗರಿಷ್ಟ 42,17,988.98 ಮೊತ್ತದ (Rupees Forty Two Lakhs Seventeen Thousand Nine Hundred Eighty Eight and paise ninety eight only) ಗುತ್ತಿಗೆದಾರರನ್ನು ನೇಮಿಸಲು, ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ಕೆ.ಟಿ.ಪಿ.ಪಿ. ಕಾಯ್ದೆ ಕೆ.ಡಬ್ಲ್ಯೂ.-02 ನಿಬಂಧನೆಗೊಳಪಟ್ಟು ಕೆ.ಪಿ.ಪಿ.ಪಿ.ನಲ್ಲಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಅಂತರಜಾಲ ತಾಣ https://kppp.karnataka.gov.inನ್ನು ಸಂಪರ್ಕಿಸಬಹುದು

**ಟೆಂಡರ್ ಪ್ರಕ್ರಿಯೆ ದಿನಾಂಕಗಳು:** 1) ಕೆ.ಪಿ.ಪಿ.ಪಿ.ನಲ್ಲಿ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : **07.07.2025 ರಿಂದ 21.07.2025ರ 16:00 ಗಂಟೆವರೆಗೆ** ,2) ತಾಂತ್ರಿಕ ಬಿಡ್ ತೆರೆಯುವ ದಿನಾಂಕ **22.07.2025 ರಂದು 16:00 ಗಂಟೆ ನಂತರ,** 3) ಅರ್ಥಿಕ ಬಿಡ್ ತೆರೆಯುವ ದಿನಾಂಕ **24.07.2025 ರಂದು 11:00 ಗಂಟೆ ನಂತರ**

**ಸಹಿ/-ಕಾರ್ಯನಿರ್ವಾಹಕ ಅಭಿಯಂತರರು,**
**ಪಂ.ರಾ.ಇಂ. ವಿಭಾಗ, ಬೀದರ.**

ವಾ.ಸಾ.ಸಂ.ಇ/ಬೀದರ/93/ಕೆ.ಎಸ್.ಎಂ.ಸಿ.&ಎ/2025-26


# ರಾಯಚೂರ ಜಿಲ್ಲಾಧಿಕಾರಿ ನಿತೀಶ್ ಕೆ ಅವರ ಉತ್ಸಾಹ, ಕಠಿಣ ಪರಿಶ್ರಮಕ್ಕಾಗಿ ರಾಜ್ಯ ಸರ್ಕಾರದಿಂದ ಪ್ರಶಂಸನಾ ಪತ್ರ

ರಾಯಚೂರು ಜು 08 : ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ದಕ್ಷ ಆಡಳಿತ ನೀಡುತ್ತಿರುವುದಕ್ಕೆ ರಾಯಚೂರ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರಿಗೆ ರಾಜ್ಯ ಸರ್ಕಾರವು ಪ್ರಶಂಸನಾ ಪತ್ರ ನೀಡಿ ಅಭಿನಂದಿಸಿದೆ.

ರಾಯಚೂರ ಜಿಲ್ಲೆಯಲ್ಲಿ ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆಯಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಿರುವ ವಿಷಯವನ್ನು ಮಾನ್ಯ ಮುಖ್ಯಮಂತ್ರಿಗಳು ಮೇ ಮಾಹೆಯಲ್ಲಿ ನಡೆಸಿದ ಸಭೆಯಲ್ಲಿ ಗಮನಿಸಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಕಾರ್ಯವೈಖರಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಸಾಮಾಜಿಕ ನೆರವು ಯೋಜನೆಯ ಪ್ರಗತಿ ಸಾಧನೆಗಾಗಿ ಪ್ರಶಂಸನಾ ಪತ್ರವನ್ನು ಹೊರಡಿಸಲು ಸಹ ಮುಖ್ಯಮಂತ್ರಿಗಳು ಸೂಚನೆ ನೀಡಿದ್ದರು.

ರಾಯಚೂರ ಜಿಲ್ಲೆಯಲ್ಲಿ ಸಾಮಾಜಿಕ ನೆರವು ಯೋಜನೆಯು ಪ್ರಗತಿ ಸಾಧಿಸಲು ಇಲಾಖಾಧಿಕಾರಿಗಳು



ಹಾಗೂ ಇಲಾಖೆಯ ಎಲ್ಲಾ ಸಿಬ್ಬಂದಿ ಅಚಲವಾದ ಬದ್ಧತೆ, ನಿರಂತರ ಶ್ರಮ ಹಾಗೂ ಸಮನ್ವಯದ ಕಾರ್ಯಪದ್ಧತಿಗೆ ಶ್ಲಾಘನೆ ಸಲ್ಲಲೇಬೇಕು. ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ತಂಡದ ಈ ಉತ್ಸಾಹ ಹಾಗೂ ಕಠಿಣ ಪರಿಶ್ರಮವೇ ಇಂತಹ ಯಶಸ್ಸಿಗೆ ನಾಂದಿಯಾಗಿದೆ.

ರಾಯಚೂರ ಜಿಲ್ಲೆಯ ಸಮಗ್ರ ಅಭಿವೃದ್ಧಿಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಭವಿಷ್ಯದಲ್ಲಿಯೂ ಇಂತಹುದೇ ಉತ್ಸಾಹದಿಂದ ಕಾರ್ಯನಿರ್ವಹಣೆಯನ್ನು ನಿರೀಕ್ಷಿಸುತ್ತೇವೆ. ಪ್ರಗತಿಪಥದಲ್ಲಿ ರಾಯಚೂರ ಜಿಲ್ಲೆ ಸಾಧನೆ ಇತರೆ ಜಿಲ್ಲೆಗಳಿಗೆ ಪ್ರೇರಣೆಯಾಗಿದೆ ಎಂದು ಜಿಲ್ಲಾಧಿಕಾರಿಗಳ

ಕಾರ್ಯದಕ್ಷತೆಗೆ ಮೆಚ್ಚುಗೆ ವ್ಯಕ್ತಪಡಿಸಿರುವ ರಾಜ್ಯ ಸರಕಾರದ ಮುಖ್ಯಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು, ಈ ವಿಶೇಷ ಸಾಧನೆಗಾಗಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರಿಗೆ ಹಾಗೂ ರಾಯಚೂರ ಜಿಲ್ಲೆಯ ಎಲ್ಲ ಅಧಿಕಾರಿ ಸಿಬ್ಬಂದಿಗೆ ಹೃತ್ಪೂರ್ವಕ ಅಭಿನಂದನೆ ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.